01 September 2026 Tuesday
SINCE 1957
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ
ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಜೀವನದಲ್ಲಿ ಬದುಕಲು ಹತ್ತಾರು ಹಾದಿಗಳಿವೆ, ಆದರೆ ನೆಮ್ಮದಿ ತರುವಂತಹ ಹಾದಿಯೇ ಅತ್ಯುತ್ತಮ!

-ಸ್ನೇಹಾ ಆನಂದ್

info.varthaman@gmail.com



ಸ್ಥಳೀಯ ಸಂಸ್ಥೆಗಳ ಆಸ್ತಿಗಳ ಒತ್ತುವರಿ ತೆರವಿಗೆ ಅಭಿಯಾನ — ಪುಟ ಸಂ. 2



ಎಚ್.ಡಿ.ಕೋಟೆಯಲ್ಲಿ ಸುರಕ್ಷತೆಯಿಲ್ಲದ ಸಾರಿಗೆ ಬಸ್ಸುಗಳು — ಪುಟ ಸಂ. 4



ಕಾಂಗ್ರೆಸ್ ಜನವಿರೋಧಿ ಧೋರಣೆ ತಿಳಿಸಲು ಬಳ್ಳಾರಿ ಚಲೋ: ರಘು — ಪುಟ ಸಂ. 4

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 258 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

## ತ.ನಾಡು ಕ್ಯಾತೆಗೆ ಸುಪ್ರೀಂ ಕಿಡಿ

### ನಿಮಗೆ ನೀರು ಬರುತ್ತಿಲ್ಲವೇ? ಸುಪ್ರೀಂ ಪ್ರಶ್ನೆ

### ಹೆಚ್ಚುವರಿ ನೀರು ಬೇಕಿದ್ದರೆ ಪ್ರಾಧಿಕಾರಕ್ಕೆ ಹೋಗಿ



**ನವದೆಹಲಿ:** ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ (ಸಿಡಬ್ಲ್ಯೂಎಂಎ) ಆದೇಶದಂತೆ ಕರ್ನಾಟಕ ನೀರು ಹರಿಸುತ್ತಿದೆ. ಆದರೂ ಮತ್ತೇನು ನಿಮ್ಮ ಸಮಸ್ಯೆ ಎಂದು ತಮಿಳುನಾಡಿನ ಕ್ಯಾತೆಗೆ ಸುಪ್ರೀಂ ಕೋರ್ಟ್ ಪ್ರಶ್ನಿಸಿದೆ.

ಸುಪ್ರೀಂ ಕೋರ್ಟ್ ನ್ಯಾ. ವಿಕ್ರಮನಾಥ್ ನೇತೃತ್ವದ ಪೀಠದಲ್ಲಿ ಸೋಮವಾರ ಕಾವೇರಿ ಅರ್ಜಿ ವಿಚಾರಣೆ ನಡೆಯಿತು. ಕಾವೇರಿ ನೀರು ಹರಿಸುವ ವಿಚಾರದಲ್ಲಿ ತಮಿಳುನಾಡು ವಾದಕ್ಕೆ ಸುಪ್ರೀಂ ಕೋರ್ಟ್ ಆಕ್ಷೇಪ ವ್ಯಕ್ತಪಡಿಸಿತು.

ಈ ವೇಳೆ ವಾದ ಮಂಡಿಸಿದ ಕರ್ನಾಟಕ, ಸಿಡಬ್ಲ್ಯೂಎಂಎ ಆದೇಶದ ಪ್ರಕಾರ ತಮಿಳುನಾಡಿಗೆ ನೀರು ಹರಿಸಲಾಗುತ್ತಿದೆ. ಅಗತ್ಯಕ್ಕಿಂತ ಹೆಚ್ಚು ನೀರು ಹರಿಯುತ್ತಿದೆ. ಸಿಡಬ್ಲ್ಯೂಎಂಎ ನಿಗದಿಪಡಿಸಿದ್ದಕ್ಕಿಂತ ಅಧಿಕ ನೀರು ಹರಿದಿದೆ. ಕರ್ನಾಟಕದಲ್ಲಿ ಬರದ ಸ್ಥಿತಿ ಇದೆ. ಕಾವೇರಿ ಜಲಾನಯನ ಪ್ರದೇಶದ ಹಲವು ತಾಲ್ಲೂಕುಗಳನ್ನು ಬರ ಪೀಡಿತ ಎಂದು ಘೋಷಿಸಿದೆ ಎಂದು ತಿಳಿಸಿತು.

ತಮಿಳುನಾಡು ವಾದ ಮಂಡಿಸಿ, ಕಾವೇರಿ ಜಲಾನಯನ ಪ್ರದೇಶಗಳಲ್ಲಿ ಜಲಾಶಯಗಳು ತುಂಬುತ್ತಿವೆ. ಆದರೂ ನಮಗೆ ಸಮರ್ಪಕವಾಗಿ ನೀರು ಹರಿಸುತ್ತಿಲ್ಲ. 35 ಟಿಎಂಸಿ ನೀರು ನಮಗೆ ಬರಬೇಕಿತ್ತು. ಇದುವರೆಗೆ ಅಷ್ಟು ನೀರು ಹರಿಸಿಲ್ಲ. ಬಾಕಿ ಉಳಿಸಿಕೊಂಡ ನೀರು ಹರಿಸಬೇಕು ಎಂದು ಹೇಳಿತು.

ತಮಿಳುನಾಡು ವಾದಕ್ಕೆ ಸುಪ್ರೀಂ ಪುಟ 2ಕ್ಕೆ

### ತ.ನಾಡಿಗೆ ಹೇಮೆಯಿಂದ ಹೆಚ್ಚು ನೀರು ಬಿಡುಗಡೆ

**ಬೆಂಗಳೂರು:** ತಮಿಳುನಾಡಿಗೆ ಕಾವೇರಿ ಕಣಿವೆಯಿಂದ ನಿರಂತರ ನೀರು ಬಿಡುಗಡೆಗೆ ನಡುವೆಯೇ ಇನ್ನೂ ಭರ್ತಿಯಾಗದ ಹೇಮಾವತಿ ಜಲಾಶಯದಿಂದ ಸಹ ಹೆಚ್ಚಿನ ನೀರು ಹರಿಸಲಾಗುತ್ತಿದೆ.

ಇದುವರೆಗೆ ಕಬಿನಿ ಹಾಗೂ ಕೃಷ್ಣರಾಜ ಸಾಗರ ಜಲಾಶಯದಿಂದ ಒಳಹರಿವಿಗಿಂತ ಹೆಚ್ಚು ನೀರನ್ನು ಹೊರ ಬಿಡಲಾಗುತ್ತಿತ್ತು. ಈಗ ಹೇಮಾವತಿ ಜಲಾಶಯದಿಂದ ಹೊರ ಹರಿವಿನ ಪ್ರಮಾಣವನ್ನು ಸೋಮವಾರ ಬೆಳಿಗ್ಗೆಯಿಂದ ಹೆಚ್ಚಿಸಲಾಗಿದೆ. ಹೆಚ್ಚಿನ ನೀರು ನದಿ ಮೂಲಕ ತಮಿಳುನಾಡಿಗೆ ಹರಿದು ಹೋಗುತ್ತಿದೆ.

ಜಲಸಂಪನ್ಮೂಲ ಇಲಾಖೆ ಬಿಡುಗಡೆ ಮಾಡಿರುವ ಮಾಹಿತಿ ಪ್ರಕಾರ, ಹೇಮಾವತಿ ಜಲಾಶಯಕ್ಕೆ ಈಗ 2727 ಕ್ಯುಸೆಕ್ ಒಳ ಹರಿವಿದೆ. ಆದರೆ, ಹೊರ ಹರಿವಿನ ಪ್ರಮಾಣವು 7275 ಕ್ಯುಸೆಕ್ ಇದೆ. ಭಾನುವಾರ 5500 ಕ್ಯುಸೆಕ್ ಹೊರ ಬಿಡಲಾಗುತ್ತಿತ್ತು. ಪುಟ 2ಕ್ಕೆ

## ಬಿಜೆಪಿ ವಿರುದ್ಧವೇ ಎಚ್‌ಡಿಕೆ ಹೋರಾಟ

### ಕುಮಾರಸ್ವಾಮಿ ಹೇಳಿಕೆಗೆ ಸಿಎಂ ಡಿ.ಕೆ.ಶಿವಕುಮಾರ್ ಲೇವಡಿ



**ಬೆಂಗಳೂರು:** ರಾಜ್ಯದಲ್ಲಿ ಬಿಜೆಪಿ ಇರಬಾರದು ಎಂದು ಕುಮಾರಸ್ವಾಮಿ ಹೋರಾಟ ಮಾಡುತ್ತಿದ್ದಾರೆಂದು ಸಿಎಂ ಡಿ.ಕೆ.ಶಿವಕುಮಾರ್ ಲೇವಡಿ ಮಾಡಿದರು.

ಮಾಧ್ಯಮಗಳ ಪ್ರಶ್ನೆಗಳಿಗೆ ಸೋಮವಾರ ಶಿವಕುಮಾರ್ ಪ್ರತಿಕ್ರಿಯೆ ನೀಡಿದರು. ಕೆಪಿಎಸ್‌ಸಿ ಹಗರಣ ಕುರಿತ ಪ್ರಶ್ನೆಗೆ ಉತ್ತರಿಸಿದ ಅವರು, ಕುಮಾರಸ್ವಾಮಿ ನಮ್ಮ ವಿರುದ್ಧ ಹೋರಾಟ ಮಾಡುತ್ತಿಲ್ಲ. ಬಿಜೆಪಿ ವಿರುದ್ಧ ಹೋರಾಟ ಮಾಡುತ್ತಿದ್ದಾರೆ. ಅಲ್ಲೋಲ ಕಲ್ಲೋಲ ಆಗುವಂತಹ ದಾಖಲೆ ಬಿಡುಗಡೆ ಪುಟ 2ಕ್ಕೆ

## ಸಿಎಂ, ಡಿಸಿಎಂ ಪ್ರತ್ಯೇಕ ಬರ ಪರಿಶೀಲನೆ ಪ್ರವಾಸ

**ಬೆಂಗಳೂರು:** ರಾಜ್ಯದಲ್ಲಿ ಬರದ ಪರಿಸ್ಥಿತಿ ತೀವ್ರಗೊಂಡ ನಡುವೆಯೇ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಉಪಮುಖ್ಯಮಂತ್ರಿ ಜಿ.ಪರಮೇಶ್ವರ್ ಅವರು ಪ್ರತ್ಯೇಕವಾಗಿ ಸೆ.1ರಿಂದ ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಡಿ.ಕೆ.ಶಿವಕುಮಾರ್ ಅವರು ಮಂಗಳವಾರ ಬೆಳಿಗ್ಗೆ 10ಕ್ಕೆ ಬೆಂಗಳೂರಿನಿಂದ ವಿಶೇಷ ವಿಮಾನದಲ್ಲಿ ಹೊರಟು ಹುಬ್ಬಳ್ಳಿಗೆ ತಲುಪುವರು. ಅಲ್ಲಿಂದ ಹೆಲಿಕಾಪ್ಟರ್ ಪುಟ 2ಕ್ಕೆ



## ಮಣ್ಣುಹೊತ್ತ ಸಚಿವ ಖಂಡ್ರೆ!

**ಹುಣಸೂರು:** ಗ್ರಾಮೀಣಾಭಿವೃದ್ಧಿ ಸಚಿವ ಈಶ್ವರ್ ಖಂಡ್ರೆ ಅವರು ತಾವೇ ಮಂಕರಿಯಲ್ಲಿ ಮಣ್ಣು ಹೊತ್ತು ಕ್ಟರ್‌ಗೆ ತುಂಬಿಸಿ ಕೂಲಿ ಕಾರ್ಮಿಕರನ್ನು ಹುರಿದುಂಬಿಸಿದರು.

ಹುಣಸೂರು ತಾಲೂಕು ಬಿಳಿಕೆರೆ ಹೋಬಳಿ ಕರಿಮುದ್ದನಹಳ್ಳಿ ಕೆರೆಯಲ್ಲಿ ಗ್ರಾಮೀಣ ಖಾತ್ರಿ ಯೋಜನೆ ವಿಬಿಜಿ ರಾಮ್ ಜಿ ಅಡಿ ಹೂಳೆತ್ತುತ್ತಿದ್ದ ಸ್ಥಳಕ್ಕೆ ಭೇಟಿ ನೀಡಿದ್ದ ಸಚಿವರು ಕಾಮಗಾರಿಯನ್ನು ಪರಿಶೀಲಿಸಿದರು.

ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹುಕ್ಕೇಶ್ ಅವರೊಂದಿಗೆ ಕೆರೆ ಹೂಳು ತೆಗೆಯುತ್ತಿದ್ದ ಜಾಗಕ್ಕೆ ಭೇಟಿ ನೀಡಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಕೂಲಿ ಕಾರ್ಮಿಕರೊಂದಿಗೆ ಮಾತನಾಡಿದ ಸಚಿವರು, ವಿಬಿಜಿ ರಾಮ್ ಜಿ ಅಡಿ 125 ದಿನ ಅರ್ಹ ಫಲಾನುಭವಿಗಳ ಕುಟುಂಬಕ್ಕೆ ಕೆಲಸ ನೀಡುತ್ತಿದೆ. ಪ್ರತಿ ನಿತ್ಯ 382 ರೂ. ಕೂಲಿ ನೀಡಲಾಗುತ್ತಿದೆ ಎಂದು ತಿಳಿಸಿದರು.

15 ದಿನಗಳ ಒಳಗಾಗಿ ಕೂಲಿ ಹಣ ಪಾವತಿಸುವಂತೆಯೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಗೆ ಸೂಚನೆ ನೀಡಿದರು. ಶಾಸಕ ಹರೀಶ್ ಗೌಡ ಮತ್ತು ಮಾಜಿ ಶಾಸಕ ಮಂಜುನಾಥ್ ಇದ್ದರು.

## ನೇಪಾಳ: 900ಕ್ಕೂ ಹೆಚ್ಚು ಸಾವು

### ಪ್ರವಾಹದಿಂದ ನಾಲ್ಕು ಸಾವಿರಕ್ಕೂ ಹೆಚ್ಚು ಜನರು ನಾಪತ್ತೆ

**ಕಠ್ಮಂಡು:** ನೇಪಾಳ–ಟಿಬೆಟ್ ಗಡಿ ಪ್ರದೇಶದ ಭೋಟೆಕೋಶಿ ನದಿಯಲ್ಲಿ ಆ.26ರಂದು ಸಂಭವಿಸಿದ ಭೀಕರ ಹಠಾತ್ ಪ್ರವಾಹದಿಂದ ಸಾವಿನ ಸಂಖ್ಯೆ 900ಕ್ಕೆ ಏರಿಕೆಯಾಗಿದೆ. ನಾಪತ್ತೆ ಆದವರ ಸಂಖ್ಯೆ 4 ಸಾವಿರಕ್ಕೂ ಹೆಚ್ಚಾಗಿದೆ.

ಅವರ ರಕ್ಷಣಾ ಕಾರ್ಯಾಚರಣೆ ಮುಂದುವರಿದಿದೆ.

ಇದುವರೆಗೆ ಸುಮಾರು 903 ಮೃತರ ಶವಗಳನ್ನು ಹೊರತೆಗೆಯಲಾಗಿದೆ.

ಪರಿಸ್ಥಿತಿ ಗಂಭೀರವಾಗಿದ್ದು, ಮತ್ತೆ ಪ್ರವಾಹ ಉಂಟಾಗುವ ಸಾಧ್ಯತೆಯಿದೆ. ಈ ಹಿನ್ನೆಲೆ ಪೀಡಿತ ಪ್ರದೇಶಗಳ ಜನರು ಎಚ್ಚರಿಕೆಯಿಂದಿರಲು ಸೂಚಿಸಲಾಗಿದೆ.

ತ್ರಿಶೂಲಿ ನದಿಯಲ್ಲಿ ಪ್ರವಾಹ ಉಂಟಾಗಿದ್ದು, ಗೋರ್ಖಾ ಜಿಲ್ಲೆಯ ಗಂಡಕಿ ಪ್ರಾಂತ್ಯದಲ್ಲಿ ತೂಗುಸೇತುವೆಯೊಂದು ಕೊಚ್ಚಿಕೊಂಡು ಹೋಗಿದೆ. ಸುಮಾರು 400 ಕುಟುಂಬಗಳು ಪ್ರಮುಖ ಹೆದ್ದಾರಿಯ ಸಂಪರ್ಕದಿಂದ ದೂರವಾಗಿವೆ.

ಪ್ರವಾಹದಿಂದ ಜಲವಿದ್ಯುತ್ ಯೋಜನೆ ಗಳಿಗೂ ಭಾರಿ ಹಾನಿಯಾಗಿದ್ದು, 933 ಮಂದಿ ಜಲವಿದ್ಯುತ್ ಯೋಜನೆಗಳ ಸಿಬ್ಬಂದಿ ಸುರಂ ಗಗಳೊಳಗೆ ಸಿಲುಕಿರುವ ಸಾಧ್ಯತೆ ಇದೆ ಎನ್ನಲಾಗಿದೆ. ಸುರಂಗಗಳಲ್ಲಿ ಸಿಲುಕಿರುವ ವರನ್ನು ರಕ್ಷಿಸಲು ವಿಶೇಷ ಕಾರ್ಯಾಚರಣೆ ಮುಂದುವರಿದಿದೆ.

## ಕೆಪಿಎಸ್‌ಸಿ ಸದಸ್ಯೆ ಶಾಂತ ನಾಪತ್ತೆ: ಲುಕೌಟ್ ನೋಟಿಸ್

**ಬೆಂಗಳೂರು:** ಕೆಪಿಎಸ್‌ಸಿ ನೇಮಕಾತಿ ಹಗರಣದ ಆರೋಪಿ ಕೆಪಿಎಸ್‌ಸಿ ಸದಸ್ಯೆ ಶಾಂತ ಹೊಸಮನಿ ವಿರುದ್ಧ ಲುಕೌಟ್ ನೋಟಿಸ್ ಹೊರಡಿಸಲಾಗಿದೆ.

ಪ್ರಕರಣದಲ್ಲಿ ಕೆಪಿಎಸ್‌ಸಿ ಸದಸ್ಯರಿಗೆ ಇ.ಡಿ ಬುಲಾವ್ ನೀಡಿದೆ. ವಿಚಾರಣೆಗೆ ಹಾಜರಾಗುವಂತೆ ಸಮನ್ಸ್ ನೀಡಿದೆ. ಜಾರಿ ನಿರ್ದೇಶನಾಲಯ ಈಗಾಗಲೇ 17 ಅಭ್ಯರ್ಥಿಗಳನ್ನು ವಿಚಾರಣೆ ನಡೆಸಿದೆ. ಎಕ್ಸಾಂ ಕಂಟ್ರೋಲ್ ನಲ್ಲಿದ್ದ ಅಧಿಕಾರಿಗಳಿಗೂ ಸಮನ್ಸ್ ಜಾರಿಯಾಗಿದೆ. ಸಿಐಡಿ ಕಾರ್ಯಾಚರಣೆ ಬೆನ್ನಲ್ಲೇ ಇ.ಡಿ ತನಿಖೆ ಚುರುಕುಗೊಳಿಸಿದೆ.

ಪ್ರಕರಣ ಬೆಳಕಿಗೆ ಬರುತ್ತಿದ್ದಂತೆ ಶಾಂತ ಹೊಸಮನಿ ನಾಪತ್ತೆಯಾಗಿದ್ದಾರೆ. ಅವರಿಗೆ ಇ.ಡಿ ಲುಕೌಟ್ ನೋಟಿಸ್ ಹೊರಡಿಸಿದೆ. ಪುಟ 2ಕ್ಕೆ



## ನೇಪಾಳ ಪ್ರವಾಹದಲ್ಲಿ 28 ಕನ್ನಡಿಗರು ನಾಪತ್ತೆ

**ನೇಪಾಳ:** ಸಂಭವಿಸಿದ ದುರಂತದಲ್ಲಿ ಕರ್ನಾಟಕದ ಸುಮಾರು 28 ಮಂದಿ ನಾಪತ್ತೆ ಆಗಿದ್ದಾರೆ. ಇದುವರೆಗೂ ಯಾರ ಸಂಪರ್ಕಕ್ಕೂ ಸಿಗುತ್ತಿಲ್ಲ.

ನೇಪಾಳ ಸೇನೆ, ಸಶಸ್ತ್ರ ಪೊಲೀಸ್ ಪಡೆ ಮತ್ತು ನೇಪಾಳ ಪೊಲೀಸರ 13 ಸಾವಿರಕ್ಕೂ ಹೆಚ್ಚು ಸಿಬ್ಬಂದಿಯನ್ನು ರಕ್ಷಣಾ ಕಾರ್ಯಕ್ಕೆ ನಿಯೋಜಿಸಲಾಗಿದೆ. ರಕ್ಷಣೆ ಜೊತೆಗೆ ಆಹಾರ, ಔಷಧಿ ಹಾಗೂ ಅಗತ್ಯ ವಸ್ತುಗಳನ್ನು ಪೂರೈಸಲು ಹೆಲಿಕಾಪ್ಟರ್‌ಗಳನ್ನು ಬಳಸಲಾಗುತ್ತಿದೆ. ಖಾಸಗಿ ಹೆಲಿಕಾಪ್ಟರ್‌ಗಳನ್ನೂ ಕಾರ್ಯಾಚರಣೆಗೆ ಸೇರಿಸಲಾಗಿದೆ. ಪರಿಹಾರ ಸಾಮಗ್ರಿ ಸಾಗಿಸಲು ಹಲವು ಚಾರ್ಟರ್ ವಿಮಾನಗಳ ಸೇವೆ ಪಡೆಯಲಾಗಿದೆ. ನಾಪತ್ತೆಯಾದವರಲ್ಲಿ ಬೆಂಗಳೂರು ಸೇರಿ ದಂತೆ ರಾಜ್ಯದ ವಿವಿಧ ಜಿಲ್ಲೆಗಳ ನಿವಾಸಿ ಗಳು ಇದ್ದಾರೆ. ಇವರಲ್ಲಿ ಬಹುತೇಕರು ಬೆಂಗಳೂರು ನಗರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಿಗೆ ಸೇರಿದವರಾಗಿದ್ದಾರೆ.

### ತುಮಕೂರಿನ ಇಬ್ಬರು ಕಣ್ಮರೆ




**ತುಮಕೂರು:** ನೇಪಾಳದ ಪ್ರವಾಹದಲ್ಲಿ ಯು.ಎಸ್ ಪೌರತ್ವ ಹೊಂದಿರುವ ತುಮಕೂರು ಮೂಲದ ಇಬ್ಬರು ನಾಪತ್ತೆಯಾಗಿದ್ದಾರೆ. ನಗರದ ನೃಪತುಂಗ ಬಡಾವಣೆಯ ರಂಗು ಸುಧೀರ್ (53), ಕೀರ್ತಿ ಆಚಾರ್ಯ (50) ನಾಪತ್ತೆಯಾಗಿದ್ದಾರೆ.

ಯು.ಎಸ್‌ನಲ್ಲಿ ಸಾಫ್ಟ್‌ವೇರ್ ಎಂಜಿನಿಯರ್ ಆಗಿರುವ ಅವರು ಆಗಸ್ಟ್ 22ರಂದು ಯು.ಎಸ್‌ನಿಂದ 10 ಜನರ ತಂಡದೊಂದಿಗೆ ನೇಪಾಳಕ್ಕೆ ಹೊರಟಿದ್ದರು. 26ರ ಬೆಳಗ್ಗೆ ಸಂಬಂಧಿ ಗುರುಪ್ರಸಾದ್ ಎನ್ನುವವರಿಗೆ ಕೊನೆ ಕಾಲ್ ಮಾಡಿದ್ದರು. ಅಲ್ಲಿಂದ ಸಂಪರ್ಕಕ್ಕೆ ಸಿಗುತ್ತಿಲ್ಲ. ಪರಿಣಾಮ ಅವರ ತುಮಕೂರಿನ ಮನೆಯ ಸದಸ್ಯರಲ್ಲಿ ಆತಂಕ ಎದುರಾಗಿದೆ.

ಹಲವು ಮೃತದೇಹಗಳ ಗುರುತು ಪತ್ತೆಹಚ್ಚುವಂತೆ ಎಂಬೆಸ್ಸಿಯವರು ಕಳಿಸಿದ್ದರು. ಆದರೆ, ಪತ್ತೆ ಹಚ್ಚಲು ಸಾಧ್ಯವಾಗುತ್ತಿಲ್ಲ ಎಂದು ಸಂಬಂಧಿಕರು ತಿಳಿಸಿದ್ದಾರೆ.

## ಗೃಹಲಕ್ಷ್ಮೀಯರಿಗೆ ಶಾಕ್




**ಬೆಂಗಳೂರು:** ಗೃಹಲಕ್ಷ್ಮೀ ಯೋಜನೆಗೆ 3 ವರ್ಷ ತುಂಬುತ್ತಿರುವ ಹೊತ್ತಲ್ಲೇ ಫಲಾನುಭವಿಗಳಿಗೆ ಸರ್ಕಾರ ಬಿಗ್ ಶಾಕ್ ನೀಡಿದೆ.

ಗೃಹಲಕ್ಷ್ಮೀ ಮರು ಪರಿಶೀಲನೆಗೆ ಸರ್ಕಾರ ನಿರ್ಧರಿಸಿರುವ ಬೆನ್ನಲ್ಲಿಯೇ ಶಾಕ್ ಎದುರಾಗಿದೆ. ಮರು ಪರಿಶೀಲನೆ ಸರ್ವೆ ಆರಂಭವಾದರೆ ಆ ಸಮಯದಲ್ಲಿ ಫಲಾನುಭವಿಗಳ ಖಾತೆಗೆ ದುಡ್ಡು ಬರೋದು ಡೌಟ್. ಸರ್ವೆ ಆರಂಭವಾಗಿ ಅನರ್ಹರನ್ನ ಪತ್ತೆ ಹಚ್ಚಿದ ಬಳಿಕ ಗೃಹಲಕ್ಷ್ಮೀ ಹಣ ಪಾವತಿ ಆಗಲಿದೆ. ಹೀಗಾಗಿ ಒಂದು ತಿಂಗಳ ಒಳಗೆ ಸರ್ವೆ ಮುಗಿಸಲು ಸರ್ಕಾರ ಸೂಚನೆ ನೀಡಲಿದೆ. ಆದರೆ ಒಂದೇ ತಿಂಗಳಲ್ಲಿ ಮುಗಿಯುವ ಸಾಧ್ಯತೆ ಇಲ್ಲ ಎನ್ನಲಾಗಿದೆ.

## ಶರಣ ತತ್ವವೂ ಶ್ರೇಷ್ಠ

### ವಿವಾದ ನಂತರ ಸಚಿವ ರಾಯರೆಡ್ಡಿ ಉಲ್ಟಾ ಹೇಳಿಕೆ



**ಕೊಪ್ಪಳ:** ಇಸ್ಲಾಂ ಧರ್ಮದ ಕುರಿತು ನೀಡಿದ್ದ ಹೇಳಿಕೆ ವಿವಾದಕ್ಕೆ ಕಾರಣವಾದ ಬೆನ್ನಲ್ಲೇ ಸಚಿವ ಬಸವರಾಜ ರಾಯರೆಡ್ಡಿ ಉಲ್ಟಾ ಹೊಡೆದಿದ್ದಾರೆ.

ಮಾಧ್ಯಮಗಳ ಜೊತೆ ಸೋಮವಾರ ಮಾತನಾಡಿದ ಸಚಿವರು, ನಾನು ಯಾವುದೇ ಧರ್ಮವನ್ನು ಕನಿಷ್ಠ ಎಂದು ಹೇಳಿಲ್ಲ. ಎಲ್ಲ ಧರ್ಮಗಳಲ್ಲಿರುವ ಉತ್ತಮ ವಿಚಾರಗಳನ್ನು ಗೌರವಿಸುವುದಾಗಿ ತಿಳಿಸಿದ್ದಾರೆ. ನಾನು ಇಸ್ಲಾಂ ಧರ್ಮದಲ್ಲಿರುವ ಕೆಲವು ಉತ್ತಮ ವಿಚಾರಗಳ ಬಗ್ಗೆ ತಿಳಿಸಿದ್ದೇನೆ. ಎಲ್ಲ ಧರ್ಮಗಳೂ ಶ್ರೇಷ್ಠ ಎಂದು ನಾನು ಹೇಳಿದ್ದೇನೆ. ಇಸ್ಲಾಂ ಶ್ರೇಷ್ಠ, ಬೇರೆ ಧರ್ಮಗಳು ಕಡಿಮೆ ಎಂದು ಹೇಳಿಲ್ಲ ಎಂದು ಸ್ಪಷ್ಟಪಡಿಸಿದರು.

ವಿವಾದದ ಹಿನ್ನೆಲೆಯಲ್ಲಿ ಬಸವಣ್ಣನ ವಚನವನ್ನು ಉಲ್ಲೇಖಿಸಿದ ರಾಯರೆಡ್ಡಿ, ಕಳಬೇಡ, ಕೊಲಬೇಡ, ಹುಸಿಯ ನುಡಿಯಲು ಬೇಡ ಎಂಬ ಶರಣ ತತ್ವ ಶ್ರೇಷ್ಠ. ಮನುಷ್ಯತ್ವ ಮತ್ತು ಉತ್ತಮ ವಿಚಾರಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ಮುಖ್ಯ. ನಾನು ಮಠ–ಮಾನ್ಯಗಳಿಗೆ ನಿಯಮಿತವಾಗಿ ಹೋಗುವುದಿಲ್ಲ. ಆದರೆ ತಮ್ಮೊಂದಿಗೆ ಇರುವವರು ಅಥವಾ ಕುಟುಂ ಬದವರು ಆಹ್ವಾನಿಸಿದಾಗ ಅವರ ಒತ್ತಾ ಯದ ಮೇರೆಗೆ ಹೋಗುವುದಾಗಿ ತಿಳಿಸಿದರು.ನಾನು ಯಾವುದೇ ನಿರ್ದಿಷ್ಟ ಧರ್ಮದ ಅನುಯಾಯಿ ಅಲ್ಲ. ಇಸ್ಲಾಂ, ಕ್ರೈಸ್ತ ಮತ್ತು ಯಹೂದಿ ಪುಟ 2ಕ್ಕೆ

## ಮಂಡ್ಯ ಜೈಲು ಅಧೀಕ್ಷಕಿ ಎತ್ತಂಗಡಿ

### ವಿಚಾರಣಾಧೀನ ಕೈದಿಗೆ ರಾಜಾತಿಥ್ಯ ಸೌಲಭ್ಯ ನೀಡಲು ಲಂಚ ಆರೋಪ




**ಬೆಂಗಳೂರು:** ವಿಚಾರಣಾಧೀನ ಕೈದಿಗೆ ರಾಜಾತಿಥ್ಯ ನೀಡಿದ ಆರೋಪದ ಹಿನ್ನೆಲೆಯಲ್ಲಿ ಮಂಡ್ಯ ಜಿಲ್ಲಾ ಕಾರಾಗೃಹ ಅಧೀಕ್ಷಕಿ ಎಂ.ಶಾಂತಮ್ಮ ಅವರನ್ನು ಬಳ್ಳಾರಿ ಜೈಲಿಗೆ ಎತ್ತಂಗಡಿ ಮಾಡಲಾಗಿದೆ.

ಕರ್ನಾಟಕ ಪೊಲೀಸ್ ಮಹಾನಿರ್ದೇಶಕ (ಕಾರಾಗೃಹಗಳು) ಅಲೋಕ್ ಕುಮಾರ್ ಅವರು, ಕರ್ತವ್ಯ ಲೋಪದ ಕಾರಣದಿಂದ ಶಾಂತಮ್ಮ ಅವರನ್ನು ಬಳ್ಳಾರಿ ಕೇಂದ್ರ ಕಾರಾಗೃಹಕ್ಕೆ ವರ್ಗಾಯಿಸಲಾಗಿದೆ ಎಂದು ತಿಳಿಸಿದ್ದಾರೆ.

ಮಂಡ್ಯ ಜೈಲಿನ ಸುಮಾರು 80 ಕೈದಿಗಳ ಸಹಿ ಇರುವ ದೂರಿನ ಹಿನ್ನೆಲೆಯಲ್ಲಿ ಎತ್ತಂಗಡಿ ನಡೆದಿದೆ. ಜೈಲಿನೊಳಗಿನ ವಿವಿಧ ಸೌಲಭ್ಯಗಳಿಗಾಗಿ ಹಣ ವಸೂಲಿ ಮಾಡಲಾಗುವ ದರಗಳ ಪಟ್ಟಿ ಇದೆ ಎಂದು ಆರೋಪಿಸಲಾಗಿತ್ತು.

ಭೂಅಕ್ರಮ ಪ್ರಕರಣದಲ್ಲಿ ಜೈಲು ಸೇರಿದ್ದ ವಿಚಾರಣಾಧೀನ ಕೈದಿಗೆ ಯಾವುದೇ ಕಾಯಿಲೆ ಇಲ್ಲದಿದ್ದರೂ ಬೆನ್ನು ನೋವಿನ ನೆಪವೊಡ್ಡಿ ಮಂಡ್ಯದ ಮಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಈ ಬಗ್ಗೆ ನ್ಯಾಯಾಲಯಕ್ಕೆ ಯಾವುದೇ ಮಾಹಿತಿ ನೀಡಿರಲಿಲ್ಲ. ಆಸ್ಪತ್ರೆಯಲ್ಲಿದ್ದ ಕೈದಿ ಹುಸೇನ್ ತನ್ನ ಗೆಳತಿಯೊಂದಿಗೆ ರಾಜಾತಿಥ್ಯ ಅನುಭವಿಸುತ್ತಿದ್ದ ವಿಚಾರ ಬೆಳಕಿಗೆ ಬಂದಿತ್ತು.

ಮಂಡ್ಯ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಸಿ.ಚಂದ್ರಶೇಖರ್ ಅವರು ಆಸ್ಪತ್ರೆಗೆ ಭೇಟಿ ನೀಡಿದ ಸಂದರ್ಭ ಈ ಅಕ್ರಮ ಬಯಲಾಗಿತ್ತು. ನ್ಯಾಯಾಲಯಕ್ಕೆ ಪುಟ 2ಕ್ಕೆ

## ಎಚ್‌ಡಿಕೆ ಬಾಂಬ್ ಸಿಡಿಸಲಿ: ಎಚ್.ಸಿ.ಬಾಲಕೃಷ್ಣ ಲೇವಡಿ



**ಮೈಸೂರು:** ಕೇಂದ್ರ ಸರ್ಕಾರದಿಂದ ಮೇಕೆದಾಟು, ಮಹದಾಯಿಗೆ ಅನುಮೋದನೆ ಪಡೆಯುವ ಮೂಲಕ ಎಚ್.ಡಿ. ಕುಮಾರಸ್ವಾಮಿ ಹೊಸ ಬಾಂಬ್ ಸಿಡಿಸುತ್ತಾರೆ ಎಂದುಕೊಂಡಿದ್ದೇನೆ ಎಂದು ಪೌರಾಡಳಿತ ಸಚಿವ ಎಚ್.ಸಿ.ಬಾಲಕೃಷ್ಣ ಲೇವಡಿ ಮಾಡಿದರು.

ಮೈಸೂರಿನ ಸುತ್ತೂರು ಶಾಖಾ ಮಠಕ್ಕೆ ಭೇಟಿ ನೀಡಿ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಆಶೀರ್ವಾದ ಪಡೆದ ನಂತರ ಮಾಧ್ಯಮಗಳ ಜೊತೆ ಅವರು ಮಾತನಾಡಿದರು.

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ದೇಶವೇ ತಿರುಗಿ ನೋಡುವ ಹೊಸ ಬಾಂಬ್ ಸಿಡಿಸುವುದಾಗಿ ಹೇಳಿರುವ ಕುರಿತು ಪ್ರತಿಕ್ರಿಯಿಸಿ, ಅವರ ಬಳಿ ಯಾವ ಬಾಂಬ್ ಇದೆ ಅಂತ ನನಗೆ ಗೊತ್ತಿಲ್ಲ. ಅವರಿಗೆ ಅವಾಗ ಅವಾಗ ತಲೆ ಬದಲಾಗುತ್ತದೆ. ಅವರ ತಲೆಯಲ್ಲಿ ಏನಿದೆ ಗೊತ್ತಿಲ್ಲ. ಅವರ ಬತ್ತಳಿಕೆಯಲ್ಲಿ ಯಾವ ಅಸ್ತ್ರವಿದೆ ಅದು ಗೊತ್ತಿಲ್ಲ. ಅವರ ಸಂಪರ್ಕ ಕಡಿದುಕೊಂಡು ನಾವು ತುಂಬ ಸಮಯವಾಗಿದೆ. ಹೀಗಾಗಿ ಅವರ ಬಗ್ಗೆ ಗೊತ್ತಿಲ್ಲ. ಏನು ಹೇಳುತ್ತಾರೆ ನೋಡಿ ನಂತರ ಅದಕ್ಕೆ ಉತ್ತರ ನೀಡುತ್ತೇನೆ ಎಂದರು.

ನಿಮ್ಮ ಹೆಸರು ಕೇಳಿದರೆ ಕುಮಾರಸ್ವಾಮಿ ಗರಂ ಆಗ್ತಾರೆ ಎನ್ನುವ ವಿಚಾರಕ್ಕೆ, ನನ್ನನ್ನು ನೋಡಿದರೆ ಅವರಿಗೆ ಹಾಗೇ ಅಗುತ್ತದೆ. ಯಾಕೆ ಅಂತ ಗೊತ್ತಿಲ್ಲ ಎಂದರು. ಪುಟ 2ಕ್ಕೆ

## ಕನ್ನಾಳೆ ನಿವಾಸಕ್ಕೆ ಸಿಐಡಿ ದಾಳಿ

### ಕೆಪಿಎಸ್‌ಸಿ ನೇಮಕಾತಿ ಹಗರಣ: ಮಧ್ಯವರ್ತಿ ಬಂಧನ



**ಬೆಂಗಳೂರು:** ಕೆಪಿಎಸ್‌ಸಿ ನೇಮಕಾತಿ ಹಗರಣಕ್ಕೆ ಸಂಬಂಧಿಸಿದಂತೆ ಬಂಧಿತ ಆರೋಪಿ ಬಸವರಾಜ್ ಕನ್ನಾಳೆ ಮನೆ ಮೇಲೆ ಸಿಐಡಿ ಅಧಿಕಾರಿಗಳು ಸೋಮವಾರ ದಾಳಿ ನಡೆಸಿದ್ದಾರೆ.

ಬೆಂಗಳೂರಿನ ಸಂಜಯನಗರದ ಮನೆಯ ಮೇಲೆ ಅಧಿಕಾರಿಗಳು ದಾಳಿ ನಡೆಸಿ ಮಹತ್ವದ ದಾಖಲೆಗಳನ್ನು ವಶಕ್ಕೆ ಪಡೆದಿದ್ದಾರೆ. ಈ ಬಗ್ಗೆ ಹೆಚ್ಚಿನ ತನಿಖೆ ನಡೆಯುತ್ತಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಭಾಲ್ಕಿ ಮೂಲದ ಬಸವರಾಜ್ ಕನ್ನಾಳೆಯನ್ನು ಸಿಐಡಿ ಅಧಿಕಾರಿಗಳು ದೆಹಲಿ ವಿಮಾನ ನಿಲ್ದಾಣದಲ್ಲಿ ಬಂಧಿಸಿದ್ದರು. ಅಭ್ಯರ್ಥಿಗಳು ಹಾಗೂ ಗ್ಯಾನೇಂದ್ರ ನಡುವೆ ಮಧ್ಯವರ್ತಿಯಾಗಿ ಕನ್ನಾಳೆ ಕಾರ್ಯನಿರ್ವಹಿಸಿದ್ದ. 12ಕ್ಕೂ ಹೆಚ್ಚು ಅಭ್ಯರ್ಥಿಗಳನ್ನು ಗ್ಯಾನೇಂದ್ರ ಜೊತೆಗೆ ಬಸವರಾಜ್ ಸಂಪರ್ಕ ಮಾಡಿಕೊಟ್ಟಿದ್ದ ಎಂದು ತನಿಖೆ ವೇಳೆ ತಿಳಿದುಬಂದಿತ್ತು ಎನ್ನಲಾಗಿದೆ.

ಕೆಪಿಎಸ್‌ಸಿ ಪರೀಕ್ಷೆ ಬರೆಯಲು ಬೆಂಗಳೂರಿಗೆ ಬಂದಿದ್ದ ಬಸವರಾಜ್ ಕನ್ನಾಳೆ ಇಂದು ಕೋಟ್ಯಾಧಿಪತಿ. ಕೆಪಿಎಸ್‌ಸಿ ಪರೀಕ್ಷೆ ಪಾಸಾಗದಿದ್ದ ಕನ್ನಾಳೆ ಪುಟ 2ಕ್ಕೆ

## ಬೆಂಗಳೂರಿಗೆ ಯಾವಾಗ ಬರುತ್ತೀರಿ?

### ರಾಹುಲ್ ಗಾಂಧಿಗೆ ಎಚ್.ಡಿ.ಕುಮಾರಸ್ವಾಮಿ ಪ್ರಶ್ನೆ



**ನವದೆಹಲಿ:** ಕೆಪಿಎಸ್ಸಿ ಸಂತ್ರಸ್ತರ ಜತೆ ಚರ್ಚೆ ನಡೆಸಲು ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಯಾವಾಗ ಬೆಂಗಳೂರಿಗೆ ಬರುತ್ತಾರೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಪ್ರಶ್ನಿಸಿದರು.

ಕರ್ನಾಟಕ ಸರ್ಕಾರದ ಕೆಪಿಎಸ್ಸಿ ಅಕ್ರಮಗಳಿಗೆ ಸಂಬಂಧಿಸಿದಂತೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಸೋಮವಾರ ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ರಾಷ್ಟ್ರೀಯ ಮಟ್ಟದಲ್ಲೂ ಕೂಡ ಕೆಪಿಎಸ್ಸಿ ಹಗರಣದಿಂದ ಕರ್ನಾಟಕದ ಬಗ್ಗೆ ನಕಾರಾತ್ಮಕವಾಗಿ ಚರ್ಚೆಯಾಗುತ್ತಿದೆ. ಇದಕ್ಕೆ ರಾಜ್ಯ ಸರ್ಕಾರದ ವೈಫಲ್ಯ ಕಾರಣ. ಇದರ ಬಗ್ಗೆ ರಾಹುಲ್ ಗಾಂಧಿ ಮಾತನಾಡಬೇಕು ಎಂದರು.

ಸಂವಿಧಾನದ ಪುಸ್ತಕವನ್ನು ಜೇಬಿನಲ್ಲಿ ಇಟ್ಟುಕೊಂಡು ಓಡಾಡುವ ರಾಹುಲ್ ಗಾಂಧಿ ಕರ್ನಾಟಕದಲ್ಲಿ ನಡೆಯುತ್ತಿರುವ ಅಕ್ರಮಗಳ ಬಗ್ಗೆ ತುಟಿ ಬಿಚ್ಚಬೇಕಾಗಿದೆ. ಅವರು ಬೆಂಗಳೂರಿಗೆ ಬರಬೇಕು. ಕೆಪಿಎಸ್ಸಿ ಸಂತ್ರಸ್ತ ಯುವಕರ ಜೊತೆ ಚರ್ಚೆ ನಡೆಸಬೇಕು. ಕಾಂಗ್ರೆಸ್ ಪಕ್ಷದ ಅವರ ಸರ್ಕಾರ ಏನೇನು ಅಕ್ರಮಗಳಲ್ಲಿ ಭಾಗಿಯಾಗಿದೆ ಎಂಬುದನ್ನು ಸ್ವತಃ ಅರಿಯಬೇಕು. ರಾಹುಲ್ ಗಾಂಧಿ ಅವರು ನೀಟ್ ವಿಷಯವನ್ನು ಯಾವ ರೀತಿ ಹೇಗೆ ಎತ್ತಿಕೊಂಡು ಹೋರಾಟ ನಡೆಸಿದರೋ ಅದೇ ರೀತಿಯಲ್ಲಿ ಕೆಪಿಎಸ್ಸಿ ಹಗರಣದ ಬಗ್ಗೆಯೂ ಹೋರಾಟ ನಡೆಸಬೇಕು ಎಂದು ಆಗ್ರಹಿಸಿದರು.

ಪ್ರಿಯಾಂಕ್ ಖರ್ಗೆ ಅವರು ಗ್ರಾಮೀಣ ಅಭಿವೃದ್ಧಿ ಸಚಿವರಾಗಿದ್ದಾಗ ಸಹಾಯಕ ಎಕ್ಸಿಕ್ಯೂಟಿವ್ ಇಂಜಿನಿಯರ್ ಗ್ರೇಡ್ 1 ಪುಟ 2ಕ್ಕೆ

# ಸ್ಥಳೀಯ ಸಂಸ್ಥೆಗಳ ಆಸ್ತಿಗಳ ಒತ್ತುವರಿ ತೆರವಿಗೆ ಅಭಿಯಾನ

## ಮೂರು ಜಿಲ್ಲೆಗಳ ಸಭೆ ನಡೆಸಿದ ಪೌರಾಡಳಿತ ಸಚಿವ ಹೆಚ್.ಸಿ.ಬಾಲಕೃಷ್ಣ ಕರೆ

ಮೈಸೂರು: ನಗರ ಸ್ಥಳೀಯ ಸಂಸ್ಥೆಗಳು ನೀರು, ರಸ್ತೆ, ಒಳಚರಂಡಿ, ಬೀದಿ ದೀಪಗಳ ವ್ಯವಸ್ಥೆ ಮಾಡಬೇಕು. ಈ ಸೌಲಭ್ಯಗಳನ್ನು ಕಲ್ಪಿಸಲು ಸಂಪನ್ಮೂಲಗಳ ಕ್ರೂಢೀಕರಣ ಮಾಡಬೇಕು ಎಂದು ಪೌರಾಡಳಿತ ಸಚಿವ ಹೆಚ್.ಸಿ.ಬಾಲಕೃಷ್ಣ ತಿಳಿಸಿದರು.

ಪ್ರಾದೇಶಿಕ ಆಯುಕ್ತರ ಕಚೇರಿಯ ಚಾಮುಂಡೇಶ್ವರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಮೈಸೂರು, ಚಾಮರಾಜನಗರ, ಕೊಡಗು ಜಿಲ್ಲೆಗಳ ವ್ಯಾಪ್ತಿಯ ಸ್ಥಳೀಯ ಸಂಸ್ಥೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು. ನಗರ ಪ್ರದೇಶದಲ್ಲಿ ಮೂಲಭೂತ ಸೌಲಭ್ಯಗಳನ್ನು ನೀಡುವುದು ನಮ್ಮ ಇಲಾಖೆಯ ಜವಾಬ್ದಾರಿಯಾಗಿದೆ. ಆಡಳಿತವನ್ನು ನಡೆಸಲು ಸಂಪನ್ಮೂಲ ಬೇಕು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸಂಪನ್ಮೂಲ ನೀಡುತ್ತವೆ. ಅಲ್ಲದೆ ಸ್ಥಳೀಯವಾಗಿ ಇರುವ ಆಸ್ತಿಗಳು ಹಾಗೂ ಸ್ಥಳೀಯ ಸಂಸ್ಥೆಗಳಿಂದ ನೀಡುವ ಸೌಲಭ್ಯಗಳ ಟ್ಯಾಕ್ಸ್‌ಗಳನ್ನು ನಿಗಧಿತ ಅವಧಿಯಲ್ಲಿ ವಸೂಲಿ ಮಾಡಬೇಕು. ಸ್ವಚ್ಚತೆ, ಕುಡಿಯುವ ನೀರು ಹಾಗೂ ಒಳಚರಂಡಿ ವ್ಯವಸ್ಥೆ ಉತ್ತಮವಾಗಿ ಇರಬೇಕು ಎಂದು ಸೂಚನೆ ನೀಡಿದರು.

ನಗರ ಸ್ಥಳೀಯ ಸಂಸ್ಥೆಗಳಲ್ಲಿ ಇಂಜಿನಿಯರ್ ಹುದ್ದೆಗಳು ಖಾಲಿ ಇರುವ ಕಡೆಗೆ ಪಿಡಬ್ಲ್ಯೂ ಡಿ ಇಲಾಖೆಯಿಂದ ಹೆಚ್ಚುವರಿ ಹೊಣೆ ನೀಡಿ ನಿಯೋಜನೆ ಮಾಡುವಂತೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದರು. ಸ್ಥಳೀಯ ಸಂಸ್ಥೆಗಳಲ್ಲಿ ಮಂಡಿಸುವ ಬಜೆಟ್ ಕಾಟಾಚಾರಕ್ಕೆ ಆಗಬಾರದು. ತೆರಿಗೆ ವಸೂಲಾತಿ ವ್ಯವಸ್ಥಿತವಾಗಿ ಮಾಡಿ, ತೆರಿಗೆ ವಸೂಲಾತಿಗೆ ಪೂರಕವಾಗಿ ಬಜೆಟ್ ಮಂಡನೆ ಆಗಬೇಕು. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಅನುಧಾನ ಶೇಕಡಾ 30 ರಷ್ಟು ಬರುತ್ತದೆ. ನಗರ ಸ್ಥಳೀಯ ಸಂಸ್ಥೆಗಳ ಮೇಲೆ ಇರುವ ಕೋರ್ಟ್ ಪ್ರಕರಣಗಳ ಕುರಿತು ಪೌರಾಡಳಿತ ಇಲಾಖೆಯ ಕಾನೂನು ವಿಭಾಗ ಸಮರ್ಥವಾಗಿ ವಾದ ಮಂಡಿಸಬೇಕು. ಸ್ಥಳೀಯ ಸಂಸ್ಥೆಗಳು ಆಸ್ತಿಗಳ ಒತ್ತುವರಿ ತೆರವು ಮಾಡಲು ಅಭಿಯಾನ ಕಾರ್ಯವನ್ನು ಹಮ್ಮಿಕೊಳ್ಳುವುದು. ಒತ್ತುವರಿ ತೆರವಿನಲ್ಲಿ ಯಾವುದೇ ರಾಜಿ ಇಲ್ಲ ಎಂದರು.



ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕಸ ಸಂಗ್ರಹಣೆ ಮಾಡಿಕೊಂಡು ಬಯೋ ಗ್ಯಾಸ್ ಉತ್ಪಾದನೆ ಮಾಡಿಕೊಳ್ಳಲು ಹಲವು ಕಂಪನಿಗಳು ಮುಂದೆ ಬಂದಿವೆ. ಈ ಕಂಪನಿಗಳ ಜೊತೆ ಸಭೆ ನಡೆಸಿ ಒಪ್ಪಂದ ಮಾಡಿಕೊಳ್ಳಲಾಗುವುದು. ಖಾಸಗಿ ರಸ್ತೆಗಳನ್ನು ಸರ್ಕಾರಿ ರಸ್ತೆಗಳಾಗಿ ಮಾಡುವ ಕಾಯ್ದೆ ಜಾರಿಗೆ ತರಲಾಗಿದೆ. ಯಾವುದೇ ಅನಧಿಕೃತ ಬಡಾವಣೆಗಳು ನಿರ್ಮಾಣ ಆಗಿದ್ದರೆ ಅವನ್ನು ನಿರ್ಮೂಲನೆ ಮಾಡಲಾಗುವುದು. ನಿಗದಿತ ಅವಧಿಯಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸಿದೆ ಇದ್ದರೆ ಇಂಜಿನಿಯರ್ ಗಳನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು. ಗುತ್ತಿಗೆದಾರರು ಕಾಮಗಾರಿಯ ಗುಣಮಟ್ಟವನ್ನು ಕಾಯ್ದುಕೊಳ್ಳದೆ ಇದ್ದರೆ ಹಾಗೂ ನಿಗದಿತ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸದೆ ಹೋದರೆ ಮೂರು ಬಾರಿ ನೋಟಿಸ್ ನೀಡಿ ಅಂತಹ ಗುತ್ತಿಗೆದಾರರನ್ನು ಕಪ್ಪು ಪಟ್ಟಿಗೆ ಸೇರಿಸಿ ಎಂದರು.

ಪಶು ಸಂಗೋಪನೆ ಹಾಗೂ ರೇಷ್ಮೆ ಇಲಾಖೆಯ ಸಚಿವ ಪುಟ್ಟರಂಗಶೆಟ್ಟಿ ಮಾತನಾಡಿ ಚಾಮರಾಜ ನಗರ ಜಿಲ್ಲೆಯ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಶವ ಸಂಸ್ಕಾರ ಮಾಡಲು ಬರ್ನಿಂಗ್ ಯೂನಿಟ್ ಗಳನ್ನು ಸ್ಥಾಪಿಸಬೇಕು. ಸ್ಥಳೀಯ ಸಂಸ್ಥೆಗಳ ಜಾಗವನ್ನು ಕೆಲವು ಕಡೆ ಖಾಸಗಿಯವರು ಒತ್ತುವರಿ ಮಾಡಿಕೊಂಡಿದ್ದು, ಹಲವು ಪ್ರಕರಣಗಳು ಕೋರ್ಟ್ ನಲ್ಲಿ ಇವೆ. ಈ ಬಗ್ಗೆ ಇಲಾಖೆ ಕ್ರಮವಹಿಸಬೇಕು ಎಂದು ತಿಳಿಸಿದರು.

ಶಾಸಕ ಪೊನ್ನಣ್ಣ ವಿಡಿಯೋ ಕಾನ್ಫರೆನ್ಸ್ ಮೂಲಕ ಮಾತನಾಡಿ ಅಮೃತ್ 2 ಯೋಜನೆಯಡಿ ವಿರಾಜಪೇಟೆ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಪೈಪ್ ಲೈನ್ ಕಾಮಗಾರಿ ಇನ್ನೂ ಮುಗಿದಿಲ್ಲ. ಮನೆ ಮನೆಗೆ ನಲ್ಲಿ ಸಂಪರ್ಕ ಮಾಡಿಸಿಲ್ಲ. ಪುರಸಭೆಯ ಕಟ್ಟಡ ನಿರ್ಮಾಣ ಬಾಕಿ ಇದೆ. ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದರು.

ಶಾಸಕ ಜಿ.ಟಿ.ದೇವೇಗೌಡ ಮಾತನಾಡಿ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಇಂಜಿನಿಯರ್ ಗಳ ಕೊರತೆ ಇದೆ. ಮೈಸೂರಿನ ವ್ಯಾಪ್ತಿಯಲ್ಲಿ 1000 ಖಾಸಗಿ ಬಡಾವಣೆಗಳನ್ನು ಅಭಿವೃದ್ಧಿ ಮಾಡದೆ ನೀಡಿದ್ದಾರೆ. ಈ ಖಾಸಗಿ ಬಡಾವಣೆಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ನೀಡಲು ಸಾಧ್ಯವಾಗುತ್ತಿಲ್ಲ. ಖಾಸಗಿ ಬಡಾವಣೆಗಳಿಗೆ ಸೌಲಭ್ಯಗಳನ್ನು ಒದಗಿಸಲು ಕ್ರಮ ವಹಿಸಬೇಕು ಎಂದು ಸಚಿವರಲ್ಲಿ ಮನವಿ ಮಾಡಿದರು.

ಶಾಸಕ ಮಂತರ್ ಗೌಡ ಮಾತನಾಡಿ ಅಮೃತ್ 2 ಯೋಜನೆಯಡಿ ಮನೆ ಮನೆಗೆ ಕುಡಿಯುವ ನೀರು ನೀಡಲು ನಲ್ಲಿ ಸಂಪರ್ಕ ಕಲ್ಪಿಸಿಲ್ಲ. ಕಾಮಗಾರಿ ನಿಧಾನಗತಿಯಲ್ಲಿ ಸಾಗುತ್ತಿದೆ. 8 ವೆಟ್ ವೆಲ್ ಗಳನ್ನು ನಿರ್ಮಿಸಬೇಕಿದೆ. ವೆಟ್ ವೆಲ್ ನಿರ್ಮಿಸಲು ಜಾಗ ನೀಡಲಾಗಿದೆ. ನೆಟ್ ವರ್ಕಿಂಗ್ ಕಾಮಗಾರಿಯು ಆಗಬೇಕಿದೆ. ಮಡಿಕೇರಿ ಭಾಗದಲ್ಲಿ ಗುಡ್ಡ ಕುಸಿತಗಳು ಕಂಡುಬರುತ್ತವೆ ಆದ್ದರಿಂದ ತಡೆ ಗೋಡೆಗಳು ನಿರ್ಮಾಣವಾಗಬೇಕು. ಮಡಿಕೇರಿಯಲ್ಲಿ ಕಸ ಸಂಗ್ರಹಣೆ ಮಾಡಿ ಕಸ ಸುರಿಯಲು ಜಾಗ ಇಲ್ಲ. ಕಸವನ್ನು ವಿಂಗಡಣೆ ಮಾಡಿ ವಿಲೇವಾರಿ ಮಾಡಲು ಪಿಪಿಪಿ ಮಾದರಿಯಲ್ಲಿ ಅನುವು ಮಾಡಬೇಕು ಎಂದು ತಿಳಿಸಿದರು.

ಶಾಸಕ ಡಿ.ರವಿಶಂಕರ್ ಮಾತನಾಡಿ ಕೆ ಆರ್ ಪುರಸಭೆ ವ್ಯಾಪ್ತಿಯಲ್ಲಿ ಯುಜಿಡಿ ಕಾಮಗಾರಿ ಸಮರ್ಪಕವಾಗಿ ಆಗುತ್ತಿಲ್ಲ. ಹಲವು ಕಡೆ ಬಾಕಿ ಇದೆ. ಪೈಪ್ ಲೈನ್ ಕಾಮಗಾರಿಗೆ ರಸ್ತೆಗಳನ್ನು ಅಗೆದಿದ್ದು ವಾಹನಗಳು ಓಡಾಡಲು ತೊಂದರೆ ಆಗುತ್ತಿದೆ. ಪುರಸಭೆ ವ್ಯಾಪ್ತಿಯಲ್ಲಿ 3 ವೆಟ್ ವೆಲ್ ಗಳು ತುಂಬಿ ಹರಿಯುತ್ತವೆ ಆದ್ದರಿಂದ ಹೊಸ ವೆಟ್ ವೆಲ್ ಗಳನ್ನು ನಿರ್ಮಾಣ ಮಾಡಬೇಕು ಎಂದು ಮನವಿ ಮಾಡಿದರು. ಪೌರಾಡಳಿತ ನಿರ್ದೇಶನಾಲಯ ನಿರ್ದೇಶಕ ಪಿ.ಎಸ್.ರವೀಂದ್ರ ಮಾತನಾಡಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅನುದಾನಗಳನ್ನು ಸಕಾಲದಲ್ಲಿ ಸದ್ಬಳಕೆ ಮಾಡಿಕೊಳ್ಳಬೇಕು. ಮುಂದಿನ ವರ್ಷಕ್ಕೆ ಕೊಂಡೊಯ್ದರೆ ಎಸ್ ಆರ್ ರೇಟ್ ಹೆಚ್ಚಾಗುತ್ತದೆ. ನಗರ ಸ್ಥಳೀಯ ಸಂಸ್ಥೆಗಳು ಸಂಪನ್ಮೂಲ ಕ್ರೋಢೀಕರಣ ಮಾಡಿ ಈ ಮೊತ್ತದಿಂದ ಅಭಿವೃದ್ಧಿ ಕಾರ್ಯಗಳನ್ನು ಮಾಡಬೇಕು. ಟ್ಯಾಕ್ಸ್ ಕಲೆಕ್ಷನ್ ವ್ಯವಸ್ಥಿತವಾಗಿ ಆಗ ಬೇಕು. ಅಗತ್ಯವಿರುವೆಡೆ ಕೊಳವೆ ಬಾವಿಗಳನ್ನು ಕೊರೆಸಬೇಕೆಂದರು. ಸಭೆಯಲ್ಲಿ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕರಾದ ಜಿ.ಡಿ. ಹರೀಶ್ ಗೌಡ, ವೆಂಕಟೇಶ್, ವಿಧಾನಸಭಾ ಪರಿಷತ್ ನ ಸದಸ್ಯರಾದ ಮಂಜೇಗೌಡ, ಡಿ.ತಿಮ್ಮಯ್ಯ, ಕೆ.ಶಿವಕುಮಾರ್, ವಿವೇಕಾನಂದ, ನಗರಾಭಿವೃದ್ಧಿ ಇಲಾಖೆಯ ಕಾರ್ಯದರ್ಶಿ ಬಿ.ಬಿ.ಕಾವೇರಿ ಇತರರು ಉಪಸ್ಥಿತರಿದ್ದರು.

### ನದಿ ಕಲುಷಿತ ತಡೆಯಿರಿ: ಜಿಡಿಎಚ್

**ಲಕ್ಷ್ಮಣತೀರ್ಥ ನದಿಗೆ ಹುಣಸೂರು ನಗರದ ಒಳಚರಂಡಿ ನೀರು ಸೇರುತ್ತಿದ್ದು, ನದಿ ಕಲುಷಿತವಾಗುತ್ತಿದೆ. ಈ ಬಗ್ಗೆ ನಗರಾಭಿವೃದ್ಧಿ ಸಚಿವರ ಗಮನಕ್ಕೂ ತರಲಾಗಿದೆ. ನೀರು ಸೇರದಂತೆ ತಡೆಯಲು ಕಾಮಗಾರಿಗಾಗಿ 72 ಕೋಟಿ ಎಸ್ಟಿಮೇಟ್ ಮಾಡಿ ಕಳುಹಿಸಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದ ಅವರು ಹುಣಸೂರು ನಗರಸಭೆಯಲ್ಲಿ ಸಿಬ್ಬಂದಿಗಳ ಕೊರತೆ ಇದ್ದು ಸಿಬ್ಬಂದಿಗಳ ನೇಮಕ ಮಾಡಬೇಕು ನಗರಸಭೆ ಆಸ್ತಿಗಳ ಒತ್ತುವರಿ ಆಗಿವೆ. ಇವುಗಳ ಒತ್ತುವರಿ ತೆರವು ಆಗಬೇಕು. ಇದರಿಂದ ನಗರಸಭೆಗೆ ಆದಾಯ ಬರುತ್ತದೆ ಎಂದು ಶಾಸಕ ಜಿ.ಡಿ.ಹರೀಶ್‌ಗೌಡ ಮನವಿ ಮಾಡಿದರು.**

# ಬ್ಯಾಂಕ್ ವಿರುದ್ಧದ ಅಪಪ್ರಚಾರಕ್ಕೆ ಕಿವಿಗೊಡದಿರಿ: ಜೆ.ಯೋಗೇಶ್

ಮೈಸೂರು: ನಗರದಲ್ಲಿ ಗಾಂಧಿ ಚೌಕದಲ್ಲಿರುವ ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ಆರ್ಥಿಕವಾಗಿ ಸದೃಢವಾಗಿದ್ದು, ಅಪಪ್ರಚಾರಕ್ಕೆ ಸದಸ್ಯರು, ಗ್ರಾಹಕರು ಕಿವಿಗೊಡಬಾರದು ಎಂದು ಬ್ಯಾಂಕ್ ಅಧ್ಯಕ್ಷ ಜೆ.ಯೋಗೇಶ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 1906ರಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಸಾಮಾಜಿಕ ಕಳಕಳಿ ಹಾಗೂ ದೂರದೃಷ್ಟಿಯ ಕೊಡುಗೆಯಾಗಿ ಸ್ಥಾಪಿತವಾಗಿರುವ ನಮ್ಮ ಬ್ಯಾಂಕ್ 120ಕ್ಕೂ ಹೆಚ್ಚಿನ ವರ್ಷಗಳಿಂದ ಎಲ್ಲಾ ಸದಸ್ಯರು ಹಾಗೂ ಗ್ರಾಹಕರಿಗೆ ಸಮರ್ಪಕ ಸೇವೆಯನ್ನು ನೀಡುತ್ತಿದ್ದು, ಲಾಭಾದಾಯವಾಗಿದೆ ಎಂದರು.

ಇತ್ತೀಚೆಗೆ ಬ್ಯಾಂಕಿನ ಅಭಿವೃದ್ಧಿ ಸಹಿಸಲಾಗದ ಕಿಡಿಗೇಡಿಗಳು ಬ್ಯಾಂಕಿನ ಹೆಸರು ಹಾಳು ಮಾಡುವ ಉದ್ದೇಶದಿಂದ ಸಾಮಾಜಿಕ ಮಾಧ್ಯಮದಲ್ಲಿ ಆಧಾರ ರಹಿತವಾದ ಸುಳ್ಳು ಮಾಹಿತಿಯನ್ನು ಹರಡಿ ಬ್ಯಾಂಕಿನ ತೇಜೋವಧೆ ಮಾಡುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಠೇವಣಿದಾರರು ಹಾಗೂ ಸದಸ್ಯರು ಸಾಮಾಜಿಕ ಜಾಲತಾಣದಲ್ಲಿ ಹರಡುತ್ತಿರುವ ಸುಳ್ಳು ಸುದ್ದಿಯನ್ನು ನಂಬಬೇಡಿ. ಇವೆಲ್ಲವೂ ಸತ್ಯಕ್ಕೆ ದೂರವಾದದು. ಹೀಗಾಗಿ ಏನಾದರೂ ಅನುಮಾನಗಳಿದ್ದಲ್ಲಿ ಬ್ಯಾಂಕಿಗೆ ಭೇಟಿ ನೀಡಿ ಪರಿಹರಿಸಿಕೊಳ್ಳಬಹುದಾಗಿದೆ ಎಂದರು.



ಕೆಲವೊಂದು ಮಾಧ್ಯಮಗಳಿಗೆ ಬ್ಯಾಂಕಿನಿಂದ ಜಾಹೀರಾತು ನೀಡಲಾಗುತ್ತಿತ್ತು. ನಂತರ ಅದನ್ನು ಸ್ಥಗಿತಗೊಳಿಸಿದ ಹಿನ್ನೆಲೆಯಲ್ಲಿ ಆ ಮಾಧ್ಯಮದವರು ಬ್ಯಾಂಕಿನ ವಿರುದ್ಧ ಅಪಪ್ರಚಾರದ ಕೆಲಸ ಮಾಡುತ್ತಿದ್ದಾರೆ. ಈ ರೀತಿ ಬ್ಯಾಂಕಿನ ಬಗ್ಗೆ ತೇಜೋವಧೆ ಮಾಡುತ್ತಿರುವವರ ವಿರುದ್ಧ ಈಗಾಗಲೇ ಕಾನೂನು ಹೋರಾಟ ಆರಂಭಿಸಲಾಗಿದ್ದು, ಮಾನನಷ್ಟ ಮೊಕದ್ದಮೆ ಹೂಡಲಾಗಿದೆ ಎಂದು ತಿಳಿಸಿದರು. ಮಾಜಿ ಅಧ್ಯಕ್ಷ ಹಾಗೂ ಈಗಿನ ನಿರ್ದೇಶಕ ಎಸ್‌ಬಿಎಂ ಮಂಜು ಮಾತನಾಡಿ, ಕಳೆದ ಮಾರ್ಚ್ ಅಂತ್ಯಕ್ಕೆ ಬ್ಯಾಂಕಿನಲ್ಲಿ 33,373 ಸದಸ್ಯರಿದ್ದು, ಒಟ್ಟಾರೆ 168.68 ಕೋಟಿ ಠೇವಣಿ ಇದೆ. ಇದಲ್ಲದೆ ಕಳೆದ ಸಾಲಿನಲ್ಲಿ 1.30 ಕೋಟಿ ನಿವ್ವಳ ಲಾಭ ಗಳಿಸಿದೆ. ಒಟ್ಟಾರೆ 111 ಕೋಟಿ ಸಾಲ ವಿತರಿಸಲಾಗಿದೆ. ಇದರೊಡನೆ ಎಲ್ಲರಿಗೂ ಡಿವಿಡೆಂಟ್ ಹಾಗೂ ಠೇವಣಿಗೆ ಬಡ್ಡಿ ಸಹಾ ತಪ್ಪದೇ ನೀಡಲಾಗಿದೆ. ಭಾರತೀಯ ರಿಸರ್ವ್ ಬ್ಯಾಂಕ್ ಎಲ್ಲವೂ ಸಕ್ರಮವಾಗಿರುವ ಹಿನ್ನೆಲೆ ಬ್ಯಾಂಕಿಗೆ ಎ ಶ್ರೇಣಿ ನೀಡಿದೆ. ಈ ಬ್ಯಾಂಕನ್ನು ನಾಲ್ವಡಿಯವರು 1906 ರಲ್ಲಿ ಸ್ಥಾಪಿಸಿದ್ದು, ಅಂದಿನಿಂದಲೂ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದೆ. ಆದರೆ ಕೆಲವರು ವೈಯಕ್ತಿ ಹಿತಾಸಕ್ತಿ ಕಾರಣ ಅಪಪ್ರಚಾರ ಮಾಡುತ್ತಿದ್ದಾರೆ ಎಂದರು. ಬ್ಯಾಂಕಿನ ನಿರ್ದೇಶಕ ಪಡುವಾರಹಳ್ಳಿ ಎಂ.ರಾಮಕೃಷ್ಣ ಮಾತನಾಡಿ, ಬ್ಯಾಂಕ್ ಸದೃಡವಾಗಿದ್ದು, ಠೇವಣಿದಾರರಿಗೆ ಒಂದು ದಿನ ತಡವಾಗದೇ ನಿಗದಿತ ದಿನಕ್ಕೆ ಅವರ ಖಾತೆಗೆ ಬಡ್ಡಿ ಹಾಕುತ್ತಿದೆ. ಪ್ರತಿವರ್ಷವೂ ಡಿವಿಡೆಂಟ್ ಶೇ.10 ಕ್ಕೂ ಮೀರದಂತೆ ಕೊಟ್ಟಿದೆ. ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಉಪಾಧ್ಯಕ್ಷ ಟಿ.ರವಿ, ನಿರ್ದೇಶಕರಾದ ಎನ್. ಯೋಗಾನಂದ್, ಜಿ.ನಿರಂಜನ್, ಆರ್.ಸೋಮಣ್ಣ, ಪ್ರಮೀಳಾ, ರಾಜೇಶ್ವರಿ, ರಾಜಕೀಯ ರವಿಕುಮಾರ್, ಕೆ.ಗಿರೀಶ್, ಚಂದ್ರಶೇಖರ್, ವೃತ್ತಿಪರ ನಿರ್ದೇಶಕ ಸಿ.ಎಸ್.ರಾಮಕೃಷ್ಣಯ್ಯ, ಹೆಚ್.ಹರೀಶ್ ಕುಮಾರ್, ಕಾರ್ಯದರ್ಶಿ ಕೆ.ಹರ್ಷಿತ್ ಗೌಡ ಉಪಸ್ಥಿತರಿದ್ದರು.

# ಮಾನವೀಯ ಮೌಲ್ಯಗಳಿಂದ ಶಾಂತಿ



ಮೈಸೂರು: ವೇಗವಾಗಿ ಬದಲಾಗುತ್ತಿರುವ ಇಂದಿನ ಜಗತ್ತಿನಲ್ಲಿ ಮನುಷ್ಯನು ಆಧ್ಯಾತ್ಮಿಕವಾಗಿ ತನ್ನನ್ನು ತಾನು ರೂಪಿಸಿಕೊಂಡು, ಸಮರ್ಪಣಾ ಮನೋಭಾವದಿಂದ ಬದುಕುವ ಅಗತ್ಯವಿದೆ ಎಂದು ಎಂಎಲ್ಸಿ ರಘು ಕೌಟಿಲ್ಯ ಅಭಿಪ್ರಾಯಪಟ್ಟರು.

ನಗರದ ಯಾದವಗಿರಿಯಲ್ಲಿರುವ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಆವರಣದಲ್ಲಿ ಆಯೋಜಿಸಲಾಗಿದ್ದ ರಕ್ಷಾಬಂಧನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. "ಪವಿತ್ರ ಪರ್ವಗಳನ್ನು ಕೇವಲ ಸಂಪ್ರದಾಯದ ಆಚರಣೆಯಾಗಿ ನೋಡದೆ, ಅವುಗಳ ಆಂತರಿಕ ಆಶಯವನ್ನು ಅರಿತು ಆಚರಿಸಬೇಕು. ಯಾವುದೇ ಕೆಲಸದಲ್ಲಿ ಏಕಾಗ್ರತೆ ಹಾಗೂ ಶ್ರದ್ಧೆ ಇದ್ದಾಗ ಮಾತ್ರ ನಿಜವಾದ ಫಲ ಸಿಗುತ್ತದೆ. ತಂತ್ರಜ್ಞಾನದ ಯುಗದಲ್ಲಿ ಬಾಹ್ಯ ಬೆಳವಣಿಗೆಯೊಂದಿಗೆ ಆಂತರಿಕ ಆಧ್ಯಾತ್ಮಿಕ ಬಲವೂ ಮುಖ್ಯ. ಸಾರ್ವಜನಿಕ ಜೀವನದಲ್ಲಿರುವವರು ಆಧ್ಯಾತ್ಮಿಕ ವಿಚಾರಗಳ ಕುರಿತು ಮಾತನಾಡುವ ಮುನ್ನ ಆತ್ಮಶುದ್ಧಿಗೆ ಮಹತ್ವ ನೀಡಬೇಕು. ಆತ್ಮಶುದ್ಧಿ, ಪರಸ್ಪರ ಪ್ರೀತಿ ಹಾಗೂ ಸಮರ್ಪಣೆಯ ಮೂಲಕವೇ ಸಮಾಜದಲ್ಲಿ ಶಾಂತಿ–ಸೌಹಾರ್ದತೆ ಸ್ಥಾಪಿಸಲು ಸಾಧ್ಯ. ಬಾಂಧವ್ಯ ಗಟ್ಟಿಗೊಳಿಸುವ ರಕ್ಷಾಬಂಧನದ ವಿಶಾಲ ಮಾನವೀಯ ಸಂದೇಶವನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು" ಎಂದರು. ಬ್ರಹ್ಮಾಕುಮಾರಿ ಲಕ್ಷ್ಮೀಜಿ ಇದ್ದರು.

## ಮೊದಲ ಪುಟದಿಂದ

### ಸಿಎಂ, ಡಿಸಿಎಂ ಪ್ರತ್ಯೇಕ ಬರ ಪರಿಶೀಲನೆ ಪ್ರವಾಸ

ಮೂಲಕ ಗದಗಕ್ಕೆ ತೆರಳುವರು. ಗದಗ ಜಿಲ್ಲೆ ವಿವಿಧ ಬರಪೀಡಿತ ಪ್ರದೇಶಗಳಿಗೆ ತೆರಳಿ ಅಲ್ಲಿನ ಪರಿಸ್ಥಿತಿಯನ್ನು ಪರಾಮರ್ಶೆ ನಡೆಸಲಿದ್ದಾರೆ. ಸುಮಾರು 5 ಗಂಟೆ ಕಾಲ ಗದಗ ಜಿಲ್ಲೆಯಲ್ಲಿ ಮುಖ್ಯಮಂತ್ರಿ ಇರಲಿದ್ದಾರೆ. ಸಂಜೆ ಹುಬ್ಬಳ್ಳಿಯಿಂದ ವಿಶೇಷ ವಿಮಾನದಲ್ಲಿ ಬೆಂಗಳೂರಿಗೆ ಮರಳುವರು. ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ.ಜಿ.ಪರಮೇಶ್ವರ್ ಸೆ.1 ಹಾಗೂ 2ರಂದು ಮೈಸೂರು ಹಾಗೂ ಚಾಮರಾಜನಗರ ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ. ಮಂಗಳವಾರ ಬೆಳಿಗ್ಗೆ 10ರಿಂದ ಮೈಸೂರು ಜಿಲ್ಲೆಯ ಕೃಷ್ಣರಾಜನಗರ, ಹುಣಸೂರು ಹಾಗೂ ತಿ.ನರಸೀಪುರ ತಾಲ್ಲೂಕುಗಳ ಬರಪೀಡಿತ ಸ್ಥಳಗಳ ಪರಿಶೀಲನೆ ನಡೆಸುವರು. ಸಂಜೆ 5ರಿಂದ ಮೈಸೂರು ಜಿಲ್ಲಾಪಂಚಾಯಿತಿ ಸಭಾಂಗಣದಲ್ಲಿ ಬರ ಕುರಿತು ಅಧಿಕಾರಿಗಳ ಸಭೆಯನ್ನು ನಡೆಸಲಿದ್ದಾರೆ. ಬುಧವಾರ ಬೆಳಿಗ್ಗೆ ಗುಂಡ್ಲುಪೇಟೆ, ಚಾಮರಾಜನಗರ, ಯಳಂದೂರು ಹಾಗೂ ಹನೂರು ತಾಲ್ಲೂಕನ ಬರ ಪರಿಸ್ಥಿತಿ ಪರಾಮರ್ಶೆ ಮಾಡುವರು.

### ಕನ್ನಾಳೆ ನಿವಾಸಕ್ಕೆ ಸಿಐಡಿ ದಾಳಿ

ಬಿಜೆಪಿ, ಕಾಂಗ್ರೆಸ್ ನಾಯಕರ ಜೊತೆ ಉತ್ತಮ ಒಡನಾಟ ಬೆಳಸಿಕೊಂಡು ಮಧ್ಯವರ್ತಿ ಕೆಲಸ ಮಾಡುತ್ತಿದ್ದ. ರಾಜಕೀಯ ನಾಯಕರ ಜೊತೆ ಇರುವ ಫೋಟೋ ತೋರಿಸಿ ಬಸವರಾಜ್ ಕನ್ನಾಳೆ ಪರೀಕ್ಷಾರ್ಥಿಗಳನ್ನು ಖೆಡ್ಡಾಗೆ ಕೆಡುವುತ್ತಿದ್ದ ಎನ್ನಲಾಗಿದೆ. ಬೆಂಗಳೂರಿನಲ್ಲಿ ಎರಡು ವರ್ಷದಲ್ಲಿಯೇ ಸ್ವಂತ ಮನೆ, ಭಾಲ್ಕಿ ಪಟ್ಟಣದಲ್ಲಿ ಬೃಹತ್ ಮನೆ, ಸ್ವಗ್ರಾಮದಲ್ಲಿ ಕೋಟ್ಯಂತರ ಮೌಲ್ಯದ ಜಮೀನು ಖರೀದಿ ಮಾಡಿದ್ದಾನೆ ಎನ್ನಲಾಗಿದೆ.

### ಕೆಪಿಎಸ್‌ಸಿ ಸದಸ್ಯೆ ಶಾಂತ ನಾಪತ್ತೆ: ಲುಕೌಟ್ ನೋಟಿಸ್

ಸಿಐಡಿಯಿಂದಲೂ ಲುಕೌಟ್ ನೋಟಿಸ್ ಜಾರಿ ಮಾಡಲಾಗಿದೆ. ದೇಶದ ಎಲ್ಲಾ ವಿಮಾನ ನಿಲ್ದಾಣಗಳಲ್ಲಿ ನಿಗಾವಹಿಸಲಾಗಿದೆ.

### ನಿಮಗೆ ನೀರು ಬರುತ್ತಿಲ್ಲವೇ?

ಕೋರ್ಟ್ ಆಕ್ಷೇಪ ವ್ಯಕ್ತಪಡಿಸಿದೆ. ಕರ್ನಾಟಕ ನೀರು ಹರಿಸುತ್ತಿದೆಯಲ್ಲ ಎಂದು ಕೋರ್ಟ್ ತಿಳಿಸಿತು. ಬಳಿಕ ವಿಚಾರಣೆಯನ್ನು ಸೆ.15ಕ್ಕೆ ಮುಂದೂಡಲಾಯಿತು. ಬಾಕಿ ನೀರು ಹರಿಸುವ ವಿಚಾರಕ್ಕೆ ಸಂಬಂಧಿಸಿದಂತೆ ನೀವು ಸಿಡಬ್ಲು ಎಂಎ ಅನ್ನು ಸಂಪರ್ಕಿಸಿ ಎಂದು ಸುಪ್ರೀಂ ಕೋರ್ಟ್ ಸೂಚಿಸಿತು

ತಮಿಳುನಾಡು ಪರಿಷ್ಕೃತ ಅರ್ಜಿ ಸಲ್ಲಿಕೆ ಮಾಡಿ. ಸಿಡಬ್ಲು ಎಂಎ ಪ್ರತಿ ಹದಿನೈದು ದಿನಕ್ಕೊಮ್ಮೆ ಸಭೆ ನಡೆಸಿ ಪರಿಷ್ಕೃತ ಮಾಹಿತಿ ಆಧಾರದ ಮೇಲೆ ನೀರು ಹರಿಸಲು ಸೂಚಿಸಬೇಕು ಎಂದು ಮನವಿ ಸಲ್ಲಿಸಿತ್ತು.

### ಬಿಜೆಪಿ ವಿರುದ್ಧವೇ ಎಚ್‌ಡಿಕೆ ಹೋರಾಟ

ಮಾಡುತ್ತೇನೆ ಎಂಬ ಕುಮಾರಸ್ವಾಮಿ ಅವರ ಹೇಳಿಕೆ ಬಗ್ಗೆ ಕೇಳಿದಾಗ, ಬಹಳ ಸಂತೋಷ ಎಂದರು. ಕೆಪಿಎಸ್ ಸಿ ಹಗರಣದಲ್ಲಿ ಬಿಜೆಪಿ ನಾಯಕರ ಬಂಧನ ಬಗ್ಗೆ ಕೇಳಿದಾಗ, ನಾನು ತನಿಖೆಯಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ. ಮಾಹಿತಿ ಪಡೆಯುತ್ತೇನೆ. ಬಿಜೆಪಿಯಲ್ಲಿ ಆಂತರಿಕ ಕಲಹ ನಡೆಯುತ್ತಿದೆ. ಕೆಪಿಎಸ್ ಸಿಗೆ ನೇಮಕ ಮಾಡಿದವರು ಯಾರು? ಎಂದು ಪ್ರಶ್ನಿಸಿದರು.

## ಮೊದಲ ಪುಟದಿಂದ

### ಜೈಲು ಅಧೀಕ್ಷಕಿ ಎತ್ತಂಗಡಿ

ಮಾಹಿತಿ ನೀಡದೆ ಕೈದಿಯನ್ನು ಆಸ್ಪತ್ರೆಗೆ ಕಳುಹಿಸಿದ್ದಕ್ಕೆ ನ್ಯಾಯಾಧೀಶರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದರು. ಅಲ್ಲದೆ, ಸ್ಥಳದಲ್ಲೇ ಜೈಲು ಅಧೀಕ್ಷಕಿ ಶಾಂತಮ್ಮ ಅವರನ್ನು ತರಾಟೆಗೆ ತೆಗೆದುಕೊಂಡಿದ್ದರು.

### ಶರಣ ತತ್ವವೂ ಶ್ರೇಷ್ಠ

ಧರ್ಮಗಳ ಕುರಿತು ಅಧ್ಯಯನ ಮಾಡುವುದಾಗಿ ಹೇಳಿದರು. ಕುಕನೂರಿನಲ್ಲಿ ಮುಸ್ಲಿಂ ಸಮಾಜದ ಕಾರ್ಯಕ್ರಮದಲ್ಲಿ ಮಾತನಾಡಿ, ಎಲ್ಲಾ ಧರ್ಮಗಳಿಗಿಂತ ಇಸ್ಲಾಂ ಧರ್ಮವೇ ಶ್ರೇಷ್ಠ ಎಂಬ ಹೇಳಿಕೆ ಭಾರೀ ವಿವಾದಕ್ಕೆ ಕಾರಣವಾಗಿತ್ತು. ವಿವಾದದ ಹಿನ್ನೆಲೆಯಲ್ಲಿ ಯಲಬುರ್ಗಾ ಆಂಜನೇಯ ದೇವಸ್ಥಾನಕ್ಕೆ ಭೇಟಿ ನೀಡಿದ್ದರು.

### ತಮಿಳುನಾಡಿಗೆ ಹೇಮೆಯಿಂದ ಈಗ ಹೆಚ್ಚು ನೀರು ಬಿಡುಗಡೆ

ಸೋಮವಾರ ಮತ್ತೆ ಸುಮಾರು 1800 ಕ್ಯುಸೆಕ್ ನಷ್ಟು ಏರಿಕೆ ಮಾಡಲಾಗಿದೆ. ಹೇಮಾವತಿ ಜಲಾಶಯದ ನೀರಿನ ಮಟ್ಟವು 2912.70 ಅಡಿಯಿದೆ. ಸದ್ಯ ಶೇ 78ರಷ್ಟು ನೀರು ಸಂಗ್ರಹವಿದೆ. 28.78 ಟಿಎಂಸಿ ನೀರು ಲಭ್ಯವಿದೆ. ಹೇಮಾವತಿಯಿಂದ ಹರಿಬಿಡುವ ನೀರು ನೇರವಾಗಿ ತಮಿಳುನಾಡಿಗೆ ಹೋಗುವುದಿಲ್ಲ. ಕೃಷ್ಣರಾಜಸಾಗರ ಜಲಾಶಯವನ್ನು ಸೇರುತ್ತದೆ. ಆನಂತರ ಅಲ್ಲಿಂದ ನೀರು ಹರಿಸಲಾಗುತ್ತದೆ. ಹೇಮಾವತಿ ಜಲಾನಯನ ಪ್ರದೇಶವು ಹಾಸನ, ಮಂಡ್ಯ, ತುಮಕೂರು ಹಾಗೂ ಮೈಸೂರು ಜಿಲ್ಲೆಯವರೆಗೂ ಇದೆ. ಹೇಮಾವತಿ ನಾಲೆಗಳ ಮೂಲಕ ಈ ಜಿಲ್ಲೆಗಳ ನೀರಾವರಿಗೆ ನೀರನ್ನು ಹರಿಸಲಾಗುತ್ತಿದೆ.

### ಬೆಂಗಳೂರಿಗೆ ಯಾವಾಗ ಬರುತ್ತೀರಿ?

ಹುದ್ದೆಗಳ ಆಯ್ಕೆ ಮತ್ತು ನೇಮಕಾತಿಯಲ್ಲಿ ನಡೆದಿರುವ ಅಕ್ರಮದಿಂದ ನುಣುಚಿಕೊಳ್ಳಲು ಸಾಧ್ಯವಿಲ್ಲ. ಅಭ್ಯರ್ಥಿಗಳನ್ನು ರೆಸಾರ್ಟ್‌ನಲ್ಲಿ ಕೂರಿಸಿ ಪ್ರಶ್ನೆ ಪತ್ರಿಕೆಗಳನ್ನು ಕೊಟ್ಟು ಓಎಂಆರ್ ಶೀಟಗಳಲ್ಲಿ ಗುರುತು ಹಾಕಿಸಿರುವ ಅಕ್ರಮದಿಂದ ಅವರು ಪಾರಾಗಲು ಸಾಧ್ಯವಿಲ್ಲ. ಇದು ನನಗೆ ಸಂಬಂಧವಿಲ್ಲ ಎಂದು ಅವರು ಹೇಗೆ ಹೇಳುತ್ತಾರೆ ಎಂದು ಸಚಿವ ಕುಮಾರಸ್ವಾಮಿ ವಾಗ್ದಾಳಿ ನಡೆಸಿದರು.

### ಎಚ್‌ಡಿಕೆ ಬಾಂಬ್ ಸಿಡಿಸಲಿ: ಎಚ್.ಸಿ.ಬಾಲಕೃಷ್ಣ ಲೇವಡಿ

ಬಿಜೆಪಿ ಪಾದಯಾತ್ರೆ ವಿಚಾರವಾಗಿ ಪ್ರತಿಕ್ರಿಯಿಸಿ, ವಿರೋಧ ಪಕ್ಷದವರು ಇರೋದು ನಮ್ಮ ತೆಗಳೋಕೆ. ಬಿಜೆಪಿಯವರು ನಮ್ಮನ್ನು ಹೊಗುಳುತ್ತಾರೆಯೇ? ನಮ್ಮನ್ನು ಬೈದುಕೊಂಡು ಓಡಾಡುವುದೇ ಅವರ ಕೆಲಸ. ನಾಗೇಂದ್ರ ಆರೋಪಿ ಅಷ್ಟೇ ಅಪರಾಧಿಯಲ್ಲ. ವಿರೋಧ ಪಕ್ಷದವರು ನಮ್ಮ ಪಕ್ಷಕ್ಕೆ ಕೆಟ್ಟ ಹೆಸರು ಬರಲಿ ಎಂದು ಈ ರೀತಿ ಮಾಡುತ್ತಿದ್ದಾರೆ. ಪಕ್ಷ ಎಂದ ಮೇಲೆ ಸಣ್ಣ ಪುಟ್ಟ ಸಮಸ್ಯೆ ಎದುರಾಗುತ್ತದೆ. ಈಗಗಲೇ ಈ ಪ್ರಕರಣ ಕೋರ್ಟ್ ನಲ್ಲಿದೆ. ಕೋರ್ಟ್ ನಲ್ಲಿ ಏನಾಗುತ್ತೋ ನೋಡೋಣ ಎಂದು ಹೇಳಿದರು.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

### ವಾಹನ ಡಿಕ್ಕಿ: ಕುರಿ ಸಾವು

ಗುಂಡ್ಲುಪೇಟೆ, ಆ.31:ಅಪರಿಚಿತ ಟಾಟಾ ಏಸ್ ವಾಹನ ಡಿಕ್ಕಿ ಹೊಡೆದ ಪರಿಣಾಮ ಕುರಿಯೊಂದು ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ತಾಲೂಕಿನ ಕಬ್ಬಹಳ್ಳಿ ಗ್ರಾಮದಲ್ಲಿ ನಡೆದಿದೆ.

ಕುರಿ ಮಾಲೀಕ ನಾಗಮಲ್ಲೇಗೌಡ ಅವರು ನೀಡಿದ ಮಾಹಿತಿಯಂತೆ, ಅಪರಿಚಿತ ಟಾಟಾ ಏಸ್ ವಾಹನವು ಕುರಿಗೆ ಡಿಕ್ಕಿ ಹೊಡೆ ದಿದೆ. ಡಿಕ್ಕಿಯ ಬಳಿಕ ವಾಹನವನ್ನು ನಿಲ್ಲಿಸದೆ ಚಾಲಕ ಪರಾರಿಯಾಗಿದ್ದು, ಗಂಭೀರವಾಗಿ ಗಾಯಗೊಂಡಿದ್ದ ಕುರಿ ಸ್ಥಳದಲ್ಲೇ ಮೃತಪಟ್ಟಿದೆ. ಘಟನೆಯ ಕುರಿತು ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡಲಾಗಿದ್ದು, ಅಪಘಾತಕ್ಕೆ ಕಾರಣವಾದ ವಾಹನವನ್ನು ಪತ್ತೆಹಚ್ಚಿ ಸೂಕ್ತ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಲಾಗಿದೆ.



### ಅಪರಿಚಿತ ವಾಹನ ಡಿಕ್ಕಿ: ಮುಳ್ಳುಹಂದಿ ಸಾವು

ಗುಂಡ್ಲುಪೇಟೆ.:ತಾಲೂಕಿನ ತೆರಕಣಾಂಬಿ ಗ್ರಾಮದಿಂದ ದೇಪಾಪುರ ಗ್ರಾಮಕ್ಕೆ ಹೋಗುವ ರಸೆಯಲ್ಲಿ ಅಪರಿಚಿತ ವಾಹನವೊಂದು ಡಿಕ್ಕಿ ಹೊಡೆದ ಪರಿಣಾಮ ಮುಳ್ಳುಹಂದಿಯೊಂದು ಮೃತಪಟ್ಟಿರುವ ಘಟನೆ ನಡೆದಿದೆ.



ತೆರಕಣಾಂಬಿಯಿಂದ ದೇಪಾಪುರ ಗ್ರಾಮಕ್ಕೆ ಹೋಗುವ ಡಬಲ್ ರೋಡ್ ಬಳಿ ಈ ಘಟನೆ ನಡೆದಿದ್ದು, ಯಾವುದೋ ಅಪರಿಚಿತ ವಾಹನ ಡಿಕ್ಕಿ ಹೊಡೆದ ರಭಸಕ್ಕೆ ಸ್ಥಳದಲ್ಲೇ ಮುಳ್ಳು ಹಂದಿ ಮೃತಪಟ್ಟಿದೆ.

**4ನೇ ತಂಡದವರಿಗೆ ಆರು ದಿನಗಳ ಪ್ರವೇಶಾತಿ ತರಬೇತಿಗೆ ಚಾಲನೆ**

# ಸೆಸ್ಕ್ ಜೂನಿಯರ್ ಪವರ್‌ಮ್ಯಾನ್‌ಗಳಿಗೆ ತರಬೇತಿ

ಮೈಸೂರು: ಚಾಮುಂಡೇಶ್ವರಿ ವಿದ್ಯುತ್ ಸರಬ ರಾಜು ನಿಗಮ ನಿಯಮಿತ (ಸೆಸ್ಕ್) ವತಿಯಿಂದ ನೂತನವಾಗಿ ನೇಮಕಗೊಂಡಿರುವ ಜೂನಿಯರ್ ಪವರ್‌ಮ್ಯಾನ್‌ಗಳ 4ನೇ ತಂಡದವರಿಗೆ ಆರು ದಿನ ಗಳ ಪ್ರವೇಶಾತಿ ತರಬೇತಿಗೆ ಸೋಮವಾರ ಚಾಲನೆ ನೀಡಲಾಯಿತು.



ಮೈಸೂರಿನ ಕಡಕೊಳದಲ್ಲಿರುವ ಕೆಇಬಿ ಇಂಜಿ ನಿಯರ್ಸ್ ಅಸೋಸಿಯೇಷನ್ ಸಭಾಂಗಣದಲ್ಲಿ ಆಯೋಜಿಸಿರುವ ತರಬೇತಿ ಕಾರ್ಯಕ್ರಮದ ಮೊದಲ ದಿನ ದಂದು, ವಿದ್ಯುತ್ ವಿತರಣಾ ವ್ಯವಸ್ಥೆ, ಟ್ರಾನ್ಸ್‌ಫಾ ರ್ಮರ್ ನಿರ್ವಹಣೆ, ಸುರಕ್ಷತಾ ಕ್ರಮಗಳು ಹಾಗೂ ವಿದ್ಯುತ್ ಕಳ್ಳತನ ತಡೆಗಟ್ಟಲು ಅನುಸರಿಸಬೇಕಾದ ಕ್ರಮಗಳು ಸೇರಿದಂತೆ ಇತರೆ ಪ್ರಮುಖ ವಿಷಯಗಳ ಕುರಿತಂತೆ ಸಂಪನ್ಮೂಲ ವ್ಯಕ್ತಿಗಳು ಪ್ರಾತ್ಯಕ್ಷಿಕೆ ಹಾಗೂ ವಿಡಿಯೋಗಳ ಮೂಲಕ ಸಂಬಂಧಿಸಿದ ಅಧಿಕಾರಿಗಳು ತರಬೇತಿ ನೀಡಿದರು.

ಮೊದಲ ದಿನದಂದು ನಡೆದ ತರಬೇತಿಯ ಮೊದಲ ಅವಧಿಯಲ್ಲಿ ಮಾತನಾಡಿದ ಸೆಸ್ಕ್ ತರಬೇತಿ ಶಾಖೆ ಉಪ ಪ್ರಧಾನ ವ್ಯವಸ್ಥಾಪಕಿ ಎಂ. ವೈ.ಹೇಮಾ, "ಪವರ್‌ಮ್ಯಾನ್‌ಗಳು ಗ್ರಾಹಕರು ಹಾಗೂ ಸೆಸ್ಕ್ ನಡುವಿನ ಸಂಪರ್ಕದ ಸೇತುವೆಯಾಗಿರುತ್ತಾರೆ. ಹೀಗಾಗಿ ಅವರುಗಳು ಗ್ರಾಹಕರೊಂದಿಗೆ ಸಂಯಮ, ಸಹನೆ, ಸೌಹಾರ್ದತೆಯಿಂದ ನಡೆದುಕೊಂಡು, ಅಡಚಣೆರಹಿತ ಹಾಗೂ ಗುಣಮಟ್ಟದ ವಿದ್ಯುತ್ ಪೂರೈಕೆ ಮಾಡುವುದಕ್ಕೆ ಮೊದಲ ಆದ್ಯತೆ ನೀಡಬೇಕಿದೆ. ಆದ್ದರಿಂದ ಕರ್ತವ್ಯದಲ್ಲಿ ಯಾವುದೇ ತಪ್ಪುಗಳು ಸಂಭವಿಸಿದಾಗ ಅದನ್ನು ಸರಿಪಡಿಸಲು ವಿಳಂಬ ಮಾಡಬಾರದು. ಅದರಲ್ಲೂ ಜೀವಕ್ಕೆ ಹಾನಿಯಾಗುವಂತಹ ತಪ್ಪುಗಳನ್ನು ಮಾಡದಂತೆ ಹೆಚ್ಚಿನ ಎಚ್ಚರಿಕೆ ವಹಿಸಬೇಕು. ಗ್ರಾಹಕರಿಗೆ ಸ್ಪರ್ಧಾತ್ಮಕ ದರದಲ್ಲಿ ಗುಣಮಟ್ಟದ ತಡೆರಹಿತ ವಿದ್ಯುತ್ ಒದಗಿಸುವುದು ಸೆಸ್ಕ್‌ನ ಪ್ರಮುಖ ಧ್ಯೇಯವಾಗಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸೇರಿದಂತೆ ವಿವಿಧ ಸಂಸ್ಥೆಗಳು ಹಾಗೂ ಮುಖ್ಯವಾಗಿ ಗ್ರಾಹಕರ ಸಹಕಾರದೊಂದಿಗೆ ಈ ಗುರಿ ಸಾಧಿಸಲು ನಿರಂತರವಾಗಿ ಕಾರ್ಯನಿರ್ವಹಿಸಬೇಕಿದೆ" ಎಂದರು.

ನಂತರದ ಅವಧಿಗಳಲ್ಲಿ ಜೂನಿಯರ್ ಪವರ್‌ಮ್ಯಾನ್‌ಗಳ ಕರ್ತವ್ಯ ಹಾಗೂ ಲೈನ್ ಗಳ ಸಂರಕ್ಷಣೆ ಮಾಡುವ ಕುರಿತು ನಿವೃತ್ತ ಅಧೀಕ್ಷಕ ಇಂಜಿನಿಯರ್ ವೈರಮುಡಿ, ಟ್ರಾನ್ಸ್‌ಫಾರ್ಮರ್ ನಿರ್ವಹಣೆ ಕುರಿತು ನಿವೃತ್ತ ಕಾರ್ಯನಿರ್ವಾಹಕ ಇಂಜಿನಿಯರ್ ಎಚ್.ಸಿ. ಮೋಹನ್ ಶಂಕರ್ ಹಾಗೂ ವಿದ್ಯುತ್ ಸುರಕ್ಷತೆ ಕುರಿತು ನಿವೃತ್ತ ಕಾರ್ಯನಿರ್ವಾಹಕ ಇಂಜಿನಿಯರ್ ಜಿ.ಎಸ್. ವಿಶ್ವನಾಥ್ ಅವರು ಸೂಕ್ತ ಮಾಹಿತಿಯೊಂದಿಗೆ ತರಬೇತಿ ನೀಡಿದರು.

#### ವಿವಿಧ ವಿಷಯಗಳ ತರಬೇತಿ

ತರಬೇತಿಯಲ್ಲಿ ವಿದ್ಯುತ್ ಮಾಪಕಗಳು, ಬಿಲ್ಲಿಂಗ್, ದರ ನಿಗದಿ, ಎಸ್‌ಒಪಿ, ಅರ್ಥಿಂಗ್, ವಿದ್ಯುತ್ ಕಳ್ಳತನ ಪತ್ತೆ, ಸೇವಾ ನಿಯಮಗಳು ಒಳಗೊಂಡಂತೆ, ಪ್ರಥಮ ಚಿಕಿತ್ಸೆ ಕುರಿತು ತರಬೇತಿ ನೀಡಲಾಗುವುದು. ಇದಲ್ಲದೆ 220 ಕೆವಿ ವಿದ್ಯುತ್ ಕೇಂದ್ರ, ಟ್ರಾನ್ಸ್‌ಫಾರ್ಮರ್ ದುರಸ್ತಿ ಕೇಂದ್ರ ಹಾಗೂ ಮೀಟರ್ ಪರೀಕ್ಷಾ ಪ್ರಯೋಗಾಲಯಗಳ ಭೇಟಿಗೂ ಅವಕಾಶ ನೀಡಲಾಗಿದೆ. ಸೆಸ್ಕ್ ತರಬೇತಿ ಶಾಖೆಯ ಸಹಾಯಕ ಪ್ರಧಾನ ವ್ಯವಸ್ಥಾಪಕಿ ಎನ್.ಜ್ಯೋತಿ, ಕೆಇಬಿ ಇಂಜಿನಿಯರ್ಸ್ ಅಸೋಸಿಯೇ ಷನ್ ತರಬೇತಿ ಸಂಸ್ಥೆಯ ಪ್ರಾಂಶುಪಾಲ ನಿವೃತ್ತ ಅಧೀಕ್ಷಕ ಇಂಜಿನಿಯರ್ ಜೆ.ಬಿ. ಯೋಗೇಗೌಡ ಇತರರಿದ್ದರು.

# ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಸಭೆ



ಚಾಮರಾಜನಗರ, ಮತದಾರರ ಪಟ್ಟಿ ವೀಕ್ಷಕರು ಹಾಗೂ ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳು ಹಾಗೂ ಚಾಮರಾಜ ನಗರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಆರ್. ವಿನೋತ್ ಪ್ರಿಯ ಅವರು ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಸಂಬಂಧ ನೋಂದಾಯಿತ ಮಾನ್ಯತೆ ಪಡೆದ ರಾಷ್ಟ್ರೀಯ ಮತ್ತು ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಸಂಬಂಧ ಕೈಗೊಳ್ಳಲಾಗಿರುವ ಪ್ರಕ್ರಿಯೆ ಕುರಿತು ಚರ್ಚಿಸಿದರು.

ಮತದಾರರ ಪಟ್ಟಿ ವಿಶೇಷ ಸಮಗ್ರ ಪೂರ್ವದಲ್ಲಿ ಜಿಲ್ಲೆಯ ನಾಲ್ಕು ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿದ್ದ ಮತದಾರರ ವಿವರ, ಮತದಾರರಿಗೆ ವಿತರಿಸಲಾಗಿದ್ದ ಗಣತಿ ನಮೂನೆ, ಭರ್ತಿ ಮಾಡಿರುವ ಗಣತಿ ನಮೂನೆಗಳ ಸ್ವೀಕಾರ, ಗಣಕೀಕರಣ ವಿವರಗಳನ್ನು ಪರಿಶೀಲಿಸಿದರು. ಚುನಾವಣಾ ಆಯೋಗದ ನಿರ್ದೇಶನದಂತೆ ಪ್ರಕಟಿಸಲಾಗಿರುವ ಕರಡು ಮತದಾರರ ಪಟ್ಟಿಯಲ್ಲಿನ ಮತದಾರರ ವಿವರ ಹಾಗೂ ಪಟ್ಟಿ ಪ್ರಕಟಣೆ ನಂತರ ಕೈಗೊಳ್ಳಲಾಗಿರುವ ಪ್ರಕ್ರಿಯೆಗಳ ಕುರಿತು ಪರಾಮರ್ಶಿಸಿದರು.

ಜಿಲ್ಲೆಯ ನಾಲ್ಕು ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿನ ಒಟ್ಟು 983 ಮತಗಟ್ಟೆಗಳ ಪೈಕಿ 1200ಕ್ಕಿಂತ ಹೆಚ್ಚು ಮತದಾರರಿರುವ ಮತಗಟ್ಟೆಗಳ ಪುನರ್ ವಿಂಗಡಣೆ ನಡೆಸಿ, ಮತದಾರರನ್ನು ವಿಂಗಡಿಸಿ ಹೊಸದಾಗಿ 47 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಇದರಿಂದ 1030 ಒಟ್ಟು ಮತಗಟ್ಟೆಗಳಿವೆ ಎಂದು ಮತದಾರರ ಪಟ್ಟಿ ವೀಕ್ಷಕರು ತಿಳಿಸಿದರು. ಕರಡು ಮತದಾರರ ಪಟ್ಟಿ ಸಂಬಂಧ ಹಕ್ಕು ಆಕ್ಷೇಪಣೆಗಳನ್ನು ಆಗಸ್ಟ್ 24 ರಿಂದ ಸೆಪ್ಟೆಂಬರ್ 23ರ ವರೆಗೆ ಸಲ್ಲಿಸಲು ಅವಕಾಶವಿದೆ. ಈ ಅವಧಿಯಲ್ಲಿ ಸ್ವೀಕೃತವಾಗುವ ಹಕ್ಕು ಆಕ್ಷೇಪನೆಗಳನ್ನು ಆಗಸ್ಟ್ 24 ರಿಂದ ಅಕ್ಟೋಬರ್ 22ರವರೆಗೆ ಸಂಬಂಧಿಸಿದ ಮತದಾರರ ನೋಂದಣಾಧಿಕಾರಿಗಳು ಇತ್ಯರ್ಥಪಡಿಸಲಿದ್ದಾರೆ ಎಂದರು.

ಅರ್ಹ ಮತದಾರರ ಹೆಸರು ಕರಡು ಮತದಾರರ ಪಟ್ಟಿಯಲ್ಲಿ ಕೈಬಿಟ್ಟು ಹೋಗಿದ್ದರೆ ಸಂಬಂಧಿಸಿದ ಮತದಾರರು ನಮೂನೆ 6ರ ಅರ್ಜಿಯ ಜೊತೆ ಘೋಷಣಾ ಪತ್ರ ಹಾಗೂ ಅಗತ್ಯ ದಾಖಲೆಗಳನ್ನು ನೀಡಿ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಲು ಅವಕಾಶವಿರುತ್ತದೆ ಎಂದು ಮತದಾರರ ಪಟ್ಟಿ ವೀಕ್ಷಕರಾದ ಆರ್. ವಿನೋತ್ ಪ್ರಿಯ ತಿಳಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ, ರಾಜಕೀಯ ಪಕ್ಷಗಳ ಪ್ರತಿನಿಧಿಗಳಾದ ಎನ್. ನಾಗಯ್ಯ, ಎ.ಹೆಚ್. ನಸ್ರುಲ್ಲಾ ಖಾನ್, ಶಂಕುತಲಾ, ಹೆಚ್.ಎಸ್. ತೋಂಟದಾರ್ಯ ಸ್ವಾಮಿ, ಎಸ್. ಶಿವರುದ್ರಸ್ವಾಮಿ, ಮತದಾರರ ನೋಂದಣಾಧಿಕಾರಿಗಳಾದ ಡಾ. ಆರ್. ವಸುಂಧರ ಹೆಗಡೆ, ಎನ್. ವಿಶ್ವನಾಥ್, ಸಹಾಯಕ ಮತದಾರರ ನೋಂದಣಾಧಿಕಾ ರಿಗಳು ಹಾಗೂ ತಹಶೀಲ್ದಾರರಾದ ಐ.ಇ. ಬಸವರಾಜು, ಕೆ.ಎನ್. ಚೈತ್ರ, ಎಸ್.ಎನ್ ನಯನ, ಬಿ. ಗಿರಿಜ, ತನ್ಮಯ್, ಅಧಿಕಾರಿಗಳು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳಿಗೂ ಅವಕಾಶ ಕೊಡಿ



ಚಾಮರಾಜನಗರ: ರಾಜ್ಯ ಸರ್ಕಾರದ ಶಿಕ್ಷಣ ಇಲಾಖೆಯು ನಡೆಸಲಾಗುತ್ತಿರುವ 15 ಸಾವಿರ ಶಿಕ್ಷಕರ ನೇಮಕಾತಿಯಲ್ಲಿ ಬಿ.ಇಡಿ., ಅಂತಿಮ ಸೆಮಿಸ್ಟರ್ (4ನೇ ಸೆಮಿಸ್ಟರ್) ವಿದ್ಯಾರ್ಥಿಗಳಿಗೂ ಸಹ ಅವಕಾಶ ಕಲ್ಪಿಸಿಕೊಡುವಂತೆ ನಗರದ ಜಿಲ್ಲಾಡಳಿತ ಭವನದಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ಟಿ.ಜವರೇಗೌಡ ಅವರ ಮುಖಾಂತರ ಅಖಿಲ ಕರ್ನಾಟಕ ಕನ್ನಡ ಮಹಾಸಭಾದ ವತಿಯಿಂದ ಮುಖ್ಯಮಂತ್ರಿಗಳಿಗೆ , ಶಿಕ್ಷಣ ಸಚಿವರಿಗೆ ಮನವಿ ಸಲ್ಲಿಸಲಾಯಿತು.

ಕರ್ನಾಟಕ ಸರ್ಕಾರದ ಶಿಕ್ಷಣ ಇಲಾಖೆಯು ಈ ಸಾರಿ 15 ಸಾವಿರ ಶಿಕ್ಷಕರನ್ನು ನೇಮಕಾತಿ ಮಾಡುತ್ತಿರುವುದು ಅತ್ಯಂತ ಸಂತೋಷದ ವಿಚಾರವಾಗಿದೆ. ಬಹಳ ವರ್ಷಗಳಿಂದ ಈ ಹಿಂದಿನ ಸರ್ಕಾರಗಳು ಮಾಡಲಾಗದಂತಹ ಶಿಕ್ಷಕರ ನೇಮಕಾತಿಯನ್ನು ತಾವು ಮಾಡಲು ಹೊರಟಿರುವ ನಿಮ್ಮ ಘನ ಸರ್ಕಾರಕ್ಕೆ ಅಭಿನಂದನೆಗಳು. ಅದರಂತೆಯೆ ಈಗಾಗಲೇ ಇದಕ್ಕೆ ಸಂಬಂಧಪಟ್ಟ ಶಿಕ್ಷಕರ ನೇಮಕಾತಿಗಳ ಅರ್ಜಿಯನ್ನು ತಾವು ಈಗಾಗಲೇ ಕರೆದಿದ್ದು ಇದಕ್ಕೆ ಪೂರಕವಾಗಿ ಪರೀಕ್ಷೆಗಳನ್ನು ತಾವು ನಡೆಸಲು ಉದ್ದೇಶಿಸಿರುತ್ತೀರಿ. ಈ ಸಂದರ್ಭದಲ್ಲಿ ರಾಜ್ಯದಲ್ಲಿ ಬಹಳಷ್ಟು ಜನ ವಿದ್ಯಾರ್ಥಿಗಳು ಬಿ.ಇಡಿ. ಅಂತಿಮ ಸೆಮಿಸ್ಟರ್ (4ನೇ ಸೆಮಿಸ್ಟರ್ನಲ್ಲಿ ವಿದ್ಯಾಭ್ಯಾಸ ನಡೆಸುತ್ತಿದ್ದಾರೆ. ಈ ತಿಂಗಳ ನವೆಂಬರ್‌ನಲ್ಲಿ ಈ ನಾಲ್ಕನೇ ಸೆಮಿಸ್ಟರ್‌ನ ಬಿ.ಇಡಿ. ಪರೀಕ್ಷೆಯೂ ಸಹ ನಡೆಯುತ್ತಿದೆ. ಈ ಸಂದರ್ಭದಲ್ಲಿ ತಾವು ಈ ಅಂತಿಮ ಸೆಮಿಸ್ಟರ್‌ನಲ್ಲಿ ವ್ಯಾಸಂಗ ಮಾಡು ತ್ತಿರುವ ವಿದ್ಯಾರ್ಥಿಗಳಿಗೂ ಸಹ 15 ಸಾವಿರ ಶಿಕ್ಷಕರ ನೇಮಕಾತಿಯಲ್ಲಿ ಅವರು ಸಹ ಅರ್ಜಿಗಳನ್ನು ಹಾಕಲು ತಾವು ಅವಕಾಶ ಮಾಡಿಕೊಡಬೇಕು ಮುಖ್ಯಮಂತ್ರಿಗಳಿಗೆ ಸಲ್ಲಿಸಿರುವ ಮನವಿಯಲ್ಲಿ ಶ್ರೀನಿವಾಸಗೌಡ ಒತ್ತಾಯಿಸಿದ್ದಾರೆ. ಈ ಸಂದರ್ಭದಲ್ಲಿ ಪಣ್ಯದಹುಂಡಿ ರಾಜು, ನಿಜಧ್ವನಿ ಗೋವಿಂದರಾಜು, ಹೊಮ್ಮ ಲೋಕೇಶ್, ಜಗದೀಶ್, ಮಂಗಲದ ಹೊಸೂರು ಶಿವಣ್ಣ, ರಾಚಪ್ಪ, ಆಟೋ ಲಿಂಗರಾಜು, ಮುತ್ತು ಇತರರು ಹಾಜರಿದ್ದರು.

### ಅರಣ್ಯ ಪ್ರದೇಶದಲ್ಲಿನ ರೈತರಿಗೆ ಸಾಗುವಳಿ ಪತ್ರ, ನಿರಪೇಕ್ಷಣಾ ಪತ್ರ, ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹ

# ಅಹೋರಾತ್ರಿ ಧರಣಿ ಆರನೇ ದಿನಕ್ಕೆ



**ಗುಂಡ್ಲುಪೇಟೆ:** ಅರಣ್ಯ ಪ್ರದೇಶದಲ್ಲಿನ ರೈತರಿಗೆ ಸಾಗುವಳಿ ಪತ್ರ ಹಾಗೂ ನಿರಪೇಕ್ಷಣಾ ಪತ್ರ ನೀಡಬೇಕು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘದ ಗುಂಡ್ಲುಪೇಟೆ ತಾಲೂಕು ಘಟಕದ ವತಿಯಿಂದ ತಾಲೂಕು ಕಚೇರಿ ಆವರಣದಲ್ಲಿ ಆರಂಭಿಸಿರುವ ಅಹೋರಾತ್ರಿ ಧರಣಿ ಶನಿವಾರಕ್ಕೆ ಆರನೇ ದಿನಕ್ಕೆ ಕಾಲಿಟ್ಟಿದೆ.

ಧರಣಿ ಸ್ಥಳದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ರೈತ ಸಂಘದ ಜಿಲ್ಲಾಧ್ಯಕ್ಷ ಶಿವಪುರ ಮಹಾದೇವಪ್ಪ, ರೈತರ ಸಮಸ್ಯೆಗಳನ್ನು ಆಲಿಸಲು ಸ್ಥಳೀಯ ಶಾಸಕರು, ಜಿಲ್ಲಾ ಉಸ್ತುವಾರಿ ಸಚಿವರು, ತಾಲೂಕು ಆಡಳಿತ, ಜಿಲ್ಲಾಧಿಕಾರಿ ಹಾಗೂ ಅರಣ್ಯ ಇಲಾಖೆಯ ಅಧಿಕಾರಿಗಳು ಯಾರೂ ಸ್ಥಳಕ್ಕೆ ಆಗಮಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ತಾಲೂಕಿನ 37 ಸರ್ವೆ ನಂಬರ್‌ಗಳಲ್ಲಿರುವ ಡಿಮ್ಡ್ ಫಾರೆಸ್ಟ್ ಪ್ರದೇಶದ ರೈತರಿಗೆ ಸಾಗುವಳಿ ಪತ್ರ ಹಾಗೂ ನಿರಪೇಕ್ಷಣಾ ಪತ್ರ ನೀಡಬೇಕು. 1935ರಿಂದ 1992ರವರೆಗೆ ಸಾಗುವಳಿ ವಿತರಣೆ ಮಾಡಿರುವ 2,570 ಜನರಿಗೆ ಹಕ್ಕುಪತ್ರ ವಿತರಿಸುವ ವರೆಗೆ ಹೋರಾಟ ಮುಂದುವರಿಸಲಾಗುವುದು ಎಂದು ತಿಳಿಸಿದರು.

ಆ.31ರಿಂದ ಚಳುವಳಿಯನ್ನು ಹಂತ ಹಂತವಾಗಿ ತೀವ್ರಗೊಳಿಸಲಾಗುವುದು. ಮೊದಲ ಹಂತದಲ್ಲಿ ಮಕ್ಕಳ ಚಳುವಳಿ ನಡೆಸಲಾಗುವುದು. ರೈತರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಲು ಶ್ರಮಿಸುತ್ತಿದ್ದು, ಮಕ್ಕಳು ದೇಶದ ಮುಂದಿನ ಪ್ರಜೆಗಳಾಗಿದ್ದಾರೆ. ರೈತರ ಸಮಸ್ಯೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು ಎಂದು ಹೇಳಿದರು.

ಮುಂದಿನ ದಿನಗಳಲ್ಲಿ ಪೂರಕೆ ಚಳುವಳಿ, ಬಾರುಕೋಲು ಚಳುವಳಿ, ಎತ್ತಿನಗಾಡಿ ಚಳುವಳಿ ಸೇರಿದಂತೆ ವಿವಿಧ ರೀತಿಯ ಹೋರಾಟಗಳನ್ನು ನಡೆಸಲಾಗುವುದು. ದನಕರುಗಳೊಂದಿಗೆ ಇಡೀ ರೈತ ಕುಟುಂಬವೇ ತಾಲೂಕು ಕಚೇರಿ ಆವರಣದಲ್ಲಿ ವಾಸ್ತವ್ಯ ಹೂಡುವ ಮೂಲಕ ಪ್ರತಿಭಟನೆ ನಡೆಸಲಿದೆ ಎಂದು ಎಚ್ಚರಿಸಿದರು.

ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ಹಾಗೂ ರಾಜ್ಯ ಸಮಿತಿ ಮುಖಂಡ ದರ್ಶನ್ ಪುಟ್ಟಣ್ಣಯ್ಯ ಸೇರಿದಂತೆ ರಾಜ್ಯ ಪದಾಧಿಕಾರಿಗಳು ಗುಂಡ್ಲುಪೇಟೆಗೆ ಆಗಮಿಸುವ ಸಂದರ್ಭದಲ್ಲಿ ಬೃಹತ್ ಟ್ರ್ಯಾಕ್ಟರ್ ರ?ಯಾಲಿ ನಡೆಸಲಾಗುವುದು. ತಾಲೂಕಿನ ವಿವಿಧ ಗ್ರಾಮ ಘಟಕಗಳಿಗೆ ಭೇಟಿ ನೀಡಿ ಕರಪತ್ರ ಹಂಚಿ ರೈತರನ್ನು ಚಳುವಳಿಗೆ ಆಹ್ವಾನಿಸಲಾಗುವುದು. ಬೇಡಿಕೆಗಳು ಈಡೇರದಿದ್ದರೆ ಮುಂದಿನ ಹಂತದಲ್ಲಿ ಕಾನೂನು ಭಂಗ ಚಳುವಳಿಗೂ ಮುಂದಾಗಲಾಗುವುದು ಎಂದು ಮಹಾದೇವಪ್ಪ ತಿಳಿಸಿದರು.

ತಾಲೂಕು ಅಧ್ಯಕ್ಷ ಮಲ್ಲಯ್ಯನಪುರ ಶಿವಣ್ಣ ಮಾತನಾಡಿ, ಧರಣಿ ಆರಂಭವಾಗಿ ಆರು ದಿನ ಕಳೆದರೂ ಶಾಸಕರು ಹಾಗೂ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ರೈತರ ಸಮಸ್ಯೆಗಳನ್ನು ಆಲಿಸಲು ಮುಂದಾಗದೆ ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಆರೋಪಿಸಿದರು. ಈ ಸಂದರ್ಭದಲ್ಲಿ ರೈತ ಸಂಘದ ಕಾರ್ಯಾಧ್ಯಕ್ಷ ಹಕ್ಕಲಪುರ ಕುಮಾರ್, ಜಿಲ್ಲಾ ಕಾಯಂ ಆಹ್ವಾನಿತ ಕೋಡಹಳ್ಳಿ ಸೋಮಶೇಖರ್, ತಾಲೂಕು ಗೌರವಾಧ್ಯಕ್ಷ ನಾಗರಾಜಪ್ಪ, ಪ್ರಧಾನ ಕಾರ್ಯದರ್ಶಿ ಕೋಡಹಳ್ಳಿ ಪ್ರಸಾದ್, ಮಹಿಳಾ ಘಟಕದ ಅಧ್ಯಕ್ಷೆ ಬಸಮ್ಮ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಮಹದೇವಸ್ವಾಮಿ, ತಾಲೂಕು ಉಪಾಧ್ಯಕ್ಷ ಪುಟ್ಟೇಗೌಡ, ಸಂಘಟನಾ ಕಾರ್ಯದರ್ಶಿ ರವಿಚಂದ್ರ, ಹನೂರು ತಾಲೂಕು ಅಧ್ಯಕ್ಷ ಪಳನಿಸ್ವಾಮಿ, ಮುಂಟೀಪುರ ಮಹದೇವಸ್ವಾಮಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕ್ರೀಡೆಯಿಂದ ಆರೋಗ್ಯಕರ ಜೀವನ

## ಸಚಿವ ಪುಟ್ಟರಂಗಶೆಟ್ಟಿ ಹೇಳಿಕೆ | ತಾಲೂಕು ಮಟ್ಟದ ಕ್ರೀಡಾಕೂಟ



ಚಾಮರಾಜನಗರ: ಆರೋಗ್ಯಕರ ಬದುಕಿಗೆ ಕ್ರೀಡಾ ಚಟುವಟಿಕೆಗಳು ಬಹು ಮುಖ್ಯವಾಗಿದೆ ಎಂದು ಪಶು ಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಿ. ಪುಟ್ಟರಂಗಶೆಟ್ಟಿ ಅವರು ತಿಳಿಸಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಹಾಗೂ ಮರಿಯಾಲದ ಶ್ರೀ ಮುರುಘರಾಜೇಂದ್ರ ಸ್ವಾಮಿ ಸಂಯುಕ್ತ ಪದವಿ ಪೂರ್ವ ಕಾಲೇಜು ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಚಾಮರಾಜನಗರ ತಾಲೂಕು ಮಟ್ಟದ ಶಾಲಾ ಶಿಕ್ಷಣ (ಪದವಿ ಪೂರ್ವ) ಕಾಲೇಜುಗಳ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು.

**ಸೋಲು-ಗೆಲುವನ್ನು ಸಮಾನವಾಗಿ ಸ್ವೀಕರಿಸಲು ಕಿವಿಮಾತು**

ಕಾರ್ಯಕ್ರಮದಲ್ಲಿ ಮಾತನಾಡಿದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷರಾದ ಹೆಚ್.ವಿ. ಚಂದ್ರು ಅವರು, ವಿದ್ಯಾರ್ಥಿಗಳಲ್ಲಿರುವ ಸುಪ್ತ ಪ್ರತಿಭೆಯನ್ನು ಗುರುತಿಸಿ ಅವಕಾಶ ಮಾಡಿಕೊಡಲು ಪ್ರೋತ್ಸಾಹ ನೀಡಬೇಕು. ಕ್ರೀಡಾ ಸ್ಪರ್ಧೆಗಳಲ್ಲಿ ವಿದ್ಯಾರ್ಥಿಗಳು ಸೋಲಿಗೆ ಧೃತಿಗೆಡಬಾರದು, ಗೆಲುವು ಹಾಗೂ ಸೋಲನ್ನು ಸಮಾನವಾಗಿ ಸ್ವೀಕರಿಸಬೇಕು ಎಂದರು. ಮರಿಯಾಲದ ಶ್ರೀ ಮುರುಘರಾಜೇಂದ್ರಸ್ವಾಮಿ ಮಹಾಸಂಸ್ಥಾನ ಮಠಾಧ್ಯಕ್ಷರು ಹಾಗೂ ವಿದ್ಯಾಸಂಸ್ಥೆಯ ಅಧ್ಯಕ್ಷರಾದ ಇಮ್ಮಡಿ ಮುರುಘರಾಜೇಂದ್ರಸ್ವಾಮಿ ಅವರು ಮಾತನಾಡಿ, ವಿದ್ಯಾರ್ಥಿಗಳ ಮಾನಸಿಕ ಹಾಗೂ ದೈಹಿಕ ಆರೋಗ್ಯ ಕಾಪಾಡಿಕೊಳ್ಳಲು ಕ್ರೀಡೆಯಿಂದ ಸಾಧ್ಯವಾಗಲಿದೆ. ಧ್ಯಾನ, ಯೋಗದಂತಹ ಆಧ್ಯಾತ್ಮಿಕ ಶಿಕ್ಷಣವು ಅಗತ್ಯವಾಗಿದ್ದು, ವಿದ್ಯಾರ್ಥಿಗಳಿಗೆ ಈ ಕ್ರೀಡಾಕೂಟ ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಚೂಡಾ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಮುನ್ನಾ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಹೆಚ್. ಎನ್. ಪುಟ್ಟಗೌರಮ್ಮ, ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಸಂಘದ ಅಧ್ಯಕ್ಷರಾದ ಪಿ. ಪ್ರಿಯಾ ಶಂಕರ್, ಖಜಾಂಚಿ ಹೆಚ್.ಎನ್ ಸ್ವಾಮಿ, ಮುರುಘರಾಜೇಂದ್ರಸ್ವಾಮಿ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಪಿ. ಮಹದೇವಸ್ವಾಮಿ, ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘದ ಅಧ್ಯಕ್ಷರಾದ ಟಿ. ಮಧು, ಜಿಲ್ಲಾ ಸರ್ಕಾರಿ ನೌಕರರ ಸಂಘದ ಉಪಾಧ್ಯಕ್ಷರಾದ ನಾಗರಾಜು, ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರಾದ ಬಸವರಾಜು, ದೈಹಿಕ ಶಿಕ್ಷಣ ಶಿಕ್ಷಕರಾದ ಚಿಕ್ಕಬಸವಯ್ಯ, ವಿಶ್ರಾಂತ ಪ್ರಾಂಶುಪಾಲರಾದ ಸೋಮಣ್ಣ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಕ್ರೀಡೆಗೆ ಆದ್ಯತೆ,ಮೂಲಸೌಕರ್ಯಗಳ ಅಭಿವೃದ್ಧಿ

**ಜೀವನದಲ್ಲಿ ಎಷ್ಟೇ ಚಟುವಟಿಕೆಗಳಿದ್ದರೂ ಕ್ರೀಡಾ ಚಟುವಟಿಕೆ ಅತ್ಯಂತ ಅವಶ್ಯವಾಗಿದೆ. ಆರೋಗ್ಯಕರ ಜೀವನಕ್ಕೆ ಕ್ರೀಡೆ ಸಹಕಾರಿಯಾಗಲಿದ್ದು, ದೈಹಿಕವಾಗಿ ಸದೃಢರಾಗಲು ಕ್ರೀಡೆ, ಆಟೋಟಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಚಿವರು ಸಲಹೆ ಮಾಡಿದರು. ಕ್ರೀಡಾ ಆಸಕ್ತರಿಗೆ ಉತ್ತೇಜನ ನೀಡುವ ಸಲುವಾಗಿ ಇನ್ನಷ್ಟು ಕ್ರೀಡಾ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ. 13 ಕೋಟಿ ರೂ. ವೆಚ್ಚದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣ ಅಭಿವೃದ್ಧಿ ಹಾಗೂ ಈಜುಕೊಳ ನಿರ್ಮಾಣ ಕಾಮಗಾರಿ ಪ್ರಾರಂಭವಾಗಿದೆ. ಲೋಕಸಭಾ ಸದಸ್ಯರಾಗಿದ್ದ ಧ್ರುವನಾರಾಯಣ್ ಅವರ ಅವಧಿಯಲ್ಲಿ ಸುಸಜ್ಜಿತ ಸಿಂಥೆಟಿಕ್ ಟ್ರ್ಯಾಕ್ ನಿರ್ಮಾಣವಾಗಿದ್ದು, ಕ್ರೀಡಾ ಚಟುವಟಿಕೆಗಳಿಗೆ ಈ ಮೂಲಕ ಉತ್ತೇಜನ ನೀಡಲಾಗುತ್ತಿದೆ ಎಂದರು. ಪ್ರಸ್ತುತ ನಡೆಯುತ್ತಿರುವ ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ವಿದ್ಯಾರ್ಥಿಗಳು ಹೆಚ್ಚಿನ ಸಾಧನೆ ಮಾಡಬೇಕು ಹಾಗೂ ರಾಜ್ಯ, ರಾಷ್ಟ್ರ ಮಟ್ಟದಲ್ಲಿಯೂ ಆಯ್ಕೆಯಾಗಿ ಜಿಲ್ಲೆಗೆ ಕೀರ್ತಿ ತರಬೇಕು ಎಂದು ಸಚಿವರು ಹಾರೈಸಿದರು.**

# ಅರಮನೆಯಲ್ಲಿ ಗಜಪಡೆ ವೀಕ್ಷಣೆಗೆ ಮುಕ್ತ

ಮೈಸೂರು: 2026ರ ದಸರಾ ಮಹೋತ್ಸವದ ಹಿನ್ನೆಲೆಯಲ್ಲಿ ದಸರಾ ಗಜಪಡೆ ಆಗಸ್ಟ್ 28ರಿಂದ ಅರಮನೆ ಆವರಣದಲ್ಲಿರುವ ದಸರಾ ಆನೆಗಳ ಶಿಬಿರದಲ್ಲಿ ಬೀಡುಬಿಟ್ಟಿದೆ. ಈ ನಡುವೆ, ಅರಮನೆ ವೀಕ್ಷಣೆಗೆ



ಆಗಮಿಸುವ ಪ್ರವಾಸಿಗರಿಗೆ ದಸರಾ ಆನೆಗಳನ್ನು ವೀಕ್ಷಿಸಲು ಅರಣ್ಯ ಇಲಾಖೆ ವತಿಯಿಂದ ಇ-ಟಿಕೆಟಿಂಗ್ ವ್ಯವಸ್ಥೆ ಕಲ್ಪಿಸಲಾಗಿದೆ ಎಂಬ ಮಾಹಿತಿ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ.

ಈ ಕುರಿತು ಸ್ಪಷ್ಟನೆ ನೀಡಿರುವ ಮೈಸೂರು ವನ್ಯಜೀವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಆನೆಗಳ ವೀಕ್ಷಣೆಗೆ ಅರಣ್ಯ ಇಲಾಖೆ ಯಿಂದ ಯಾವುದೇ ಟಿಕೆಟ್ ನೀಡುತ್ತಿಲ್ಲ. ಆನೆಗಳ ವೀಕ್ಷಣೆಗೆ ಇ- ಟಿಕೆಟಿಂಗ್ ವ್ಯವಸ್ಥೆ ಕಲ್ಪಿಸುವ ವಿಚಾರ ಕೇವಲ ಚಿಂತನಾ ಹಂತದಲ್ಲಿದ್ದ ವ್ಯವಸ್ಥೆಯಾಗಿತ್ತು. ಅದನ್ನು ಜಾರಿಗೊಳಿಸಿಲ್ಲ ಎಂದು ಇಲಾಖೆ ಸ್ಪಷ್ಟಪಡಿ ಸಿದೆ. ಹೀಗಾಗಿ, ದಸರಾ ಆನೆಗಳ ವೀಕ್ಷಣೆಗೆ ಟಿಕೆಟ್ ನೀಡಲಾಗುತ್ತಿದೆ ಎಂಬ ಸಾಮಾಜಿಕ ಜಾಲತಾಣಗಳಲ್ಲಿನ ಮಾಹಿತಿಯನ್ನು ಸಾರ್ವಜನಿಕರು ನಂಬಬಾರದು ಎಂದು ಅರಣ್ಯ ಇಲಾಖೆ ತಿಳಿಸಿದೆ.

# ಪಕ್ಷಕ್ಕೆ ಮುಜುಗರ ಆಗಬಾರದೆಂದು ನಾಗೇಂದ್ರ ರಾಜೀನಾಮೆ: ಡಿಸಿಎಂ

ಮೈಸೂರು: ಸಚಿವ ನಾಗೇಂದ್ರ ಅವರು ಪಕ್ಷಕ್ಕೆ ಮುಜುಗರ ಆಗಬಾರದು ಎಂಬ ಕಾರಣಕ್ಕಾಗಿ ರಾಜೀನಾಮೆ ನೀಡಿದ್ದಾರೆ ಎಂದು ಡಿಸಿಎಂ ಜಿ.ಪರಮೇಶ್ವರ್ ತಿಳಿಸಿದರು.

ಮೈಸೂರಿನಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಈ ವಿಚಾರದಲ್ಲಿ ಬಿಜೆಪಿ ಕೇವಲ ರಾಜಕೀಯ ಮಾಡಿದೆ. ಎರಡು ಬಾರಿ ರಾಜೀನಾಮೆ ಕೊಡಿಸಿ ರಾಜಕೀಯ ಮಾಡಿದ್ದಾರೆ. ನಾಗೇಂದ್ರ ಅವರು ಪಕ್ಷದ ಶಿಸ್ತಿನ ಸಿಪಾಯಿಯಾಗಿದ್ದು, ಪಕ್ಷಕ್ಕೆ ಮುಜುಗರ ಆಗಬಾರದು ಎಂಬ ಸದುದ್ದೇಶದಿಂದ ರಾಜೀನಾಮೆ ಕೊಟ್ಟಿದ್ದಾರೆಯೇ ಹೊರತು, ರಾಜೀನಾಮೆ ಕೊಡುವ ಅವಶ್ಯಕತೆ ಇರಲಿಲ್ಲ. ಇಡಿ ಹಾಗೂ ಸಿಬಿಐ

ನಾಗೇಂದ್ರ ಅವರ ಹೆಸರು ಉಲ್ಲೇಖವಾಗಿಲ್ಲ ಮತ್ತು ಅವರು ಹಣ ಪಡೆದಿರುವ ಬಗ್ಗೆ ಯಾವುದೇ ಸಾಕ್ಷಿ ಕೂಡ ಇಲ್ಲ ಎಂದು ಸ್ಪಷ್ಟಪಡಿಸಿದರು. ತಾವು ಗೃಹಮಂತ್ರಿ ಆಗಿದ್ದಾಗಲೇ ಶೇಕಡ 79ರಷ್ಟು ಹಣ ರಿಕವರಿ ಆಗಿತ್ತು ಹಾಗೂ ಉಳಿದ 5 ಕೋಟಿ ರೂ. ಹಣ ರಿಕವರಿ ಪ್ರಕ್ರಿಯೆಯಲ್ಲಿದೆ. ಅಲ್ಲೆಲ್ಲೂ ನಾಗೇಂದ್ರ ಅವರ ಹೆಸರಿಲ್ಲ. ಮುಂದಿನ ದಿನಗಳಲ್ಲಿ ಈ ಕುರಿತ ವಸ್ತುಸ್ಥಿತಿಯನ್ನು ಜನರ ಮುಂದೆ ತಿಳಿಸುತ್ತೇವೆ. ಬಿಜೆಪಿಯವರು ಸದನದಲ್ಲಿ ಈ ಬಗ್ಗೆ ಪ್ರಶ್ನೆ ಕೇಳಿ ಎಂದರೂ ಕೇಳದೆ ಬರೀ ರಾಜಕೀಯ ಮಾಡುತ್ತಿದ್ದಾರೆ ಎಂದು ಟೀಕಿಸಿದರು.

**ಕೈಗಾರಿಕಾ ಅಭಿವೃದ್ಧಿ ಹಾಗೂ ಭೂಸ್ವಾಧೀನ**

ಮೈಸೂರಿನಲ್ಲಿ ಹೆಚ್ಚಿನ ಕಾರ್ಖಾನೆಗಳು ಬರಬೇಕು ಎಂಬ ಉದ್ದೇಶ



ದಿಂದ ಕೆಐಎಡಿಬಿ ಭೂಮಿಗೆ ನೋಟಿಫಿಕೇಶನ್ ಕೊಟ್ಟಿರಬಹುದು, ಆದರೆ ಈ ಬಗ್ಗೆ ತಮಗೆ ಹೆಚ್ಚಿನ ಮಾಹಿತಿ ಇಲ್ಲ ಎಂದು ಅವರು ಹೇಳಿದರು. ಈ ವಿಚಾರವನ್ನು ಮಾಜಿ ಸಿಎಂ ಸಿದ್ದರಾಮಯ್ಯ ಹಾಗೂ ಜಿಲ್ಲಾ ಮಂತ್ರಿಗಳು ನೋಡಿಕೊಳ್ಳುತ್ತಾರೆ. ಕೈಗಾರಿಕಾ ಮಂತ್ರಿಗಳು ಮತ್ತು ಜಿಲ್ಲಾ ಮಂತ್ರಿಗಳು ಈ ಬಗ್ಗೆ ಸೂಕ್ತ ಗಮನಹರಿಸಲಿದ್ದಾರೆ ಎಂದರು.

**ಬರ ಘೋಷಣೆ ಮತ್ತು ಕೇಂದ್ರದ ಪರಿಹಾರ ನಿರೀಕ್ಷೆ**

ರಾಜ್ಯದ 101 ತಾಲೂಕುಗಳನ್ನು ಬರ ತಾಲೂಕು ಎಂದು ಘೋಷಣೆ ಮಾಡಲಾಗಿದ್ದು, ಪರಿಹಾರ ಬಿಡುಗಡೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದ್ದೇವೆ. ಕೇಂದ್ರ ಸರ್ಕಾರದ ನಿಯಮಗಳ ಅನ್ವಯವೇ ಬರ ಅಧ್ಯಯನ ನಡೆದಿದೆ. ಅವರು ಕೂಡ ಒಂದು ತಂಡವನ್ನು ಕಳುಹಿಸಿ ಪರಿಶೀಲನೆ ಮಾಡಿದ ಬಳಿಕ ಪರಿಹಾರದ ಹಣವನ್ನು ಬಿಡುಗಡೆ ಮಾಡಲಿದ್ದಾರೆ. ಪ್ರಸ್ತುತ ನಮ್ಮ ಮುಂದಿರುವ ಮೊದಲ ಆದ್ಯತೆ ಜನರಿಗೆ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರು ಒದಗಿಸುವುದಾಗಿದೆ. ಕಳೆದ ಬಾರಿ ನ್ಯಾಯಾಲಯದ ಮೊರೆ ಹೋಗಿ ಹೋರಾಟ ಮಾಡಿದ ಬಳಿಕ 3,500 ಕೋಟಿ ರೂ. ಪರಿಹಾರ ಬಂದಿತ್ತು. ಈ ವಿಚಾರವನ್ನು ಕೇಂದ್ರದ ಗಮನಕ್ಕೆ ತಂದಿದ್ದು, ಇಂತಹ ಘಟನೆಗಳು ಮರುಕಳಿಸದಂತೆ ನೋಡಿಕೊಳ್ಳಿ ಎಂದು ಮನವಿ ಮಾಡುವುದಾಗಿ ತಿಳಿಸಿದರು.

**ಕುಮಾರಸ್ವಾಮಿ ಆರೋಪಗಳಿಗೆ ತಿರುಗೇಟು**

ಎಲ್ಲರ ಮೇಲೂ, ಎಲ್ಲದಕ್ಕೂ ಅಪಾದನೆ ಮಾಡುವುದು ಕುಮಾರಸ್ವಾಮಿ ಅವರ ಕೆಲಸವಾಗಿದೆ. ಅವರ ಬಳಿ ಆರೋಪಗಳಿಗೆ ತಕ್ಕಂತಹ ದಾಖಲೆಗಳಿದ್ದರೆ ಕೊಡಲಿ, ಕಾನೂನು ಚೌಕಟ್ಟಿನಲ್ಲಿ ಏನು ಬೇಕಾದರೂ ಮಾಡಲಿ. ದೇಶದಲ್ಲಿ ಕಾನೂನು ಎಲ್ಲರಿಗೂ ಒಂದೇ ಆಗಿದೆ. ಅದು ನನಗೂ ಒಂದೇ, ಕುಮಾರಸ್ವಾಮಿ ಅವರಿಗೂ ಒಂದೇ ಹಾಗೂ ಪ್ರಿಯಾಂಕಾ ಖರ್ಗೆ ಅವರಿಗೂ ಒಂದೇ ಎಂದು ತಿರುಗೇಟು ನೀಡಿದರು. ಇದೇ ವೇಳೆ, ಸಿದ್ದರಾಮಯ್ಯ ಅವರು ಸದನಕ್ಕೂ ಬಂದಿದ್ದರು, ಈಗ ಎರಡು ತಿಂಗಳು ರೆಸ್ಟ್ ತೆಗೆದುಕೊಳ್ಳುತ್ತಿದ್ದು, ಆ ಬಳಿಕ ಅವರು ಕೂಡ ತಮ್ಮ ಕೆಲಸ ಶುರು ಮಾಡಲಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

### ವಿಬಿ ಜಿ ರಾಮ್ ಜಿ ಯೋಜನೆಯಡಿ ಪ್ರಗತಿಯಲ್ಲಿರುವ ಕಾಮಗಾರಿಗಳ ಪರಿಶೀಲನೆ

# ಕಾಮಗಾರಿಗಳ ಸ್ಥಳಗಳಿಗೆ ಜಿ.ಪಂ ಸಿಇಒ ಮೋನಾ ರೋತ್ ಭೇಟಿ

ಚಾಮರಾಜನಗರ:ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜ್ ಗಾರ್ ಅಂಡ್ ಆಜೀವಿಕ ಮಿಷನ್ (ಗ್ರಾಮೀಣ) ಯೋಜನೆಯಡಿ ಗುಂಡ್ಲುಪೇಟೆ ತಾಲೂಕಿನ ಪ್ರತಿ ಗ್ರಾಮ ಪಂಚಾಯಿತಿಯ ಕ್ರಿಯಾ ಯೋಜನೆ ಅನುಮೋದನೆಗೊಂಡಿದ್ದು, ನಿಮ್ಮ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿಯೇ ಕೂಲಿ ಕೆಲಸ ದೊರೆಯಲಿದ್ದು, ಎಲ್ಲರೂ ಯೋಜನೆಯ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ತಿಳಿಸಿದರು.

ಗುಂಡ್ಲುಪೇಟೆ ತಾಲ್ಲೂಕಿನ ತೆರಕಣಾಂಬಿ, ಕೊಡಸೋಗೆ ಮತ್ತು ಬೊಮ್ಮಲಾಪುರ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಕೈಗೊಂಡಿರುವ ಕೆರೆ-ಕಟ್ಟೆ ಹಾಗೂ ಕಾಲುವೆ ಅಭಿವೃದ್ಧಿ ಕಾಮಗಾರಿ ಸ್ಥಳಕ್ಕೆ ಇಂದು ಭೇಟಿ ನೀಡಿ ಕಾಮಗಾರಿ ಪರಿಶೀಲಿಸಿ ಅವರು ಕೂಲಿ ಕಾರ್ಮಿಕರೊಂದಿಗೆ ಮಾತನಾಡಿದರು. ತೆರಕಣಾಂಬಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ತೆರಕಣಾಂಬಿ ಗ್ರಾಮದಲ್ಲಿ ವಿಬಿ ಜಿ ರಾಮ್ ಜಿ ಯೋಜನೆಯಡಿ ಉಪಾಧ್ಯಯರ ಕಟ್ಟೆ ಅಭಿವೃದ್ಧಿ ಕಾಮಗಾರಿ ಸ್ಥಳದಲ್ಲಿ ಕೂಲಿ ಕಾರ್ಮಿಕರೊಂದಿಗೆ ಸಂವಾದ ನಡೆಸಿ ಯೋಜನೆಯಡಿ ಕೂಲಿ ಕಾರ್ಮಿಕರಿಗೆ ದೊರೆಯುವ ಉದ್ಯೋಗಾವಕಾಶ ಹಾಗೂ ವೈಯಕ್ತಿಕ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು. ಕಾಮಗಾರಿ ಸ್ಥಳದಲ್ಲಿ ಹಾಜರಿದ್ದ ಕೂಲಿ ಕಾರ್ಮಿಕರ ಇ-ಹಾಜರಾತಿಯನ್ನು ಎನ್.ಎಂ.ಎಂ.ಎಸ್ ಮೊಬೈಲ್ ಆಪ್ ಮೂಲಕ



ದಾಖಲಿಸಿರುವುದನ್ನು ಪರಿಶೀಲಿಸಿದರು. ಸೆಪ್ಟೆಂಬರ್ 15ರ ವರೆಗೆ ಜಾಬ್ ಕಾರ್ಡ್ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಕೂಲಿಕಾರರು ಜಾಬ್ ಕಾರ್ಡ್ ಮೇಳ ಅಭಿಯಾನದಲ್ಲಿ ಭಾಗವಹಿಸಬೇಕು. ವಿಬಿ ಜಿ ರಾಮ್ ಜಿ ಯೋಜನೆಯಡಿ ಜಾಬ್ ಕಾರ್ಡ್ ಇಲ್ಲದವರು ಹೊಸ ಜಾಬ್ ಕಾರ್ಡ್ ಮಾಡಿಸಿಕೊಳ್ಳಬೇಕು. ಜಾಬ್ ಕಾರ್ಡ್ ತಿದ್ದುಪಡಿ ಇದ್ದರೆ ತಿದ್ದುಪಡಿ ಮಾಡಿಸಿಕೊಳ್ಳಬಹುದು. ಯೋಜನೆಯಡಿ ನೋಂದಣಿಯಾಗಿರುವ ಎಲ್ಲಾ ಕೂಲಿ ಕಾರ್ಮಿಕರಿಗೂ ಕಡ್ಡಾಯವಾಗಿ ಇ-ಕೆವೈಸಿ ಮಾಡಿಸಬೇಕು ಎಂದು ತಿಳಿಸಿದರು.

ಪ್ರತಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಜನರಿಗೆ ಉದ್ಯೋಗ ಒದಗಿಸುವ ಮೂಲಕ ಜನರನ್ನು ಆರ್ಥಿಕ ಹಾಗೂ ಜೀವನೋಪಾಯದ ಭದ್ರತೆಯನ್ನು ಕಲ್ಪಿಸುವುದು. ಬರ ಪರಿಸ್ಥಿತಿ ಎದುರಿಸಲು ಜಲಸಂರಕ್ಷಣೆ, ಅಂತರ್ಜಲ ವೃದ್ದಿಸುವುದು, ದೀರ್ಘಕಾಲಿಕ ಜೀವನೋಪಾಯಕ್ಕೆ ನೆರವಾಗುವ ಕಾಮಗಾರಿಗಳಿಗೆ ಆದ್ಯತೆ ನೀಡಿ ಅನುಷಾಷ್ಠನ ಗೊಳಿಸಲಾಗುವುದು, ಸ್ಥಳೀಯವಾಗಿ ಉದ್ಯೋಗ ಕಲ್ಪಿಸುವ ಮೂಲಕ ನಗರ ಪ್ರದೇಶಗಳಿಗೆ ವಲಸೆ ಹೋಗುವುದನ್ನು ತಡೆಯುವುದು ಜಾಬ್ ಕಾರ್ಡ್ ಮೇಳ ಅಭಿಯಾನದ ಉದ್ದೇಶವಾಗಿದ್ದು, ಕಾರ್ಮಿಕರು ಹೆಚ್ಚಿನ ಸದುಪಯೋಗ ಪಡಿಸಿಕೊಳ್ಳಬೇಕು ಎಂದರು. ಇದೇ ವೇಳೆ ತೆರಕಣಾಂಬಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರ, ಅಂಗವಾಡಿ ಕೇಂದ್ರ, ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ನಿರ್ಮಾಣವಾಗಿರುವ ಶೌಚಾಲಯ ಕಾಮಗಾರಿ, ಸರ್ಕಾರಿ ಪ್ರೌಢ ಶಾಲೆಯ ಗ್ರಂಥಾಲಯ, ಅಡುಗೆ ಮನೆ ಪರಿಶೀಲನೆ ನಡೆಸಿ, ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ತದ ನಂತರ ಕೊಡಸೋಗೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸೋಮನಪುರ ಗ್ರಾಮದ ಚಿಕ್ಕಸಿದ್ದನಾಯಕರ ಜಮೀನಿನಿಂದ ನಾಗರಾಜಚಾರಿ ಜಮೀನಿನವರಗೆ ಸರ್ಕಾರಿ ಹಳ್ಳದಲ್ಲಿ ಕಾಲುವೆ ಅಭಿವೃದ್ಧಿ ಕಾಮಗಾರಿ ಸ್ಥಳ ಮತ್ತು ಕೊಡಸೋಗೆ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಬೊಮ್ಮಲಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅಂಕಹಳ್ಳಿ ಗ್ರಾಮದ ಜವನನಾಗಪ್ಪ ರವರ ಜಮೀನಿನಿಂದ ರಾಮಪ್ಪ ರವರ ಜಮೀನಿನವರೆಗೆ ಕಾಲುವೆ ಅಭಿವೃದ್ಧಿ ಕಾಮಗಾರಿ ಸ್ಥಳವನ್ನು ಪರಿಶೀಲಿಸಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಸೂಕ್ತ ನಿರ್ದೇಶನ ನೀಡಿದರು. ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಹೆಚ್.ಎ ಷಣ್ಮುಗಂ, ಕ್ಷೇತ್ರ ಶಿಕ್ಷಣಾಧಿಕಾರಿ ಸ್ವಾಮಿ, ಸಿ.ಡಿ.ಪಿ.ಒ ಹೇಮಾವತಿ, ಸಹಾಯಕ ನಿರ್ದೇಶಕರಾದ ನಾಗಭೂಷಣ್, ಅಕ್ಷರ ದಾಸೋಹದ ಸಹಾಯಕದ ನಿರ್ದೇಶಕರಾದ ಸತೀಶ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಹದೇವಸ್ವಾಮಿ, ಬಿ.ಕೆ ಶ್ರೀನಿವಾಸ್, ರಂಗಸ್ವಾಮಿ, ಇತರರು ಇದ್ದರು.

# ಶಿವರಾತ್ರಿರಾಜೇಂದ್ರ ಶ್ರೀಗಳಿಗೆ ಭಾರತರತ್ನ ಪ್ರಶಸ್ತಿ ನೀಡಿ



ಚಾಮರಾಜನಗರ: ಶಿಕ್ಷಣ, ಅನ್ನದಾಸೋಹ, ಆರೋಗ್ಯ ಹಾಗೂ ಸಮಾಜ ಸೇವಾ ಕ್ಷೇತ್ರದಲ್ಲಿ ಅದ್ವಿತೀಯ ಸೇವೆ ಮಾಡಿರುವ ಮೈಸೂರಿನ ಸುತ್ತೂರು ಮಠದ ಪೀಠಾಧ್ಯಕ್ಷರಾದ ಡಾ.ಶ್ರೀಶಿವರಾತ್ರಿ ರಾಜೇಂದ್ರಮಹಾಸ್ವಾಮಿಗಳವರಿಗೆ ಮರಣೋತ್ತರ ವಾಗಿ ಭಾರತರತ್ನ ನೀಡುವಂತೆ ಅಖಿಲ ಕರ್ನಾಟಕ ಕನ್ನಡ ಮಹಾಸಭಾದ ವತಿಯಿಂದ ನಗರದ ಜಿಲ್ಲಾಡಳಿತ ಭವನದಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ಜವರೇಗೌಡ ಅವರ ಮುಖಾಂತರ ಪ್ರಧಾನಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ರಾಜ್ಯದಲ್ಲಿ ಕಳೆದ ನೂರಾರು ವರ್ಷಗಳಿಂದ ಸುತ್ತೂರು ಮಹಾಸಂಸ್ಥಾನ ಬಹಳಷ್ಟು ಸಮಾಜ ಮುಖಿ ಕೆಲಸವನ್ನು ನಿರಂತರವಾಗಿ ಮಾಡಿಕೊಂಡು ಬಂದಿರುವುದು ಇತಿಹಾಸದಲ್ಲಿ ದಾಖಲಾಗಿದೆ. ಈ ಸಂಸ್ಥೆಯ ಪರಮ ಪೂಜ್ಯ ಲಿಂಗೈಕ್ಯ ಜಗದ್ಗುರು ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪೀಠಾಧಿಪತಿಗಳಾಗಿದ್ದ 1950–60ರ ದಶಕದಲ್ಲಿ ಸಂದರ್ಭದಲ್ಲಿ ವಿದ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗಿದ್ದ ಸಂದರ್ಭ, ಆಹಾರ ಕೊರತೆಯ ಸಂದರ್ಭದಲ್ಲೇ ಇಡೀ ನಾಡಿನಾದ್ಯಂತ ಶಿಕ್ಷಣ ಸಂಸ್ಥೆಗಳನ್ನು ತೆಗೆಯುವ ಮೂಲಕ ಇಲ್ಲಿಯವರೆಗೆ ಕೋಟ್ಯಾಂತರ ವಿದ್ಯಾರ್ಥಿಗಳಿಗೆ ವಿದ್ಯಾಧಾನ ಮಾಡಿರುತ್ತಾರೆ. ಇವರ ಶಿಕ್ಷಣ ಸೇವೆಯಿಂದ ಲಕ್ಷಾಂತರ ಜನ ಇಂದು ಉದ್ಯೋಗ ಪಡೆದು ದೇಶ, ವಿದೇಶಗಳಲ್ಲಿ ಹೆಸರನ್ನು ಮಾಡಿದ್ದಾರೆ ಮತ್ತು ಹಸಿದವರಿಗೆ ಅನ್ನದಾಸೋಹವನ್ನು ಮಾಡುವ ಮೂಲಕ ಬಹುಜನರಿಗೆ ಪ್ರತಿನಿತ್ಯ ದಾಸೋಹವನ್ನು ಸಹ ಮಾಡಿರುತ್ತಾರೆ ಮತ್ತು ಆರೋಗ್ಯ ಕ್ಷೇತ್ರದಲ್ಲೂ ಸಹ ಬಹಳಷ್ಟು ಆಸ್ಪತ್ರೆಗಳನ್ನು ಕಟ್ಟಿ–ಜನರಿಗೆ ಆರೋಗ್ಯ ಸೇವೆ ಸಿಗುವಂತೆ ಮಾಡಿರುತ್ತಾರೆ. ಒಟ್ಟಿನಲ್ಲಿ ಒಂದು ಸರ್ಕಾರ ಮಾಡಬಹುದಾದ ಕೆಲಸ ಕಾರ್ಯಗ ಯಾವುದೇ ಪ್ರಚಾರವಿಲ್ಲದೆ ಎಲೆಮರೆ ಕಾಯಿಯಂತೆ ರಾಜ್ಯ ಮತ್ತು ದೇಶದಾದ್ಯಂತ ಮಾಡಿದ್ದಾರೆ. ಶಿಕ್ಷಣ ಕ್ಷೇತ್ರದಲ್ಲಿ ಇಡೀ ರಾಜ್ಯದಲ್ಲೇ ಕ್ರಾಂತಿಯನ್ನು ಮಾಡಿರುತ್ತಾರೆ. ಶಿಕ್ಷಣ ಕ್ಷೇತ್ರ, ಅನ್ನದಾಸೋಹ, ಸಮಾಜ ಸೇವೆ, ಇನ್ನೂ ಅನೇಕ ಸೇವೆಗಳನ್ನು ಸಲ್ಲಿಸಿ ಲಿಂಗೈಕ್ಯರಾಗಿರುವ ಪರಮಪೂಜ್ಯ ಲಿಂಗೈಕ್ಯ ಜಗದ್ಗುರು ಶ್ರೀ ಶಿವ ರಾಜೇಂದ್ರಮಹಾಸ್ವಾಮಿಗಳವರಿಗೆ ಈ ಸಾರಿಯ ಮರಣೋತ್ತರ ಭಾರತ ರತ್ನ ಪ್ರಶಸ್ತಿಯನ್ನು ನೀಡಿ ಗೌರವಿಸಬೇಕೆಂದು ಸಮಸ್ತ ಜನತೆ ಪರವಾಗಿ ಪ್ರಧಾನಮಂತ್ರಿ ನರೇಂದ್ರ ಮೋದಿಗೆ ಸಲ್ಲಿಸಿರುವ ಮನವಿಯಲ್ಲಿ ಶ್ರೀನಿವಾಸಗೌಡ ಕೋರಿದ್ದಾರೆ. ಈ ಸಂದರ್ಭದಲ್ಲಿ ಹೊಮ್ಮಲೋಕೇಶ್, ಅಮಚವಾಡಿ ಎಸ್.ರಾಜು, ಸಿದ್ದರಾಜು, ಗಾಯಕ ಮುತ್ತುರಾಜು, ರಾಚಪ್ಪ ಇತರರು ಹಾಜರಿದ್ದರು.

# ಪ್ರೊ.ಎಂ.ನಾಗರಾಜ್‌ಗೆ ಅಭಿನಂದನೆ



ಮೈಸೂರು: ಭಾರತೀಯ ಜನತಾ ಪಕ್ಷದ ರಾಷ್ಟ್ರೀಯ ಉಪಾಧ್ಯಕ್ಷರಾಗಿ ಹಾಗೂ ರಾಜ್ಯಸಭಾ ಸದಸ್ಯರಾಗಿ ಮೊದಲ ಬಾರಿಗೆ ಮೈಸೂರಿಗೆ ಆಗಮಿಸಿದ ಪ್ರೊ. ಎಂ. ನಾಗರಾಜ್ ಅವರನ್ನು ಮೈಸೂರು ವಿಭಾಗದ ಬಿಜೆಪಿ ಸಹ ಪ್ರಭಾರಿಗಳಾದ ಡಾ. ಈ.ಸಿ. ನಿಂಗರಾಜ್ ಗೌಡ ಅವರು ಭೇಟಿ ಮಾಡಿ ಹೃದಯಪೂರ್ವಕ ಅಭಿನಂದನೆ ಹಾಗೂ ಶುಭಾಶಯಗಳನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ಮೈಸೂರು ವಿಭಾಗದಲ್ಲಿ ಭಾರತೀಯ ಜನತಾ ಪಕ್ಷದ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವುದು, ಪಕ್ಷದ ಕಾರ್ಯಚಟುವಟಿಕೆಗಳನ್ನು ತಳಮಟ್ಟದಲ್ಲಿ ಪರಿಣಾಮಕಾರಿಯಾಗಿ ವಿಸ್ತರಿಸುವುದು ಹಾಗೂ ಕಾರ್ಯಕರ್ತರನ್ನು ಸಂಘಟನಾತ್ಮಕವಾಗಿ ಸಕ್ರಿಯಗೊಳಿಸುವ ಕುರಿತು ಕೂಲಂಕಷವಾಗಿ ಚರ್ಚೆ ನಡೆಸಲಾಯಿತು. ಮೈಸೂರು ವಿಭಾಗದ ಪಕ್ಷದ ಸಂಘಟನೆಗೆ ಸಂಬಂಧಿಸಿದ ವಿವಿಧ ವಿಚಾರಗಳ ಕುರಿತು ಪ್ರೊ. ಎಂ. ನಾಗರಾಜ್ ಅವರೊಂದಿಗೆ ಸಮಾಲೋಚನೆ ನಡೆಸಿದ ಡಾ. ಈ.ಸಿ. ನಿಂಗರಾಜ್ ಗೌಡ ಅವರು, ಮುಂದಿನ ದಿನಗಳಲ್ಲಿ ಕೈಗೊಳ್ಳಬೇಕಾದ ಸಂಘಟನಾ ಕಾರ್ಯಗಳ ಕುರಿತು ಅವರಿಂದ ಅಗತ್ಯ ಮಾರ್ಗದರ್ಶನ ಹಾಗೂ ಸಲಹೆಗಳನ್ನು ಪಡೆದರು.

ಮೈಸೂರು ವಿಭಾಗದಲ್ಲಿ ಪಕ್ಷದ ಸಂಘಟನೆಯನ್ನು ಮತ್ತಷ್ಟು ಸದೃಢಗೊಳಿಸುವುದು, ಕಾರ್ಯಕರ್ತರಲ್ಲಿ ಉತ್ಸಾಹ ತುಂಬುವುದು ಹಾಗೂ ಪಕ್ಷದ ಸಂಘಟನಾ ಶಕ್ತಿಯನ್ನು ತಳಮಟ್ಟದಿಂದ ಬಲಪಡಿಸುವ ನಿಟ್ಟಿನಲ್ಲಿ ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸುವ ಅಗತ್ಯದ ಕುರಿತು ಈ ಸಂದರ್ಭದಲ್ಲಿ ಚರ್ಚಿಸಿ, ಮಾರ್ಗದರ್ಶನ ಪಡೆಯಲಾಯಿತು. ಈ ಸಂದರ್ಭದಲ್ಲಿ ವಕೀಲ ಅ.ಮ.ಭಾಸ್ಕರ್, ಮಾಜಿ ಮೇಯರ್ ಶಿವಕುಮಾರ್, ರಮೇಶ್, ಮೃಗಾಲಯ ಪ್ರಾಧಿಕಾರದ ಮಾಜಿ ಅಧ್ಯಕ್ಷ ಶಿವಕುಮಾರ್, ಬಿ.ಕೆ.ಸುಪ್ರೀತ್ ಮೊದಲಾದವರು ಉಪಸ್ಥಿತರಿದ್ದರು.

### ಚಾಮರಾಜನಗರ ರೈಲು ನಿಲ್ದಾಣಕ್ಕೆ ಕೇಂದ್ರ ರೈಲ್ವೆ ರಾಜ್ಯ ಸಚಿವ ವಿ. ಸೋಮಣ್ಣ ಭೇಟಿ

## ಅಭಿವೃದ್ಧಿ ಕಾಮಗಾರಿ ಪರಿಶೀಲನೆ



ಚಾಮರಾಜನಗರ ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವರಾದ ವಿ. ಸೋಮಣ್ಣ ಅವರು ಇಂದು ಚಾಮರಾಜನಗರ ರೈಲು ನಿಲ್ದಾಣಕ್ಕೆ ಭೇಟಿ ನೀಡಿ ಅಮೃತ್ ಭಾರತ್ ಸ್ಟೇಷನ್ ಯೋಜನೆಯಡಿ 22.31 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿ ಪಡಿಸಲಾಗುತ್ತಿರುವ ರೈಲು ನಿಲ್ದಾಣ ಕಾಮಗಾರಿಯನ್ನು ಪರಿಶೀಲಿಸಿದರು.

ಹೊಸ ನಿಲ್ದಾಣ ಕಟ್ಟಡ, ಅಗಲೀಕರಣ ಮಾಡುತ್ತಿರುವ ಫ್ಲಾಟ್ ಫಾರಂ, ಶೆಲ್ಟರ್, ಪ್ರಯಾಣಿಕರ ಸಂಚಾರಕ್ಕೆ ನಿರ್ಮಿಸಲಾಗುತ್ತಿರುವ ಪಾದಚಾರಿ ಮೇಲ್ಸೆತುವೆ, ಲಿಫ್ಟ್ ಗಳು, ಎಸ್ಕಲೇಟರ್ ಕಾಮಗಾರಿಗಳನ್ನು ವೀಕ್ಷಿಸಿದರು. ಪುರುಷರು ಹಾಗೂ ಮಹಿಳೆಯರಿಗಾಗಿ ಪ್ರತ್ಯೇಕವಾಗಿ ನಿರ್ಮಿಸಲಾಗಿರುವ ನಿರೀಕ್ಷಣಾ ಕೊಠಡಿ, ಉಪಹಾರ ಮಂದಿರವನ್ನು ವೀಕ್ಷಣೆ ಮಾಡಿದರು. ನಿಲ್ದಾಣದ ಸುತ್ತಮುತ್ತಲಿನ ಪ್ರದೇಶ, ಪಾರ್ಕಿಂಗ್ ಸ್ಥಳ, ಸುಧಾರಿತ ಪ್ರದೇಶ ಸೌಲಭ್ಯ ಸೇರಿದಂತೆ ಪ್ರಗತಿಯಲ್ಲಿರುವ ವಿವಿಧ ಕಾಮಗಾರಿಯನ್ನು ಸಚಿವರು ಪರಿಶೀಲಿಸಿದರು. ಹಾಲಿ ಇರುವ ಟಿಕೆಟ್ ಕೌಂಟರ್ ಬಳಿ ತೆರಳಿ ಅಲ್ಲಿಯೂ ವೀಕ್ಷಣೆ ಮಾಡಿ ಪ್ರಯಾಣಿಕರಿಗೆ ಶೀಘ್ರವಾಗಿ ಟಿಕೆಟ್ ವಿತರಿಸಲು ಅನುಕೂಲವಾಗುವಂತೆ ವ್ಯವಸ್ಥೆಗಳನ್ನು ಕಲ್ಪಿಸಲು ಸೂಚಿಸಿದರು. ಇದೇ ವೇಳೆ ರೈಲ್ವೆ ಸೌಲಭ್ಯಗಳ ಬಗ್ಗೆ ಪ್ರಯಾಣಿಕರಿಂದಲೂ ಅಹವಾಲುಗಳನ್ನು ಆಲಿಸಿದರು.

ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಸಚಿವರಾದ ವಿ. ಸೋಮಣ್ಣ ಅವರು ಇಡೀ ರಾಜ್ಯದಲ್ಲಿ ರೈಲ್ವೆ ಮೇಲ್ಸೆತುವೆ, ಕೆಳ ಸೇತುವೆ ಸೇರಿದಂತೆ ನೆನೆಗುದಿಗೆ ಬಿದ್ದಿದ್ದ ಹಲವು ಕಾಮಗಾರಿಗಳನ್ನು ತ್ವರಿತ ಗತಿಯಲ್ಲಿ ಪೂರ್ಣಗೊಳಿಸುತ್ತಿದ್ದೇವೆ. ಪ್ರಧಾನಿಯವರು ತಂದಿರುವ ಅಮೃತ್ ಭಾರತ್ ಸ್ಟೇಷನ್ ಯೋಜನೆಯಡಿ ರಾಜ್ಯದ ಎಲ್ಲ ಜಿಲ್ಲಾ ಕೇಂದ್ರಗಳು ಹಾಗೂ ಪ್ರಮುಖ ತಾಲೂಕುಗಳು, ರಾಜಧಾನಿಯಲ್ಲಿರುವ ರೈಲು ನಿಲ್ದಾಣವನ್ನು ಅಭಿವೃದ್ಧಿಪಡಿಸಲಾಗುತ್ತಿದೆ. ಇದರಲ್ಲಿ ಚಾಮರಾಜನಗರ ರೈಲು ನಿಲ್ದಾಣದಲ್ಲಿಯೂ ಅಮೃತ್ ಭಾರತ್ ಸ್ಟೇಷನ್ ಯೋಜನೆಯಡಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾ ಗಿದೆ. ಸೆಪ್ಟೆಂಬರ್ 26ರೊಳಗೆ ಕಾಮಗಾರಿ ಪೂರ್ಣಗೊಳಿಸಿ ಲೋಕಾರ್ಪಣೆ ಮಾಡಲಿದ್ದೇವೆ ಎಂದರು. ಮೈಸೂರು ಜಿಲ್ಲೆ ಹಾಗೂ ಚಾಮರಾಜನಗರ ಭಾಗದಲ್ಲಿ ಮೇಲ್ಸೆತುವೆ, ಕೆಳ ಸೇತುವೆ, ಎಲ್.ಸಿ ಗೇಟ್ ಗಳ ನಿರ್ಮಾಣಕ್ಕೆ ಅಂದಾಜು ಪಟ್ಟಿಯಾಗಿದೆ. ಅಧಿಕಾರಿಗಳೊಂದಿಗೆ ಈಗಾಗಲೇ ವೀಕ್ಷಿಸಿ ಚರ್ಚಿಸಲಾಗಿದೆ. ಇನ್ನು 15 ದಿನದೊಳಗೆ ಯೋಜನೆ ಯಾವ ಯಾವ ಹಂತದಲ್ಲಿದೆ ಎಂಬುದನ್ನು ಪರಿಶೀಲಿಸಿ ಇನ್ನೂ 2 ವರ್ಷದಲ್ಲಿ ಎಲ್ಲವನ್ನು ಪೂರ್ಣಗೊಳಿಸುವ ಸಂಕಲ್ಪ ಮಾಡಲಾಗಿದೆ ಎಂದು ಸಚಿವರಾದ ವಿ. ಸೋಮಣ್ಣ ಅವರು ತಿಳಿಸಿದರು. ಮೈಸೂರು ವಿಭಾಗದ ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾದ ಮುದಿಪ್ ಮಿತ್ತಲ್, ಮುಖ್ಯ ಯೋಜನಾ ವ್ಯವಸ್ಥಾಪಕರಾದ ಗತಿಶಕ್ತಿ, ಮುಖ್ಯ ಯೋಜನಾ ವ್ಯವಸ್ಥಾಪಕರಾದ ಆನಂದ ಭಾರತಿ ಹಾಗೂ ಇಲಾಖೆಯ ವಿಭಾಗೀಯ ಅಧಿಕಾರಿಗಳು ಈ ಸಂದರ್ಭದಲ್ಲಿ ಇದ್ದರು

# ಸುರಕ್ಷತೆಯಿಲ್ಲದ ಸಾರಿಗೆ ಬಸ್ಸುಗಳು

## ಎಚ್.ಡಿ.ಕೋಟೆಯಲ್ಲಿ ಡಕೋಟಾ ವಾಹನಗಳು | ಕಾಡಂಚಿನಲ್ಲಿ ಕೆಟ್ಟು ನಿಲ್ಲುವ ಬಸ್ಸುಗಳು

**ಶಿವಕುಮಾರ ತುಂಬಸೋಗೆ**

ಎಚ್.ಡಿ.ಕೋಟೆ: ಬಡ ಮಧ್ಯಮ ವರ್ಗದವರು ದೈನಂದಿನ ಸಾರಿಗೆ ಸಂಚಾರಕ್ಕಾಗಿ ಅವಲಂಬಿಸಿರುವ ಕೆ.ಎಸ್.ಆರ್.ಟಿ.ಸಿ ಬಸ್ಸುಗಳು ಸುರಕ್ಷತೆಯಿಲ್ಲದೆ ಪ್ರಯಾಣಿಕರ ಪ್ರಾಣಕ್ಕೆ ಕುತ್ತಾಗಿ ಸಂಚರಿಸುತ್ತಿವೆ. ಗ್ರಾಮೀಣ ಭಾಗದಲ್ಲಿ ಸಂಚರಿಸುವ ಬಸ್ಸುಗಳಲ್ಲಿ ಪ್ರಯಾಣಿಕರಿಗೆ ಕನಿಷ್ಠ ಸುರಕ್ಷತೆಯಿಲ್ಲ. ಬಾಗಿಲುಗಳು, ಕಿಟಕಿಗಳು ಇಲ್ಲದಿರುವುದು ಒಂದೆಡೆಯಾದರೆ, ಕಿತ್ತಿರುವ ಸೀಟುಗಳು, ಬಸ್ಸಿನ ಒಳಗಡೆ ಕಸ ತುಂಬಿಕೊಂಡು ಪ್ರಯಾಣಿಕರ ಅನಾರೋಗ್ಯಕ್ಕೂ ಕಾರಣವಾಗಿವೆ. ತಾಲೂಕಿನ ಕೆಲ ಗ್ರಾಮಗಳಲ್ಲಿ ರಸ್ತೆ ಸರಿಯಿಲ್ಲದೆ, ಕಾಮಗಾರಿ ನಡೆಯುತ್ತಿರುವ ರಸ್ತೆಗಳು ಧೂಳುಮಯವಾಗಿವೆ. ಕಿ.ಮೀಟರ್ ಗಟ್ಟಲೆ ಪ್ರಯಾಣದ ವೇಳೆ ಕಿಟಕಿ ಇಲ್ಲದ ಬಸ್ಸುಗಳಿಂದ ಬರುವ ಧೂಳಿನಿಂದ ಶ್ವಾಸಕೋಶದ ತೊಂದರೆ, ಉಸಿರಾಟದ ತೊಂದರೆ, ಚರ್ಮದ ಅಲರ್ಜಿ ಸೇರಿದಂತೆ ಇನ್ನಿತರೆ ಕಾಯಿಲೆಗಳಿಗೆ ಆಹ್ವಾನ ನೀಡುತ್ತಿವೆ.

ಡಕೋಟಾ ಬಸ್ಸುಗಳನ್ನು ನಡಾಡಿ, ಕಾಡಬೇಗೂರು, ಭೀಮನಕೊಲ್ಲಿ, ಮೇಟಿಕುಪ್ಪೆ ಸೇರಿದಂತೆ ಹುಣಸೂರು ಮಾರ್ಗದ ಗ್ರಾಮಾಂತರ ಭಾಗಕ್ಕೆ ನಿಯೋಜಿಸಲಾಗುತ್ತಿದೆ. ಕಾಡಂಚಿನಲ್ಲಿ ಸಂಚರಿಸುವ ಬಸ್ಸುಗಳು ಎಲ್ಲೆಂದರಲ್ಲಿ ಕೆಟ್ಟುನಿಲ್ಲುತ್ತಿವೆ ಇದರಿಂದ ಕಾಡುಪ್ರಾಣಿಗಳ ದಾಳಿಯ ಭಯ ಪ್ರಯಾಣಿಕರೊಟ್ಟಿಗೆ ಚಾಲಕ, ನಿರ್ವಾಹಕರಿಗಿದೆ. ಡಕೋಟ ಬಸ್ಸುಗಳ ಬಗ್ಗೆ ಮೇಲಧಿಕಾರಿಗಳಿಗೆ ಮಾಹಿತಿ ನೀಡಿರುವ ಸಿಬ್ಬಂದಿಗಳು ಪರಿಹಾರ ಮಾರ್ಗವಿಲ್ಲದೆ ಅಸಹಾಯಕರಾಗಿ ಕರ್ತವ್ಯ ನಿಭಾಯಿಸುತ್ತಿದ್ದಾರೆ.



### ಎಲ್ಲೂ ಸಲ್ಲದ ಬಸ್ಸುಗಳು ಎಚ್.ಡಿ.ಕೋಟೆಗೆ !

ಇಲ್ಲಿನ ಬಸ್ಸುಗಳಲ್ಲಿರುವ ಸಾಕಷ್ಟು ಸಮಸ್ಯೆಗಳೇ ಪರಿಹಾರವಾಗಿಲ್ಲ. ಆದರೆ, ಬೆಂಗಳೂರು ಮಹಾನಗರದಲ್ಲಿ ಓಡಾಡಿರುವ ಬಿ.ಎಂ.ಟಿ.ಸಿಯ ಒಂದಷ್ಟು ಬಸ್ಸುಗಳನ್ನು ಎಚ್.ಡಿ.ಕೋಟೆ ಡಿಪೋಗೆ ಕೊಡಲಾಗಿದೆ. ಕೆಎ–57 ಈ–0093, 0638, 9457 ಇದೇ ಬಸ್ಸುಗಳನ್ನೇ ಹಳ್ಳಿಗಳಲ್ಲಿ ಸಂಚರಿಸುವಂತೆ ಅಧಿಕಾರಿಗಳು ನಿಯೋಜಿಸಿದ್ದಾರೆ. ಅದರಂತೆಯೇ ಸುಮಾರು 1.5ವರ್ಷದಿಂದ ಈ ಬಸ್ಸುಗಳು ಕಾರ್ಯ ನಿರ್ವಹಿಸುತ್ತಿವೆ.10 ಲಕ್ಷ ಕಿ.ಮೀ ಅಥವಾ ಅದಕ್ಕಿಂತ ಹೆಚ್ಚಿಗೆ ಸಂಚರಿಸಿರುವ ಹಳೆಯ ಬಸ್ಸುಗಳನ್ನು ಗುಜರಿಗೆ ಸೇರಿಸಬೇಕು. ನಗರ ಅಥವಾ ಗ್ರಾಮೀಣ ಭಾಗಗಳಲ್ಲಿ ಓಡಿಸಬಾರದು ಎಂದು ನ್ಯಾಯಾಲಯ ಕಟ್ಟುನಿಟ್ಟಾಗಿ ಆದೇಶಿಸಿದೆ. ಬಸ್ಸಿನ ಹಾಗೂ ಪ್ರಯಾಣಿಕರ ಸುರಕ್ಷತೆಯ ಬಗ್ಗೆ ಇಲಾಖೆಗೆ ತಿಳಿದಿದ್ದರೂ ಗುಜರಿ ಬಸ್ಸುಗಳನ್ನು ಕೋಟೆಗೆ ಕೊಟ್ಟಿದ್ಯಾಕೆ ಎಂಬ ಪ್ರಶ್ನೆ ಮೂಡಿದೆ.





# ಕಾಂಗ್ರೆಸ್ ಜನವಿರೋಧಿ ಧೋರಣೆ ತಿಳಿಸಲು ಬಳ್ಳಾರಿ ಚಲೋ: ರಘು

ಮೈಸೂರು: ಬಿಜೆಪಿಯ ಬಳ್ಳಾರಿ ಚಲೋ ಕೇವಲ ವ್ಯಕ್ತಿ ವಿರುದ್ಧದ ಹೋರಾಟವಲ್ಲ, ಆಡಳಿತ ಪಕ್ಷದ ಜನವಿರೋಧಿ ಧೋರಣೆಗಳನ್ನು ಜನರಿಗೆ ತಿಳಿಸುವ ನಿಟ್ಟಿನಲ್ಲಿ 10 ದಿನಗಳ ಕಾಲ ನಡೆಯಲಿದೆ ಎಂದು ವಿಧಾನ ಪರಿಷತ್ ಸದಸ್ಯ ಕೌಟಿಲ್ಯ ರಘು ತಿಳಿಸಿದರು.

ಬಿಜೆಪಿ ಕಚೇರಿಯಲ್ಲಿ ಮಾತನಾಡಿದ ಅವರು, ಸೆ.1ರಿಂದ ಸೆ.10ರವರೆಗೆ ಒಟ್ಟು 10 ದಿನಗಳ ಕಾಲ ನಡೆಯಲಿದೆ. 10ದಿನಗಳ ಕಾಲ 175ರಿಂದ 200 ಕಿ.ಮೀವರೆಗೆ ವಿಜಯೇಂದ್ರ ಅಧ್ಯಕ್ಷತೆಯಲ್ಲಿ ಆರ್. ಆಶೋಕ್, ಛಲವಾದಿ ನಾರಾಯಣಸ್ವಾಮಿ ಹಾಗೂ ಕೇಂದ್ರದ ನಾಯಕರ ನೇತೃತ್ವದಲ್ಲಿ ಮೈಸೂರು ಚಲೋ ನಂತರ ಬಳ್ಳಾರಿ ಚಲೋ ಐತಿಹಾಸಿಕವಾದ ಜನಜಾಗೃತಿ, ರಾಜಕೀಯ ಜಾಗೃತಿ ಆಗಿದೆ. ಕೇವಲ ರಾಜಕೀಯ ಪ್ರಚಾರಕ್ಕಾಗಿ ಅಲ್ಲ, ಆಡಳಿತ ಪಕ್ಷದ ಜನವಿರೋಧಿ ಧೋರಣೆಯನ್ನು ಜನರಿಗೆ ತಿಳಿಸುವುದಾಗಿದೆ. ಮೈಸೂರು ಚಲೋ ಆಗದೇ ಹೋಗಿದ್ದರೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕುಟುಂಬ 14ನಿವೇಶನ ವಾಪಾಸ್ ಮಾಡುತ್ತಿರಲಿಲ್ಲ. ಬಳ್ಳಾರಿ ಚಳವಳಿ ವ್ಯಕ್ತಿಗತವಾಗಿ ನಡೆಯುತ್ತಿರುವ ಚಳವಳಿಯಲ್ಲ. ಪರಿಶಿಷ್ಟ ಪಂಗಡ, ಜಾತಿಗೆ ಮೀಸಲಾಗಿದ್ದ ಹಣವನ್ನು ದುರುಪಯೋಗ ಮಾಡಿಕೊಂಡಿರುವುದರ ವಿರುದ್ಧವಾಗಿದೆ ಎಂದರು.




ಪರಿಶಿಷ್ಟ ಪಂಗಡ ಹಾಗೂ ಪರಿಶಿಷ್ಟ ಜಾತಿಗೆ ಸೇರಿದ ಅಭಿವೃದ್ಧಿ ನಿಗಮದ ಬ್ಯಾಂಕ್ ಖಾತೆಗೆ ನೇರವಾಗಿ ಕನ್ನ ಹಾಕಿರುವುದು ಇದೇ ಮೊದಲಾಗಿದೆ. ಅಂತಹ ಸಚಿವರನ್ನು ಮತ್ತೆ ಸಂಪುಟಕ್ಕೆ ಸೇರಿಸಿಕೊಂಡಿದ್ದು ಕಾಂಗ್ರೆಸ್ ಧೋರಣೆ ತೋರಿಸಿದೆ. ರಾಜ್ಯದಲ್ಲಿ ಬರ, ರೈತರ ಸಂಕಷ್ಟ ಹಾಗೂ ಕಾವೇರಿ ನೀರಿನ ಸಂಕಟ ಇರುವಾಗ ಸಂಪುಟ ಹಂಚಿಕೆ, ನಿಗಮ ಹಂಚಿಕೆ ಇತ್ಯಾದಿ ಕಡೆ ಸರ್ಕಾರ ಗಮನ ಹರಿಸುತ್ತಿದೆ. 2ಲಕ್ಷದ 50ಸಾವಿರ ಹುದ್ದೆಗಳನ್ನು ಭರ್ತಿ ಮಾಡದೇ ಲಕ್ಷಾಂತರ ನಿರುದ್ಯೋಗಿಗಳನ್ನು ಹಾಗೇ ಉಳಿಸಿದ್ದಾರೆ. ಉದ್ಯಾನವನಗಳನ್ನು ಶೇ.5ರಷ್ಟು ಬಳಕೆಗೆ ಕಾಯಿದೆ ಮಾಡಲು ಹೊರಟಿರುವುದು ಸರಿಯಲ್ಲ. ಪಾದಚಾರಿ ಮಾರ್ಗವನ್ನೇ ಒತ್ತುವರಿ ಮಾಡಿದ್ದಿರಿ. ಪಾರ್ಕ್ ಉಳಿಸಲು ಎಲ್ಲಾ ವಾಯುವಿಹಾರಿಗಳೊಂದಿಗೆ ಬಿಜೆಪಿ ಪ್ರತಿಭಟನೆ ನಡೆಸಲಿದೆ ಎಂದು ಹೇಳಿದರು.

ಈಗಾಗಲೇ ಪಂಚಭಾಗ್ಯಗಳಿಗೂ ಕತ್ತರಿ ಹಾಕುವ ಕೆಲಸ ನಡೆಯುತ್ತಿದೆ. ಪರಿಷ್ಕರಣೆ ಇತ್ಯಾದಿ ಹೆಸರಿನ ಕುಂಟು ನೆಪ ಇಟ್ಟುಕೊಂಡು ಕೆಲವೇ ದಿನಗಳಲ್ಲಿ ಗ್ಯಾರಂಟಿಗಳನ್ನು ನಿಲ್ಲಿಸಲು ಹೊರಟಿದೆ. ಸಿದ್ದರಾಮಯ್ಯ ಅವರ ಬಜೆಟ್ ನಲ್ಲಿ ದೇವರಾಜ ಅರಸು, ಉಪ್ಪಾರ, ವಿಶ್ವಕರ್ಮ, ಅಂಬಿಗರ ಚೌಡಯ್ಯ, ಅಲೆಮಾರಿ ನಿಗಮ, ವೀರಶೈವ, ಒಕ್ಕಲಿಗ, ಸವಿತಾ, ಮಡಿವಾಳ ಮಾಚಯ್ಯ, ಕಾಡುಗೊಲ್ಲ, ಮರಾಠ, ತಿಗಣ, ಕುಂಬಾರ, ಗಾಣಿಗ, ನಾರಾಯಣಗುರು, ಕೊಡವ, ಅಡಪದ ಅಭಿವೃದ್ಧಿ ನಿಗಮಗಳಿಗೆ ಸೂಕ್ತ ಅನುದಾನವೇ ನೀಡದೇ ವಂಚಿಸಿದ್ದಾರೆ. ಇದೆಲ್ಲವನ್ನು ಜನರಿಗೆ ತಿಳಿಸುವ ಕೆಲಸವನ್ನು ಪಾದಯಾತ್ರೆಯಲ್ಲಿ ಮಾಡಲಾಗುವುದು ಎಂದು ಹೇಳಿದರು. ರಾಜ್ಯ ಎಸ್ ಟಿ ಮೋರ್ಚಾ ಪ್ರಧಾನ ಕಾರ್ಯದರ್ಶಿ ಎಂ.ಶಿವಕುಮಾರ್, ಜಿಲ್ಲಾ ಉಪಾಧ್ಯಕ್ಷ ಮೈ.ಪು. ರಾಜೇಶ್, ಚಾಮರಾಜ ಮಂಡಲ ಅಧ್ಯಕ್ಷ ದಿನೇಶ್ ಗೌಡ, ಜಿಲ್ಲಾ ಮಾಧ್ಯಮ ಸಂಚಾಲಕ ಮಹೇಶ್ ರಾಜೇ ಅರಸು, ಶಿವರಾಜ್ ಉಪಸ್ಥಿತರಿದ್ದರು.

## ಧರ್ಮಸ್ಥಳ ಯೋಜನೆಯಿಂದ ಸಮಾಜಮುಖಿ ಕಾರ್ಯಕ್ರಮಗಳು

**ಎಂ.ಎಸ್. ರವಿಶಂಕರ್ ಅಭಿಮತ**

**ಚಿಕ್ಕಬೇಗೂರಿನಲ್ಲಿ 'ಬಸವನಕಟ್ಟೆ ಕೆರೆಹೂಳೆತ್ತುವ ಕಾಮಗಾರಿಗೆ ಗುದ್ದಲಿಪೂಜೆ.**



ಚಾಮರಾಜನಗರ. ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ 'ನಮ್ಮೂರು ನಮ್ಮ ಕೆರೆ' ಯೋಜನೆಯಡಿ ತೆರಕಣಾಂಬಿ ಯೋಜನಾ ಕಚೇರಿ ವ್ಯಾಪ್ತಿಯ ಹರವೆ ಹೋಬಳಿ ಕುಲಗಾಣ ಗ್ರಾಮ ಪಂಚಾಯತಿ ವ್ಯಾಪ್ತಿಯ ಚಿಕ್ಕಬೇಗೂರು ಗ್ರಾಮದಲ್ಲಿ ಬಸವೇಗೌಡನ ಕಟ್ಟೆ ಕೆರೆ ಹೂಳೆತ್ತುವ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಲಾಯಿತು.

ಇದೇ ವೇಳೆ ಜಿಲ್ಲಾ ಜನಜಾಗೃತಿ ವೇದಿಕೆ ನಿಕಟಪೂರ್ವ ಅಧ್ಯಕ್ಷ ಎಂ.ಎಸ್. ರವಿಶಂಕರ್ ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಜಿಲ್ಲೆ ಸೇರಿದಂತೆ ರಾಜ್ಯಾದ್ಯಂತ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳು ಜರುಗುತ್ತಿದ್ದು, ಒಂದು ಹೆಮ್ಮೆಯ ಸಂಗತಿ, ಸ್ವಸಹಾಯ ಸಂಘಗಳಿಂದ ಸಾಲಸೌಲಭ್ಯ, ವಸತಿರಹಿತರಿಗೆ ಮನೆ ನಿರ್ಮಾಣ, ಶಾಲೆಗಳಿಗೆ ಶಿಕ್ಷಕರ ನೇಮಕ, ಇಂತಹ ಜನಪರ ಕಾರ್ಯಕ್ರಮಗಳ ಜೊತೆಗೆ ಧರ್ಮಸ್ಥಳ ಧರ್ಮಾಧಿಕಾರಿಯವರು ಇನ್ನು ಒಂದು ಹೆಜ್ಜೆ ಮುಂದೆ ಹೋಗಿ ಗ್ರಾಮೀಣಭಾಗದ ರೈತಾಪಿವರ್ಗದವರ ಬದುಕನ್ನು ಕೇಂದ್ರವಾಗಿರಿಸಿಕೊಂಡು, ಕೆರೆಕಟ್ಟೆ ಹೂಳೆತ್ತಿಸುವ ಕಾರ್ಯಕ್ರಮಕ್ಕೆ ದಶಕಗಳ ಹಿಂದೆಯೇ ಚಾಲನೆ ನೀಡಿದ್ದಾರೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಜಿಲ್ಲಾ ನಿರ್ದೇಶಕರಾದ ದಿನೇಶ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಬಸವೇಗೌಡನ ಕಟ್ಟೆ ಕೆರೆ ಸಮಿತಿ ಅಧ್ಯಕ್ಷ ದೇವಣ್ಣ, ಗೌರವಾಧ್ಯಕ್ಷ ನಾಗಣ್ಣ, ಜಿಲ್ಲಾ ಜನಜಾಗೃತಿ ವೇದಿಕೆ ಸಂಸ್ಥಾಪಕ ಅಧ್ಯಕ್ಷ ರಾಜಶೇಖರರಾಧ್ಯ, ಕೆರೆ ಸಮಿತಿ ಉಪಾಧ್ಯಕ್ಷ ಡೇರಿ ನಾಗೇಶ್, ಎಂಪಿಸಿಎಸ್ ಅಧ್ಯಕ್ಷ ಸಿ.ಎನ್. ಬಾಬು ತಾಲೂಕು ಯೋಜನಾಧಿಕಾರಿ ಶಶಿಕುಮಾರ್, ಕೆರೆನಿರ್ಮಾಣ ಎಂಜಿನಿಯರ್ ಪುಷ್ಪ ರಾಜ್, ವಲಯ ಮೇಲ್ವಿಚಾರಕ ಹೆಚ್. ಬಿ. ಹರೀಶ್, ಕೃಷಿ ಮೇಲ್ವಿಚಾರಕ ಮಂಜುನಾಥ್, ಸಮಿತಿ ಸದಸ್ಯರು, ಸೇವಾಪ್ರತಿನಿಧಿ ಪ್ರಕಾಶ್ ಇದ್ದರು.

### ಬಿಇಓ ಹನುಮಶೆಟ್ಟಿಚಂದಕವಾಡಿ ಹೋಬಳಿ ಮಟ್ಟದ ಹಿರಿಯ ಪ್ರಾಥಮಿಕ/ಪ್ರೌಢಶಾಲಾ ಕ್ರೀಡಾಕೂಟ

# ಕ್ರೀಡೆಯು ಶಿಕ್ಷಣದ ಅವಿಭಾಜ್ಯ ಅಂಗವಾಗಿರಲಿ

ಚಾಮರಾಜನಗರ: ಕ್ರೀಡೆಯು ಶಿಕ್ಷಣದ ಅವಿಭಾಜ್ಯ ಅಂಗವಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಹನುಮಶೆಟ್ಟಿ ಹೇಳಿದರು

ನಗರದ ಡಾ.ಬಿ.ಆರ್.ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿ.ಪಂ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಶಾಲಾ ಶಿಕ್ಷಣ ಇಲಾಖೆ ವತಿಯಿಂದ 14/17 ವರ್ಷ ವಯೋಮಿತಿಯ ಬಾಲಕ, ಬಾಲಕಿಯರ ಚಂದಕವಾಡಿ ಹೋಬಳಿ ಮಟ್ಟದ ಹಿರಿಯ ಪ್ರಾಥಮಿಕ/ಪ್ರೌಢಶಾಲಾ ಕ್ರೀಡಾಕೂಟದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕ್ರೀಡೆಯು ವಿದ್ಯಾರ್ಥಿಗಳ ದೈಹಿಕ, ಮಾನಸಿಕ ಮತ್ತು ಸಾಮಾಜಿಕ ಬೆಳವಣಿಗೆಗೆ ಅತ್ಯಗತ್ಯವಾಗಿದೆ. ಇದು ಕೇವಲ ಪಠ್ಯಪುಸ್ತಕಗಳ ಜ್ಞಾನದಿಂದ ವ್ಯಕ್ತಿತ್ವದ ಸಂಪೂರ್ಣ ವಿಕಸನ ಸಾಧ್ಯವಿಲ್ಲ; ಅದಕ್ಕೆ ಕ್ರೀಡೆಯೂ ಪೂರಕವಾಗಿರಬೇಕು ಎಂದರು. 2026–27ನೇ ಸಾಲಿನಲ್ಲಿ ಕ್ರೀಡಾ ಸ್ಪರ್ಧೆಗಳನ್ನು ಇಂದಿನಿಂದ ಆರಂಭಮಾಡಿದ್ದು, ಮೊದಲಿಗೆ ಚಂದಕವಾಡಿ ಹೋಬಳಿ ಮಟ್ಟದ ಕ್ರೀಡಾಕೂಟಕ್ಕೆ ಚಾಲನೆ ನೀಡಲಾಗಿದೆ. ಕ್ರೀಡೆಯು ಶಿಕ್ಷಣದ ಅವಿಭಾಜ್ಯ ಅಂಗವಾಗಿದೆ. ಮಗುವಿನ ಸರ್ವತೋಮುಖ ವಿಕಸ, ಬೆಳವಣಿಗೆ ನಿಜವಾದ ಶಿಕ್ಷಣ ಎಂದು ನಾವು ವ್ಯಾಖ್ಯನ ಮಾಡಿದ್ದೇವೆ. ಮಗುವಿನ ದೈಹಿಕ, ಮಾನಸಿಕ, ಜ್ಞಾನಾತ್ಮಕ, ಭೌತಿಕ ಇರಬಹುದು. ಎಲ್ಲರೀತಿಯ ಬೆಳವಣಿಗೆಗೆ ಮಾಗದರ್ಶನ ನೀಡುವಂತಹ, ಬೆಂಬಲ ನೀಡುವಂತಹ ಎಲ್ಲಾ ಚಟುವಟಿಕೆಗಳನ್ನು ಶಾಲಾ ಹಂತದಲ್ಲಿ ನಾವು ಹಮ್ಮಿಕೊಂಡಿದ್ದೇವೆ. ಅದರಲ್ಲಿ ಕ್ರೀಡಾ ಚಟುವಟಿಕೆಯು ಒಂದಾಗಿದೆ. ಇದು ಮಕ್ಕಳಲ್ಲಿ ಕ್ರೀಡಾ ಮನೋಭಾವನೆ ಉಂಟು ಮಾಡಿ ಮೌಲ್ಯಗಳನ್ನು ಕಲಿಸಿಕೊಡುತ್ತದೆ ಎಂದರು. ವಿದ್ಯಾರ್ಥಿಗಳು ವಿದ್ಯಾ ಭ್ಯಾಸದ ಜೊತೆಗೆ ಕ್ರೀಡೆಯಲ್ಲೂ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಆ ಮೂಲಕ ತಾಲೂಕು, ಜಿಲ್ಲೆ, ರಾಜ್ಯ ಮಟ್ಟದಲ್ಲಿ ಉತ್ತಮ ಸಾಧನೆ ಮಾಡಿ ತಾಲೂಕು, ಜಿಲ್ಲೆಗೆ ಕೀರ್ತಿತಂದು ಕೊಡಬೇಕೆಂದು ಹೇಳಿ ದರು. ಸಮಾಜಸೇವಕಿ ಗೌರಿಸಿದ್ದರಾಜು ಕಾರ್ಯಕ್ರಮ ಉದ್ಘಾಟಿಸಿ ಕ್ರೀಡಾಪಟುಗಳಿಗೆ ಶುಭ ಕೋರಿದರು. ಕಾರ್ಯಕ್ರಮದಲ್ಲಿ ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕ ಎಸ್.ಬಸವರಾಜು, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನಿರ್ದೇಶಕ ಧನಂಜಯ್, ತಾಲೂಕು ಸಹಶಿಕ್ಷಕರ ಸಂಘದ ಕಾರ್ಯದರ್ಶಿ ನೇಮಿರಾಜ್, ಕರ್ನಾಟಕ ರಾಜ್ಯಸರ್ಕಾರಿ ನೌಕರರ ಸಂಘದ ಸದಸ್ಯ ಎಸ್.ಮಹಾದೇವಸ್ವಾಮಿ, ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಕಾರ್ಯದರ್ಶಿ ಕುಮಾರಸ್ವಾಮಿ, ದೈಹಿಕ ಶಿಕ್ಷಣ ಶಿಕ್ಷಕ ಗ್ರೇಡ್ 1 ಸಂಘದ ಅಧ್ಯಕ್ಷ ತಗಡೂರಯ್ಯ, ತಾಲೂಕು ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಅಧ್ಯಕ್ಷ ಚಿಕ್ಕಬಸವಯ್ಯ, ತಾಲೂಕು ಕಾರ್ಯದರ್ಶಿ ಶಿವಮಲ್ಲಯ್ಯ, ದೈಹಿಕ ಶಿಕ್ಷಣ ಶಿಕ್ಷಕರಾದ ಮೋಹನ್, ಮರಿಸಿದ್ದಶೆಟ್ಟಿ, ನಟರಾಜು, ಜಿ.ಮಹದೇವಯ್ಯ ವಿದ್ಯಾರ್ಥಿಗಳು ಭಾಗವಹಿಸಿದ್ದರು.



## ಸ್ಥಳೀಯ ಕಲಾವಿದರು, ಗ್ರಾಮೀಣ ಕ್ರೀಡೆ , ಯುವ ಪ್ರತಿಭೆಗಳಿಗೆ ಹೆಚ್ಚಿನ ಆದ್ಯತೆ

# ವಿನೂತನ- ಜನಪರ ಈ ಬಾರಿಯ ಶ್ರೀರಂಗಪಟ್ಟಣ ದಸರಾ ಉತ್ಸವ

**ಮಂಡ್ಯ:** ಶ್ರೀರಂಗಪಟ್ಟಣ ದಸರಾ ಮಹೋತ್ಸವವನ್ನು ಈ ಬಾರಿ ವಿನೂತನವಾಗಿ, ಅರ್ಥಪೂರ್ಣವಾಗಿ ಹಾಗೂ ಜನಪರವಾಗಿ ಆಯೋಜಿಸುವ ಮೂಲಕ ಯಶಸ್ವಿಗೊಳಿಸಬೇಕು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಅಧ್ಯಕ್ಷರು ಹಾಗೂ ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕರಾದ ರಮೇಶ್ ಬಂಡಿಸಿದ್ದೇಗೌಡ ಅವರು ತಿಳಿಸಿದರು.



ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸೋಮವಾರ ಶ್ರೀರಂಗಪಟ್ಟಣ ದಸರಾ ಮಹೋತ್ಸವದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ದಸರಾ ಕಾರ್ಯಕ್ರಮಗಳು ಕೇವಲ ಉತ್ಸವದ ಆಚರಣೆಗೆ ಸೀಮಿತವಾಗದೆ, ಎಲ್ಲ ವರ್ಗದ ಜನರು ಭಾಗವಹಿಸುವಂತಹ ಜನಪರ ಮಹೋತ್ಸವವಾಗಬೇಕು. ಸಾರ್ವಜನಿಕರಿಗೆ ಹೊಸ ಅನುಭವ ನೀಡುವ ರೀತಿಯಲ್ಲಿ ವೈವಿಧ್ಯಮಯ ಹಾಗೂ ವಿನೂತನ ಕಾರ್ಯಕ್ರಮಗಳನ್ನು ರೂಪಿಸಬೇಕು ಎಂದರು.

**ಸ್ಥಳೀಯ ಕಲಾವಿದರಿಗೆ ಆದ್ಯತೆ:** ದಸರಾ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಸ್ಥಳೀಯ ಕಲಾವಿದರಿಗೆ ಹೆಚ್ಚಿನ ಆದ್ಯತೆ ನೀಡಬೇಕು. ತಾಲ್ಲೂಕು ಹಾಗೂ ಜಿಲ್ಲೆಯಲ್ಲಿರುವ ಪ್ರತಿಭಾವಂತ ಕಲಾವಿದರನ್ನು ಗುರುತಿಸಿ, ಅವರ ಪ್ರತಿಭೆ ಪ್ರದರ್ಶಿಸಲು ಸೂಕ್ತ ವೇದಿಕೆ ಕಲ್ಪಿಸಬೇಕು. ಸ್ಥಳೀಯ ಕಲಾವಿದರಿಗೆ ಹೆಚ್ಚಿನ ಅವಕಾಶ ನೀಡುವುದರಿಂದ ದಸರಾ ಮಹೋತ್ಸವಕ್ಕೆ ಮತ್ತಷ್ಟು ಮೆರುಗು ಬರಲಿದೆ ಎಂದು ಹೇಳಿದರು.

**ಗ್ರಾಮೀಣ ಕ್ರೀಡೆಗೆ ಹೆಚ್ಚಿನ ಒತ್ತು:** ಕ್ರೀಡಾ ದಸರಾವನ್ನು ಪರಿಣಾಮಕಾರಿಯಾಗಿ ಆಯೋಜಿಸಬೇಕು. ಗ್ರಾಮೀಣ ಪ್ರದೇಶಗಳಲ್ಲಿ ಜನಪ್ರಿಯವಾಗಿರುವ ಸಾಂಪ್ರದಾಯಿಕ ಹಾಗೂ ಗ್ರಾಮೀಣ ಕ್ರೀಡೆಗಳಿಗೆ ಹೆಚ್ಚಿನ ಒತ್ತು ನೀಡಬೇಕು. ಯುವಕರು ಹಾಗೂ ಕ್ರೀಡಾಪಟುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕಾರ್ಯಕ್ರಮಗಳನ್ನು ರೂಪಿಸಿ, ಗ್ರಾಮೀಣ ಭಾಗದ ಪ್ರತಿಭಾವಂತ ಕ್ರೀಡಾಪಟುಗಳನ್ನು ಗುರುತಿಸಿ ಪ್ರೋತ್ಸಾಹಿಸಬೇಕು ಎಂದರು.

**ಕಾಲೇಜು ವಿದ್ಯಾರ್ಥಿಗಳಿಗೆ ವೇದಿಕೆ:** ತಾಲ್ಲೂಕಿನ ಎಲ್ಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ತಮ್ಮ ಪ್ರತಿಭೆ ಪ್ರದರ್ಶಿಸಲು ವೇದಿಕೆ ಕಲ್ಪಿಸಬೇಕು. ವಿವಿಧ ಸಾಂಸ್ಕೃತಿಕ ಹಾಗೂ ಪ್ರತಿಭಾ ಪ್ರದರ್ಶನ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಯುವಜನರಲ್ಲಿರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸಬೇಕು ಎಂದು ತಿಳಿಸಿದರು.

**ಮಕ್ಕಳಿಗಾಗಿ ಸಿನಿಮೋತ್ಸವ:** ಮಕ್ಕಳಿಗೆ ಉತ್ತಮ ಹಾಗೂ ಸಂದೇಶಾತ್ಮಕ ಚಲನಚಿತ್ರಗಳನ್ನು ವೀಕ್ಷಿಸಲು ಅವಕಾಶ ಕಲ್ಪಿಸುವ ಉದ್ದೇಶದಿಂದ ಸಿನಿಮೋತ್ಸವ ಕಾರ್ಯಕ್ರಮ ಆಯೋಜಿಸಬೇಕು. ಈ ಸಂಬಂಧ ಶಾಲಾ ಮಕ್ಕಳಿಗೆ ಚಲನಚಿತ್ರ ಪ್ರದರ್ಶನಕ್ಕೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಶಿಕ್ಷಣ ಇಲಾಖೆಯ ಡಿಡಿಪಿಐ ಅವರು ಕ್ರಮವಹಿಸಬೇಕು ಎಂದು ಸೂಚಿಸಿದರು.

**ಮೂರು ದಿನಗಳ ಯುವ ಸಂಭ್ರಮ ಆಯೋಜನೆ:** ಮೈಸೂರಿನಲ್ಲಿ ಆಯೋಜಿಸುವ ಮಾದರಿಯಲ್ಲಿ ಶ್ರೀರಂಗಪಟ್ಟಣದಲ್ಲಿಯೂ ಯುವ ಸಂಭ್ರಮ ಕಾರ್ಯಕ್ರಮ ಆಯೋಜಿಸಬೇಕು. ದಸರಾ ಮಹೋತ್ಸವ ಆರಂಭಕ್ಕೂ ಮುನ್ನ ಮೂರು ದಿನಗಳ ಕಾಲ ಯುವ ಸಂಭ್ರಮ ನಡೆಸಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕು. ತಾಲ್ಲೂಕಿನ ಯುವ ಪ್ರತಿಭೆಗಳಿಗೆ ತಮ್ಮ ಕಲೆ ಹಾಗೂ ಸಾಮರ್ಥ್ಯ ಪ್ರದರ್ಶಿಸಲು ಇದು ಉತ್ತಮ ವೇದಿಕೆಯಾಗಬೇಕು ಎಂದು ಶಾಸಕ ಬಂಡಿ ಸಿದ್ದೇಗೌಡ ಅವರು ಹೇಳಿದರು.

**12 ಸಮಿತಿಗಳ ರಚನೆ: ಜಿಲ್ಲಾಧಿಕಾರಿ:**ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಡಾ. ಕುಮಾರ್ ಅವರು, ಶ್ರೀರಂಗಪಟ್ಟಣ ದಸರಾ ಮಹೋತ್ಸವವನ್ನು ಈ ಬಾರಿ ಅರ್ಥಪೂರ್ಣವಾಗಿ ಹಾಗೂ ಯಶಸ್ವಿಯಾಗಿ ಆಯೋಜಿಸುವ ಉದ್ದೇಶದಿಂದ 12 ಸಮಿತಿಗಳನ್ನು ರಚಿಸಲಾಗಿದೆ. ಪ್ರತಿ ಸಮಿತಿಗೆ ವಹಿಸಿರುವ ಜವಾಬ್ದಾರಿಗಳನ್ನು ಸಮರ್ಪಕವಾಗಿ ನಿರ್ವಹಿಸಿ, ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ದಸರಾ ಮಹೋತ್ಸವದ ಸಿದ್ಧತೆ ಹಾಗೂ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ವೇದಿಕೆ, ಸಾಂಸ್ಕೃತಿಕ, ಮೆರವಣಿಗೆ, ವಸ್ತು ಪ್ರದರ್ಶನ, ಸ್ವಚ್ಛತೆ ಮತ್ತು ನೈರ್ಮಲ್ಯ, ಆಹಾರ ಮೇಳ, ನಗರ ಅಲಂಕಾರ, ಕ್ರೀಡಾ ಮತ್ತು ಯೋಗ ದಸರಾ, ಯುವ ಸಂಭ್ರಮ ಹಾಗೂ ಮಕ್ಕಳ ದಸರಾ ಸೇರಿದಂತೆ ವಿವಿಧ ಸಮಿತಿಗಳನ್ನು ರಚಿಸಲಾಗಿದೆ.

ಸಮಿತಿಗಳಿಗೆ ನೇಮಕಗೊಂಡಿರುವ ಅಧಿಕಾರಿಗಳು ತಮ್ಮ ಜವಾಬ್ದಾರಿಗಳನ್ನು ಸಮರ್ಪಕವಾಗಿ ನಿರ್ವಹಿಸಿ, ಸಂಬಂಧಿಸಿದ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸುವ ಮೂಲಕ ದಸರಾ ಮಹೋತ್ಸವದ ಎಲ್ಲ ಕಾರ್ಯಕ್ರಮಗಳನ್ನು ಯಾವುದೇ ಲೋಪವಿಲ್ಲದೆ ಯಶಸ್ವಿಯಾಗಿ ನಡೆಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಶ್ರೀರಂಗಪಟ್ಟಣದ ಐತಿಹಾಸಿಕ ಹಾಗೂ ಸಾಂಸ್ಕೃತಿಕ ಮಹತ್ವಕ್ಕೆ ತಕ್ಕಂತೆ ದಸರಾ ಮಹೋತ್ಸವವನ್ನು ವೈಭವಯುತವಾಗಿ, ಅರ್ಥಪೂರ್ಣವಾಗಿ ಹಾಗೂ ಸಾರ್ವಜನಿಕರ ಸಹಭಾಗಿತ್ವದೊಂದಿಗೆ ಆಚರಿಸಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗುವುದು ಎಂದು ಅವರು ಹೇಳಿದರು.

ಮಹಿಳೆಯರ ಪ್ರತಿಭೆ, ಕೌಶಲ್ಯ ಹಾಗೂ ಸಾಧನೆಗಳನ್ನು ಅನಾವರಣಗೊಳಿಸುವ ಕಾರ್ಯಕ್ರಮಗಳನ್ನು ರೂಪಿಸಬೇಕು

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಆರ್. ನಂದಿನಿ ಅವರು ಮಾತನಾಡಿ, ಶ್ರೀರಂಗಪಟ್ಟಣ ದಸರಾ ಕಾರ್ಯಕಮದಲ್ಲಿ ಮಹಿಳೆಯರ ಪ್ರತಿಭೆ, ಕೌಶಲ್ಯ ಹಾಗೂ ಸಾಧನೆಗಳನ್ನು ಅನಾವರಣಗೊಳಿಸುವ ನಿಟ್ಟಿನಲ್ಲಿ ವೈವಿಧ್ಯಮಯ ಕಾರ್ಯಕ್ರಮಗಳನ್ನು ರೂಪಿಸಬೇಕು ಎಂದು ತಿಳಿಸಿದರು.

ದಸರಾ ಉತ್ಸವಕ್ಕೆ ಆಗಮಿಸುವ ಸಾರ್ವಜನಿಕರನ್ನು ಆಕರ್ಷಿಸುವ ನಿಟ್ಟಿನಲ್ಲಿ ಗ್ಯಾಲರಿ ಹಾಗೂ ವಿವಿಧ ಉತ್ಪನ್ನಗಳ ಮಳಿಗೆಗಳಿಗೆ ಹೆಚ್ಚಿನ ಒತ್ತು ನೀಡಬೇಕು. ಮಳಿಗೆಗಳಲ್ಲಿ ಸ್ಥಳೀಯ ಕಲೆ, ಕರಕುಶಲ ವಸ್ತುಗಳು ಹಾಗೂ ಮಹಿಳಾ ಸ್ವಸಹಾಯ ಸಂಘಗಳು ತಯಾರಿಸುವ ಉತ್ಪನ್ನಗಳಿಗೆ ಆದ್ಯತೆ ನೀಡುವ ಮೂಲಕ ಸ್ಥಳೀಯ ಪ್ರತಿಭೆ ಹಾಗೂ ಉದ್ಯಮಶೀಲತೆಯನ್ನು ಉತ್ತೇಜಿಸಬೇಕು ಎಂದು ಅವರು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ವಿ.ಜೆ. ಶೋಭಾರಾಣಿ ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಅರ್ಜಿ ಆಹ್ವಾನ

**ಮಂಡ್ಯ:** ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾ ಮತ್ತು ಪ.ವರ್ಗದ ವೃತ್ತಿಪರ ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ 2026-27ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 30 ರಂದು ಕೊನೆಯ ದಿನವಾಗಿದ್ದು ವಿದ್ಯಾರ್ಥಿಗಳು https://shp.karnataka.gov.in/bcwd ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ. 8050770004 ಅನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದೇಶಿ ಉನ್ನತ ಶಿಕ್ಷಣಕ್ಕೆ ಅವಕಾಶ

**ಮಂಡ್ಯ:** ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ ವತಿಯಿಂದ ಉನ್ನತ ಶಿಕ್ಷಣಕ್ಕಾಗಿ ವಿದೇಶಗಳಿಗೆ ತೆರಳುವ ವಿದ್ಯಾರ್ಥಿಗಳಿಗೆ ವಿದೇಶಿ ಅಧ್ಯಯನದ ಅವಕಾಶಗಳು ಪ್ರವೇಶ ಪ್ರಕ್ರಿಯೆಗಳು ವಿದ್ಯಾರ್ಥಿಗಳಿಗೆ ವೀಸಾ ಮಾಹಿತಿ ಮತ್ತು ವಿದ್ಯಾರ್ಥಿ ವೇತನದ ಬಗ್ಗೆ ಮಾಹಿತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು ರಾಜ್ಯದ ವಿದ್ಯಾರ್ಥಿಗಳಿಗೆ ಜಾಗತಿಕ ಉನ್ನತ ಶಿಕ್ಷಣದ ಅವಕಾಶಗಳನ್ನು ಪರಿಚಯಿಸುವ ಉದ್ದೇಶದಿಂದ ವಿದೇಶದಲ್ಲಿ ಅಧ್ಯಯನ-2026 ಕಾರ್ಯಕ್ರಮವನ್ನು ಸೆಪ್ಟೆಂಬರ್ 06 ರಂದು ಬೆಂಗಳೂರು ಅರಮನೆ ಮೈದಾನ ಗೇಟ್ ನಂ. 04,ಗಾಯತ್ರಿ ವಿಹಾರದಲ್ಲಿ ಏರ್ಪಡಿಸಲಾಗಿದೆ.

ಸದರಿ ಕಾರ್ಯಕ್ರಮದಲ್ಲಿ 10ಕ್ಕೂ ಹೆಚ್ಚು ದೇಶಗಳು, 75ಕ್ಕೂ ಹೆಚ್ಚು ವಿಶ್ವವಿದ್ಯಾಲಯಗಳು ಭಾಗವಹಿಸಲಿದ್ದು, ಆಸಕ್ತ ಅಭ್ಯರ್ಥಿಗಳು ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ https://registration.ksdckarnataka.com ಹಾಗೂ https://studyabroad.ksdckarnataka.com ವೆಬ್ ಸೈಟ್ ಗಳನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲೆ, ಜಿಲ್ಲಾ ಕೌಶಲ್ಯಾಭಿವೃದ್ಧಿ ಕಛೇರಿಯ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳಾದ ದಿವ್ಯಶ್ರೀ. ಎನ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

## 60 ಟನ್ ಹಳೆ ಕಬ್ಬಿಣ ಸಾಗಾಟ ಪ್ರಕರಣ:

# ಸೆ.2ರಂದು ಬಹಿರಂಗ ಚರ್ಚೆಗೆ ರೈತ ಸಂಘಟನೆಗಳ ಸವಾಲು

**ಮಂಡ್ಯ:** ಜಿ.ಪಂ ಆವರಣದಿಂದ 60 ಟನ್ ಹಳೆ ಕಬ್ಬಿಣ ಸಾಗಾಣೆ ಸಂಬಂಧ ಯಾವೊಬ್ಬ ಅಧಿಕಾರಿ, ಜನಪ್ರತಿನಿಧಿಗಳು ಗಮನ ಹರಿಸದೆ ಇದ್ದು, ಈ ಸಂಬಂಧ ಸೆ. 2ರಂದು ಬಹಿರಂಗ ಚರ್ಚೆಗೆ ಆಗಮಿಸುವಂತೆ ರೈತಸಂಘದ ಮುಖಂಡ ಅಣ್ಣಯ್ಯ ಸವಾಲೆಸೆದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸುಮಾರು 60 ಟನ್ ಹಳೆ ಕಬ್ಬಿಣವನ್ನು ಅಕ್ರಮವಾಗಿ ಸಾಗಾಟ ಮಾಡಲಾಗಿದ್ದು ಇದರಲ್ಲಿ ಜಿಲ್ಲಾ ಪಂಚಾಯತ್ ಸಿಇಒ ಕೆ.ಆರ್.ನಂದಿನಿ ಅವರ ಪಾತ್ರವಿದೆ ಎಂದು ಗಂಭೀರ ಆರೋಪ ಮಾಡಿದರು.




ಇದನ್ನು ಖಂಡಿಸಿ ರೈತ, ದಲಿತ, ಕನ್ನಡಪರ, ಪ್ರಗತಿಪರ ಸಂಘಟನೆಗಳ ಕಾರ್ಯಕರ್ತರು ಕಳೆದ 16 ದಿನಗಳಿಂದ ಅಹೋರಾತ್ರಿ ಧರಣಿ ನಡೆಸುತ್ತಿದ್ದರೂ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ, ಸಂಸದ ಹೆಚ್.ಡಿ.ಕುಮಾರಸ್ವಾಮಿ, ಜಿಲ್ಲೆಯ 7 ಶಾಸಕರು, 3 ವಿಧಾನ ಪರಿಷತ್ ಸದಸ್ಯರು ಯಾರೂ ಸೌಜನ್ಯಕ್ಕಾದರೂ ಸ್ಥಳಕ್ಕೆ ಬಂದಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಪ್ರಕರಣದ ಬಗ್ಗೆ ಪೊಲೀಸ್ ಇಲಾಖೆಗೆ ದೂರು ನೀಡಲಾಗಿದೆ. 'ನಾವೇ ಬೇರೆಡೆ ಸಾಗಿಸಿದ್ದೇವೆ' ಎಂದು ಅಧಿಕಾರಿಯೊಬ್ಬರು ಹೇಳಿರುವ ವಿಡಿಯೋ ಹರಿದಾಡುತ್ತಿದೆ. ಮಾರ್ಚ್ 11 ರ ಮಧ್ಯಾಹ್ನ 1 ಗಂಟೆ ಸುಮಾರಿಗೆ ಸಾಗಾಟ ಮಾಡಲಾಗಿದೆ. ಅಲ್ಲಿನ ಸಿಸಿಟಿವಿ ಫೂಟೇಜ್ ಪರಿಶೀಲಿಸಬೇಕು. ಹಣ ಯಾವ ಅಕೌಂಟಿಗೆ ಹೋಗಿದೆ? ಇದನ್ನು ಮುಚ್ಚಿಡುವ ಪ್ರಯತ್ನ ನಡೆಯುತ್ತಿದೆ.ಸಿಇಒ ರವರಿಗೆ ಈ ಬಗ್ಗೆ ಬದ್ಧತೆ ಇರಬೇಕು.ಇದರ ಬಗ್ಗೆ ಸಮಗ್ರ ತನಿಖೆ ಆಗಬೇಕು ಎಂದು ಒತ್ತಾಯಿಸಿದರು.

ಸೆ.2 ರಂದು ಮಂಡ್ಯ ಜಿ.ಪಂ ಆವರಣದ ಪ್ರತಿಭಟನಾ ಸ್ಥಳದಲ್ಲೇ ಜಿಲ್ಲಾಡಳಿತ, ಜನಪ್ರತಿನಿಧಿಗಳು, ಅಧಿಕಾರಿಗಳನ್ನು ಬಹಿರಂಗ ಚರ್ಚೆಗೆ ಆಹ್ವಾನಿಸುತ್ತಿದ್ದೇವೆ. ಚರ್ಚೆಯಲ್ಲಿ ನಮ್ಮ ತಪ್ಪಿದ್ದರೆ ನಾವು ಸಾರ್ವಜನಿಕವಾಗಿ ಕ್ಷಮೆ ಕೇಳುತ್ತೇವೆ. ಅಧಿಕಾರಿಗಳ ತಪ್ಪಿದ್ದರೆ ಕಾನೂನು ರೀತಿಯಲ್ಲಿ ಶಿಕ್ಷೆಗೆ ಒಳಪಡಬೇಕು" ಎಂದು ಸವಾಲು ಹಾಕಿದರು.

ಪತ್ರಿಕಾಗೋಷ್ಠಿಯಲ್ಲಿ ಸಿಐಟಿಯು ಪ್ರಧಾನ ಕಾರ್ಯದರ್ಶಿ ಸಿ.ಕುಮಾರಿ, ದಸಂಸ ಸಂಚಾಲಕ ದೇವರಾಜ್, ಜನಶಕ್ತಿ ಮುಖಂಡ ಸಿದ್ದರಾಜು, ಸಾಮಾಜಿಕ ಕಾರ್ಯಕರ್ತ ಸಾಗರ್, ರೈತ ಸಂಘದ ತಾಲೂಕು ಕಾರ್ಯದರ್ಶಿ ಆನಂದ್ ಕುಮಾರ್, ಕೆಆರ್‌ಎಸ್ ಪಾರ್ಟಿಯ ಪ್ರಮೋದ್ ಉಪಸ್ಥಿತರಿದ್ದರು.

## ಸಂಭ್ರಮದ ಶ್ರೀ ಗುರುರಾಘವೇಂದ್ರ ಸ್ವಾಮೀಜಿಗಳ ಆರಾಧನೆ



**ಮೈಸೂರು:** ಸಾಂಸ್ಕೃತಿಕ ನಗರದಾದ್ಯಂದ ಶ್ರೀ ಗುರುರಾಘವೇಂದ್ರ ಸ್ವಾಮಿಗಳ 355ನೇ ಆರಾಧನಾ ಮಹೋತ್ಸವ ವಿಜೃಂಭಣೆಯಿಂದ ಜರುಗಿತು.

ನಾರಾಯಣ ಶಾಸ್ತ್ರೀಯ ರಸ್ತೆಯಲ್ಲಿರುವ ಸುಬ್ಬರಾಯನಕೆರೆಯ ಶ್ರೀ ರಾಘವೇಂದ್ರಸ್ವಾಮಿಮಠದಲ್ಲಿ ಭಕ್ತಾದಿಗಳಿಗೆ ಕೆಎಂಪಿಕೆ ಟ್ರಸ್ಟ್ ಹಾಗೂ ಶ್ರೀ ಗುರು ರಾಘವೇಂದ್ರ ಸ್ವಾಮಿ ಭಕ್ತ ವೃಂದದ ವತಿಯಿಂದ ಡ್ರೈ ಫ್ರೂಟ್ಸ್ ಲಾಡುವನ್ನು ಪ್ರಸಾದವಾಗಿ ಭಕ್ತಾದಿಗಳಿಗೆ ವಿತರಿಸಲಾಯಿತು. ಈ ಸಂದರ್ಭದಲ್ಲಿ ಕೆ ಎಮ್ ಪಿ ಕೆ ಟ್ರಸ್ಟ್ ಅಧ್ಯಕ್ಷರಾದ ವಿಕ್ರಂ ಅಯ್ಯಂಗಾರ್, ನಜರ್ಬಾದ್ ನಟರಾಜ್, ಕರ್ನಾಟಕ ಹಿತರಕ್ಷಣಾ ವೇದಿಕೆ ಅಧ್ಯಕ್ಷ ವಿನಯ್ ಕುಮಾರ್, ಎಸ್ ಎನ್ ರಾಜೇಶ್, ದೀಪಕ್ ಶೆಟ್ಟಿ, ಹರೀಶ್ ನಾಯ್ಡು, ಜೀವದಾರ ಗಿರೀಶ್, ವಿಜಯಲಕ್ಷ್ಮಿ ಅಯ್ಯಂಗಾರ್, ರೇಖಾ ಶ್ರೀನಿವಾಸ್, ವಿನಯ್, ರಾಕೇಶ್ ಇನ್ನಿತರರು ಹಾಜರಿದ್ದರು.

ವಿದ್ಯಾರಣ್ಯಪುರಂನಲ್ಲಿರುವ ರಾಜೇಶ್. ಎಸ್.ಕಶ್ಯಪ್ ಮತ್ತು ಅರ್ಚನ ಕುಟುಂಬದಿಂದ 25ನೇ ವರ್ಷದಲ್ಲಿ ಶ್ರೀ ಗುರುರಾಘವೇಂದ್ರ ಸ್ವಾಮೀಗಳ ಪೂಜೆ ನೇರವೇರಿಸಲಾಯಿತು. ಬಳಿಕ ಮಾತನಾಡಿದ ಅವರು, ಸತತ 25ವರ್ಷಗಳಿಂದ ರಾಘವೇಂದ್ರ ಸ್ವಾಮಿಯ ಪೂಜಾ ಕಾರ್ಯ ಮಾಡಿಕೊಂಡು ಬರುತ್ತಿದ್ದು, ರಾಘವೇಂದ್ರರ ಕೃಪೆ ಎಲ್ಲರ ಮೇಲಿರಲಿ ಎಂದರು ಹೇಳಿದರು. ಸೆ.2ರ ಬುಧವಾರ ಸಂಜೆ 5 ಗಂಟೆಗೆಗುರುರಾಘವೇಂದ್ರರ ಹಾಗೂ ಪ್ರಹ್ಲಾದ ರಾಜರ ಉತ್ಸವವನ್ನು ಪ್ರಮುಖ ಬೀದಿಗಳಲ್ಲಿ ಹಮ್ಮಿಕೊಂಡಿದ್ದು ಭಕ್ತಾದಿಗಳು ಅಧಿಕ ಸಂಖ್ಯೆಯಲ್ಲಿ ಭಾಗವಹಿಸಿ, ರಾಯರ ಕೃಪೆಗೆ ಪಾತ್ರರಾಗಲು ಕೋರಿದರು.

## ಬಸರಾಳು ಸರ್ಕಾರಿ ಪಪೂ ಕಾಲೇಜು ವಿದ್ಯಾರ್ಥಿಗಳಿಗೆ ಸ್ಮಾರ್ಟ್ ಕ್ಲಾಸ್ ಭಾಗ್ಯ

# ವಿದ್ಯಾರ್ಥಿಗಳ ಕಲಿಕೆಗೆ ಸ್ಮಾರ್ಟ್ ಬೋರ್ಡ್‌ನಿಂದ ಆಧುನಿಕ ಸ್ಪರ್ಶ

**ಯುವ ಬೆಂಗಳೂರು ಟ್ರಸ್ಟ್ ಕೊಡುಗೆ**

**ಬಸರಾಳು:** ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೂ ಆಧುನಿಕ ತಂತ್ರಜ್ಞಾನ ಆಧಾರಿತ ಗುಣಮಟ್ಟದ ಶಿಕ್ಷಣ ದೊರೆಯಬೇಕು ಎಂಬ ಉದ್ದೇಶದಿಂದ, ಇಲ್ಲಿನ ಸರ್ಕಾರಿ ಪದವಿ ಪೂರ್ವ ಕಾಲೇಜು ವಿಭಾಗಕ್ಕೆ 'ಯುವ ಬೆಂಗಳೂರು ಟ್ರಸ್ಟ್' ವತಿಯಿಂದ ನೂತನ ಸ್ಮಾರ್ಟ್ ಕ್ಲಾಸ್ ವ್ಯವಸ್ಥೆಯನ್ನು ಒ ೨ ೨ ೨ ಪಿ ಎ ಸ್ ಸೌಲಭ್ಯದೊಂದಿಗೆ ಕೊಡುಗೆಯಾಗಿ ನೀಡಲಾಗಿದೆ.




ನೂತನ ಸ್ಮಾರ್ಟ್ ಬೋರ್ಡ್ ಸೌಲಭ್ಯವನ್ನು ಉದ್ಘಾಟಿಸಿ ಮಾತನಾಡಿದ ಟ್ರಸ್ಟ್‌ನ ಶೈಕ್ಷಣಿಕ ನಿರ್ದೇಶಕರಾದ ರಾಹುಲ್ ಅವರು, ಗ್ರಾಮೀಣ ಭಾಗದ ವಿದ್ಯಾರ್ಥಿಗಳು ನಗರದ ವಿದ್ಯಾರ್ಥಿಗಳೊಂದಿಗೆ ಸ್ಪರ್ಧಿಸಲು ಡಿಜಿಟಲ್ ಶಿಕ್ಷಣ ಅತ್ಯಾವಶ್ಯಕ. ಈ ನಿಟ್ಟಿನಲ್ಲಿ ಟ್ರಸ್ಟ್ ಇಂತಹ ಸೌಲಭ್ಯವನ್ನು ಒದಗಿಸುತ್ತಿರುವುದು ಸಂತಸದ ವಿಷಯ ಎಂದರು.

**ಕಲಿಕಾ ಮಟ್ಟ ಸುಧಾರಣೆಗೆ ನೆರವು:** ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಲಿಂಗರಾಜು ಎನ್.ಎಸ್. ಮಾತನಾಡಿ, ಸ್ಮಾರ್ಟ್ ಕ್ಲಾಸ್ ವ್ಯವಸ್ಥೆಯು ವಿದ್ಯಾರ್ಥಿಗಳಲ್ಲಿ ಕಲಿಕಾಸಕ್ತಿಯನ್ನು ಹೆಚ್ಚಿಸುವುದಲ್ಲದೆ, ಸಂಕೀರ್ಣ ವಿಷಯಗಳನ್ನು ದೃಶ್ಯ-ಶ್ರವಣ ಮಾಧ್ಯಮದ ಮೂಲಕ ಸುಲಭವಾಗಿ ಅರ್ಥಮಾಡಿಕೊಳ್ಳಲು ನೆರವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಯೂಟ್ಯೂಬ್, ಇಂಟರ್ನೆಟ್‌ಗೆ ಸಂಪರ್ಕಿಸಬಹುದಾದ ಹಾಗೂ ಈಗಾಗಲೇ ತಯಾರಿಸಲಾದ ಹಲವು ಶೈಕ್ಷಣಿಕ ಪ್ರೋಗ್ರಾಮ್‌ಗಳು ಅಳವಡಿಕೆಯಾಗಿರುವ ಈ ಸ್ಮಾರ್ಟ್ ಬೋರ್ಡ್‌ನಿಂದ ವಿದ್ಯಾರ್ಥಿಗಳ ಕಲಿಕಾ ಮಟ್ಟ ಖಂಡಿತವಾಗಿಯೂ ಸುಧಾರಿಸಲಿದೆ ಎಂದರು.

**ಟ್ರಸ್ಟ್ ಸೇವೆ ಶ್ಲಾಘನೀಯ:** ಲೇಖಕ,ಉಪನ್ಯಾಸಕ ಲೋಕೇಶ ಬೆಕ್ಕಳಲೆ ಅವರು ಪ್ರಾಸ್ತಾವಿಕ ನುಡಿಗಳನ್ನಾಡಿ, ಡಿಜಿಟಲ್ ತರಗತಿಗಳ ಆರಂಭದಿಂದ ಬಸರಾಳು ಕಾಲೇಜಿನ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ದೊರೆಯುವಂತಾಗಿದ್ದು, ಇದು ಶೈಕ್ಷಣಿಕ ಪ್ರಗತಿಗೆ ಸಹಕಾರಿಯಾಗಲಿದೆ. ಟ್ರಸ್ಟ್‌ನ ಸಾಮಾಜಿಕ ಕಳಕಳಿ ಹಾಗೂ ಶೈಕ್ಷಣಿಕ ಸೇವೆ ಶ್ಲಾಘನೀಯ ಎಂದರು.

ಕಾರ್ಯಕ್ರಮದಲ್ಲಿ ಟ್ರಸ್ಟ್‌ನ ನಿರ್ದೇಶಕ ಶ್ರೀವಂಶಿ, ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರಾದ ಅನಿಲ್‌ಗೌಡ, ಉಪನ್ಯಾಸಕರಾದ ಚೇತನ, ವಿಶ್ವನಾಥ್, ಮಂಜುನಾಥ್, ಪ್ರಫುಲ್ಲ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಅನರ್ಹ ಫಲಾನುಭವಿಗಳಿಗೆ ಕಡಿವಾಣ: ಚಿಕ್ಕಲಿಂಗಯ್ಯ

**ಮಂಡ್ಯ:** ಗೃಹಲಕ್ಷ್ಮಿ ಯೋಜನೆಯಡಿ ಗ್ರಾಮವಾರು ಫಲಾನುಭವಿಗಳ ಮಾಹಿತಿಯ ಪಟ್ಟಿಯನ್ನು ಪಡೆದು ಪರಿಶೀಲನೆ ನಡೆಸಬೇಕು. ಮರಣ ಹೊಂದಿದ ಹಾಗೂ ಅನರ್ಹ ಫಲಾನುಭವಿಗಳನ್ನು ಗುರುತಿಸಿ ಪಟ್ಟಿಯಿಂದ ಕೈಬಿಡಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರ ಸಮಿತಿಯ ಅಧ್ಯಕ್ಷರಾದ ಚಿಕ್ಕಲಿಂಗಯ್ಯ ರವರು ತಿಳಿಸಿದರು.




ಅದೇ ರೀತಿ, ಇ-ಕೆವೈಸಿ ಪೂರ್ಣಗೊಳಿಸದ ಫಲಾನುಭವಿಗಳು ಹಾಗೂ ಪಾವತಿ ಬಾಕಿ (ಪೇಮೆಂಟ್ ಪೆಂಡಿಂಗ್) ಇರುವ ಫಲಾನುಭವಿಗಳ ಪ್ರತ್ಯೇಕ ಮಾಹಿತಿಯ ಪಟ್ಟಿಯನ್ನು ಸಿದ್ಧಪಡಿಸಿ, ಸಮಸ್ಯೆಗಳನ್ನು ಪರಿಹರಿಸಲು ಕ್ರಮ ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಗೃಹಲಕ್ಷ್ಮಿ ಯೋಜನೆಯಡಿ ಅರ್ಹ ... ಫೇಶಿಯಲ್ ದೃಢೀಕರಣದ ಮೂಲಕ ಪಾವತಿ ಮಾಡುವ ಕುರಿತು ಸರ್ಕಾರ ಮಹತ್ವದ ಸೂಚನೆಗಳನ್ನು ನೀಡಿದೆ.ಯೋಜನೆಯಡಿ ಪ್ರಸ್ತುತ ಅನರ್ಹ ಫಲಾನುಭವಿಗಳನ್ನು ತಡೆಗಟ್ಟಲು ಬಯೋಮೆಟ್ರಿಕ್/ಫೇಶಿಯಲ್ ದೃಢೀಕರಣದ ಮೂಲಕ ಫಲಾನುಭವಿಗಳ ಪರಿಶೀಲನೆ ನಡೆಸುವಂತೆ ಸೂಚಿಸಲಾಗಿದೆ.

ಮೇಲಿನ ಪ್ರಕ್ರಿಯೆಯನ್ನು ಎಲೆಕ್ಟ್ರಾನಿಕ್ ಡೆಲಿವರಿ ಆಫ್ ಸರ್ವಿಸಸ್ (ಇಡಿಎಸ್) ಅಭಿಯಾನದಡಿ ... ಮೊಬೈಲ್ ಅಪ್ಲಿಕೇಶನ್ ಮೂಲಕ ಅರ್ಜಿ ಮತ್ತು ಪರಿಶೀಲನೆ ನಡೆಸಬೇಕು. ಇದಕ್ಕಾಗಿ ಮನ ಮನೇ ಸಮೀಕ್ಷೆ ಹಾಗೂ ಗ್ರಾಮ ಒನ್, ಕರ್ನಾಟಕ ಒನ್, ಬೆಂಗಳೂರು ಒನ್ ಮತ್ತು ಸಿಎಸ್‌ಸಿ (ಕಾಮನ್ ಸರ್ವಿಸ್ ಸೆಂಟರ್) ಕೇಂದ್ರಗಳ ಮೂಲಕವೂ ಕಾರ್ಯನಿರ್ವಹಿಸಲು ಸೂಚಿಸಲಾಗಿದೆ ಎಂಬ ಮಾಹಿತಿಯನ್ನು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು.

ಕರ್ನಾಟಕ ಸರ್ಕಾರದ ಮಹತ್ವಾಕಾಂಕ್ಷೆಯ ಐದು ... ಯೋಜನೆಯು ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳುತ್ತಿದ್ದು, ಜೂನ್ 2026ರ ಅಂತ್ಯದ ವೇಳೆಗೆ ಜಿಲ್ಲೆಯಲ್ಲಿ ಒಟ್ಟು 4,66,540 ಫಲಾನುಭವಿಗಳು ನೋಂದಣಿಯಾಗಿದ್ದು, ಈ ಪೈಕಿ 4,36,296 ಅರ್ಹ ಮಹಿಳೆಯರ ಬ್ಯಾಂಕ್ ಖಾತೆಗಳಿಗೆ 32 ಕಂತುಗಳ ಮೂಲಕ ಒಟ್ಟು ?87,25,92,000 ಅನುದಾನವನ್ನು ನೇರವಾಗಿ ಜಮೆ ಮಾಡಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು. ಅರ್ಹ ಫಲಾನುಭವಿಗಳಿಗೆ ಯೋಜನೆಯ ಸೌಲಭ್ಯ ಸಮರ್ಪಕವಾಗಿ ತಲುಪುವಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರುಗಳಾದ ಕೆ. ಹನುಮಂತಯ್ಯ, ರಾಜೇಂದ್ರ ಪ್ರಸಾದ್, ಶಿವಣ್ಣ, ಪ್ರಶಾಂತ್ ಬಾಬು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು

# ಸ್ವೇದಬಿಂದು : ಚಿರಾಯುಷ್ಯದ ಸವಿಮಾತು



ಬೆವರು ಎಂದರೆ ಚರ್ಮದ ಕಣ್ಣುಗಳಿಂದ ಜಿನುಗುವ ಲವಣಸುಧೆ. ಕಾಯವೆಂಬ ಹೊಲವನ್ನು ದುಡಿಮೆಯ ನೇಗಿಲಿನಿಂದ ಉಳುಮೆ ಮಾಡಿದಾಗ, ಉಸಿರು, ಜಲ, ಆಹಾರದೊಂದಿಗೆ ಒಳಹೊಕ್ಕ ಕಲ್ಮಷವು ಹನಿಹನಿಯಾಗಿ ಹೊರಸೂಸುತ್ತದೆ. ಆಗ ಅವಿರತ ದುಡಿಯುವ ಯಕೃತ್ತು ಮತ್ತು ಮೂತ್ರಪಿಂಡಗಳಿಗೆ ಹಿತವಾದ ವಿರಾಮ ದೊರೆಯುತ್ತದೆ.

ದೇಹದ ಕುಲುಮೆ ಕಾದಾಗ 'ಐರಿಸಿನ್' ಎಂಬ ಚಿನ್ನದಂತಹ ಸತ್ವ ಉದಯಿಸುತ್ತದೆ. ಅದು ಜಡವಾಗಿರುವ ಬಿಳಿ ಕೊಬ್ಬನ್ನು ಉರಿಸುವ ಕಂದು ಕೊಬ್ಬಾಗಿ ಪರಿವರ್ತಿಸುತ್ತದೆ. ಇದರಿಂದ ಮಧುಮೇಹದ ಬಂಧನ, ಬೊಜ್ಜಿನ ಭಾರ ಕರ್ಪೂರದಂತೆ ಕರಗುತ್ತದೆ. ಬೆವರಿನ ಪ್ರತಿ ಮಣಿಯೊಂದಿಗೆ ಮೆದುಳಿನಲ್ಲಿ ಹೊಸ ನರಕೋಶಗಳು ಚಿಗುರಿ, ಮನಸ್ಸು ಅರಳುತ್ತದೆ.

ಮಳೆಗಾಲಕ್ಕೂ ಮುನ್ನ ಕೆರೆ ಹೂಳೆತ್ತುವ ಹಬ್ಬ, ಶಾಲೆಯ ಸುತ್ತ ಬೇಲಿ ಕಟ್ಟುವ ಕಾಯಕ, ಓಣಿಯ ಚರಂಡಿ ಶುಚಿಗೊಳಿಸುವ ಶ್ರಮದಾನ ಇಂತಹ ಸಮೂಹದ ಬೆವರಿನಲ್ಲಿ ಜಾತಿ, ವರ್ಗ, ಶ್ರೀಮಂತ-ಬಡವ ಎಂಬ ಗೆರೆಗಳು ಮಾಯವಾಗುತ್ತವೆ. ಮುಂಜಾನೆಯ ನಡಿಗೆ ಬಳಗದ ಆತ್ಮೀಯ ಕರೆ, ಸೈಕಲ್ ಸವಾರಿಯಲ್ಲಿ ಬಿದ್ದವನನ್ನು ಎತ್ತುವ ಸ್ನೇಹದ ಕೈ ಇದು ಆರೋಗ್ಯದ ಸೂತ್ರವಲ್ಲ, ಮಾನವತೆಯ ಮಹಾಕಾವ್ಯ.

ಬಸ್ಸಿನಿಂದ ಒಂದು ನಿಲ್ದಾಣ ಮೊದಲೇ ಇಳಿದು ನಡೆಯಿರಿ, ಮೆಟ್ಟಿಲುಗಳನ್ನು ಏರಿರಿ. ವಾರದಲ್ಲಿ ಮೂರು ಬಾರಿ ಇಪ್ಪತ್ತು ನಿಮಿಷ ಕುಣಿದು, ಹಗ್ಗದಾಟವಾಡಿ ಬೆವರಿಳಿಸಿ, ಬಳಿಕ ಎಳನೀರು, ಮಜ್ಜಿಗೆ ಸೇವಿಸಿ. ಬೆವರೇ ಬದುಕಿನ ಸಂಜೀವಿನಿ.

ಅಂಕಣ-09

ಸಾವು ಸಂಕಟಪಡುವ ಸಂಗತಿಗಳು..!



|ಡಾ.ಸುಧಾಕರ.ಜಿ.ಲಕ್ಕವಳ್ಳಿ

# ಸತಿಪತಿಗಳೊಂದಾದ ಭಕ್ತಿಯು ಹಿತವಪ್ಪುದು ಶಿವಂಗೆ



| ವೀಣಾ ಹೇಮಂತ್‌ಗೌಡ ಪಾಟೀಲ್

ಉತ್ತರ ಭಾರತದ ಸಮುದ್ರ ತಟದಲ್ಲಿರುವ ಸೌರಾಷ್ಟ್ರದಲ್ಲಿ ನೆಲೆಸಿರುವ ರತ್ನಪಡಿ ವ್ಯಾಪಾರಿ ಆದಯ್ಯ . ದ್ವಾದಶ ಜ್ಯೋತಿರ್ಲಿಂಗಗಳಲ್ಲಿ ಒಂದಾದ ಸೌರಾಷ್ಟ್ರದ ಸೋಮನಾಥನ ಅನನ್ಯ ಭಕ್ತ. ತಂದೆ ದೋರದತ್ತ ತಾಯಿ ಪುಣ್ಯವತಿ ಮತ್ತು ಪತ್ನಿ ಯೊಂದಿಗೆ ಸೋಮನಾಥನ ದೇವಸ್ಥಾನಕ್ಕೆ ಅನತಿ ದೂರದಲ್ಲಿ ವಾಸವಾಗಿದ್ದ ಆತ ದಿನವೂ ಸೋಮನಾಥನ ದರ್ಶನ ಮಾಡದೆ ಹನಿ ನೀರನ್ನೂ ಸೇವಿಸುತ್ತಿರಲಿಲ್ಲ.

ಒಂದು ದಿನ ಆತನ ಇನ್ನಿತರ ಸ್ನೇಹಿತರೊಂದಿಗೆ ದಕ್ಷಿಣ ಭಾರತದ ಶ್ರೀಮಂತ ರಾಜ್ಯಗಳಿಗೆ ಮುತ್ತು,ರತ್ನ ಮತ್ತು ಹವಳಗಳನ್ನು ಮಾರಲು ಹೊರಡಲು ನಿಶ್ಚಯಿಸಿದ ಆತ ತನ್ನ ತಂದೆ ತಾಯಿಯ ಆಶೀರ್ವಾದ ಮತ್ತು ಪತ್ನಿಯ ಒಪ್ಪಿಗೆ ಪಡೆದು ಹೊರಟನು.

ದಕ್ಷಿಣ ಭಾರತದ ಕನ್ನಡ ನಾಡಿನ ಜೈನರ ಬೀಡಾದ ಕವಿರಾಜಮಾರ್ಗದಲ್ಲಿ ತಿರುಳ್ಗನ್ನಡ ನಾಡು ಎಂದು ವರ್ಣಿತವಾದ ಕನ್ನಡ ನಾಡಿನ ಕೊಪ್ಪಳ ಲಕ್ಕುಂಡಿ ಭಾಗಗಳಲ್ಲಿ ತನ್ನ ವ್ಯಾಪಾರವನ್ನು ಪೂರೈಸಿ ಇಂದಿನ ಲಕ್ಷ್ಮೇಶ್ವರ ಎಂಬ ಹೆಸರಿನಿಂದ ಕರೆಯಲ್ಪಡುವ ಅಂದಿನ ಪುಲಿಗೆರೆಗೆ ಹೊರಟನು.

ಮುಂಜಾನೆ ಪ್ರಾತಃವಿಧಿಗಳನ್ನು ತೀರಿಸಿ ರಾಜ ಸಭೆ ನಡೆಯುವಲ್ಲಿ ಬಂದು ತನ್ನ ಪರಿಚಯ ಪತ್ರವನ್ನು ಕಳುಹಿಸಿದ ಆತನಿಗೆ ಮಹಾರಾಜ ಚಂದ್ರಾದಿತ್ಯರಿಂದ ಕರೆ ಬಂದಿತು. ಆದಯ್ಯ ತಾನು ಮುತ್ತು,ರತ್ನ, ಹವಳ ,ವಜ್ರ ವೈಢೂರ್ಯ ಗಳನ್ನು ಮಾರುವ ವ್ಯಾಪಾರಿ ಎಂದು ತಾವು ಖರೀದಿಸುವರೆಂಬ ವಿಶ್ವಾಸದಿಂದ ಇಲ್ಲಿಗೆ ಬಂದಿರುವುದಾಗಿ ಹೇಳಿದನು. ರಾಜ ಮನೆತನದ ಎಲ್ಲರೂ ತಮಗಿಷ್ಟವಾದ ಮುತ್ತು ರತ್ನಗಳ ಒಡವೆಗಳನ್ನು ಖರೀದಿಸಲು ಮುಗಿಬಿದ್ದರು.

ಮುಂದಿನ ಕೆಲವೇ ದಿನಗಳಲ್ಲಿ ರಾಜನ ಆಸ್ಥಾನದ ಜೈನ ಕುಲಕ್ಕೆ ಸೇರಿದ ಮಂತ್ರಿ ಪಾರಿಸ ಶೆಟ್ಟಿಯ ಪುತ್ರಿ ಪದ್ಮಾವತಿಯೊಂದಿಗೆ ಆದಯ್ಯನಿಗೆ ಪ್ರೇಮಾಂಕುರವಾಗಿ, ಆಕೆಯ ತಂದೆ ತಾಯಿಗಳ ವಿರೋಧದ ನಡುವೆಯೂ ಮಹಾರಾಜರ ಮತ್ತು ಮಂತ್ರಿ ಪುತ್ರಿ ಪದ್ಮಾವತಿಯು ಆದಯ್ಯನ ಮೇಲೆ ಇಟ್ಟಿರುವ ಅಚಲ ವಿಶ್ವಾಸದ ಬಲದಿಂದ ವಿವಾಹದಲ್ಲಿ ಪರ್ಯವಸಾನವಾಯಿತು. ಮಾವನ ಮನೆಯ ಹಿಂಭಾಗದಲ್ಲಿ ವಸತಿ ಹೂಡಿದ ಅಪ್ಪಟ ಶೈವ ಭಕ್ತನಾಗಿದ್ದ ಆದಯ್ಯನಿಗೆ ಸುಮಾರು 700ಕ್ಕೂ ಹೆಚ್ಚು ಬಸದಿಗಳು ಇರುವ ಲಕ್ಷ್ಮೇಶ್ವರದಲ್ಲಿ ಒಂದೇ ಒಂದು ಶಿವನ ದೇವಸ್ಥಾನವಿಲ್ಲದೆ ಇದ್ದುದು ಬಹಳ ಬೇಸರವನ್ನುಂಟು ಮಾಡಿತು. ಈ ಕುರಿತು ಅನೇಕ ಬಾರಿ ಮಹಾರಾಜರಲ್ಲಿ ಮನವಿ ಮಾಡಿಕೊಂಡಿದ್ದನಾತ.

ಉಪೇಕ್ಷಿತ ವಚನಕಾರರು

ಒಂದು ಬಾರಿ ಶಿವ ಗಣಂಗಳಿಗೆ ಊಟದ ವ್ಯವಸ್ಥೆ ಮಾಡಿದ್ದ ಆದಯ್ಯ ಮತ್ತು ಆತನ ಪತ್ನಿ ಅವರಿಗಾಗಿ ಕಾಯುತ್ತಿದ್ದಾಗ ತಮ್ಮ ಮನೆಗೆ ಆಗಮಿಸಿದ ಜೈನ(ಸ್ವಾಮಿ) ಕುಲಬಾಂಧವರಿಗೆ ಇವರ ಮನೆಯ ಸಂಪೂರ್ಣ ಊಟವನ್ನು ಹೇಳದೆ ಕೇಳದೆ ದೌರ್ಜನ್ಯದಿಂದ ಒಯ್ದು ಉಣಬಡಿಸಿದರು ಆದಯ್ಯನ ಅತ್ತೆ ಮಾವ.

ಊಟದ ಸಮಯಕ್ಕೆ ಬಂದು ನೋಡಿದ ಶಿವಗಣಗಳಿಗೆ ಅಲ್ಲಿ ಕಂಡದ್ದು ಚೆಲ್ಲಾಪಿಲ್ಲಿಯಾಗಿ ಬಿದ್ದ ಆಹಾರ ವಸ್ತುಗಳು ಮತ್ತು ಎಚ್ಚರ ತಪ್ಪಿ ಬಿದ್ದ ಆದಯ್ಯನ ಪತ್ನಿ. ಕುಪಿತರಾದ ಶಿವಗಣಗಳು ಅಲ್ಲಿಂದ ಹೊರಟು ಹೋದರು.

ಇದರಿಂದ ನೊಂದ ಆದಯ್ಯ ಮತ್ತು ಅವನ ಪತ್ನಿ ಮಹಾರಾಜರಲ್ಲಿ ದೂರನ್ನು ಒಯ್ದರು. ಅಲ್ಲಿ ಜೈನರು ಮತ್ತು ಶೈವರ ನಡುವೆ ಮಾತಿನ ಚಕಮಕಿ ನಡೆದು ಸ್ವತಃ ಜೈನನೇ ಆದ ಮಹಾರಾಜ ಚಂದ್ರಾದಿತ್ಯನು ಆದಯ್ಯನಿಗೆ ನಿನ್ನೂರು ಸೌರಾಷ್ಟ್ರಕ್ಕೆ ಕೇವಲ ಒಂದೂವರೆ ತಿಂಗಳಲ್ಲಿ(ಒಂದು ಮಂಡಲದಲ್ಲಿ) ಕಾಲ್ನಡಿಗೆಯಲ್ಲಿ ಹೋಗಿ ಸೋಮನಾಥನ ಶಿವಲಿಂಗವನ್ನು ತಂದಲ್ಲಿ ಶಾಂತಿನಾಥ ಬಸದಿಯನ್ನು ಶಿವನ ದೇವಾಲಯವಾಗಿ ಪರಿವರ್ತಿಸಿ ನಿನ್ನ ಸುಪರ್ದಿಗೆ ಕೊಡುವೆನು ಎಂದು ಆದಯ್ಯನಿಗೆ ಶರತ್ತು ಹಾಕಿದನು. ಇದಕ್ಕೆ ಬದ್ಧನಾಗಿ ಆದಯ್ಯ ಪುಲಿಗೆರೆಯಿಂದ ಉತ್ತರದ ಸೌರಾಷ್ಟ್ರದ ಕಡೆ ಕಾಲ್ನಡಿಗೆಯಲ್ಲಿ ಪಯಣ ಬೆಳೆಸಿದನು. ಕಾಡು ಮೇಡು ಗುಡ್ಡಗಳಲ್ಲಿ ಸುತ್ತುತ್ತಾ, ನಿರ್ಜನ ಪ್ರದೇಶಗಳಲ್ಲಿ ಒಂದೇ ಸಮನೆ ನಡೆಯುತ್ತಾ ಹೊರಟ ಆದಯ್ಯನ ಕಾಲುಗಳಲ್ಲಿ ಸುಡುವ ಬಿಸಿಲಿನಿಂದಾಗಿ ಬೊಬ್ಬೆಗಳು ಉಂಟಾಗಿ ಒಡೆದು ಕೀವು ರಕ್ತ ಸೋರಲಾರಂಭಿಸಿತು. ಬಿಟ್ಟುಬಿಡದೆ ಜ್ವರ ಕಾಡಲಾರಂಭಿಸಿತು. ಆದರೂ ಛಲ ಬಿಡದೆ ತೂರಾಡುತ್ತಾ ಸೌರಾಷ್ಟ್ರದೆಡೆ ನಡೆದನು ಆದಯ್ಯ. ಇನ್ನೇನು ಕಣ್ಣು ಕತ್ತಲಿಟ್ಟಂತಾಗಿ ತೂರಾಡುತ್ತಾ ಬೀಳುವ ಸ್ಥಿತಿಯಲ್ಲಿ ಆದಯ್ಯ ಇದ್ದಾಗ ಎದುರಿಗೆ ರಥದಲ್ಲಿ ಸೌರಾಷ್ಟ್ರದಲ್ಲಿದ್ದ ಆದಯ್ಯನ ಮೊದಲ ಪತ್ನಿ ಸೋಮನಾಥನ ಮೂರ್ತಿಯನ್ನು ತೆಗೆದುಕೊಂಡು ಬರುತ್ತಿದ್ದಳು. ಎತ್ತಣ ಮಾಮರ ಎತ್ತಣ ಕೋಗಿಲೆ ಎತ್ತಣಿಂದೆತ್ತಣ ಸಂಬಂಧವಯ್ಯ ಎಂಬಂತೆ ಆದಯ್ಯನ ಮನದಾಸೆಯನ್ನು ದೂರದ ಸೌರಾಷ್ಟ್ರದಲ್ಲಿ ಕುಳಿತೆ ಅರಿತ ಪತ್ನಿ... ಇದನ್ನೇ ವಿಧಿವಿಲಾಸ ಎಂದು ಕರೆಯುವುದಲ್ಲವೇ. ಅದಕ್ಕೆ ಇರಬೇಕು ನಮ್ಮ ಪೂರ್ವಜರು ಋಣಾನುಬಂಧ ರೂಪೇಣ ಪಶು ಪತ್ನಿ ಸುತಾಲಯ ಎಂದು ಹೇಳಿದ್ದು. ತಂದೆ ತಾಯಿ ಸೋದರ ಸಂಬಂಧಿಗಳು ರಕ್ತ ಹಂಚಿಕೊಂಡು ಹುಟ್ಟಿದರೆ ಕೇವಲ ಋಣದಿಂದ ಜೊತೆಯಾಗುವ ಪತ್ನಿ ವಿಶೇಷವಲ್ಲವೇ!!

ಮುಂದೆ ನಡೆದದ್ದು ಇತಿಹಾಸ... ಕೇವಲ ಒಂದೆರಡು ದಿನಗಳಲ್ಲಿ ತನಗೆ ನೀಡಿದ ಗಡುವಿನ ಮಿತಿಯಲ್ಲಿಯೇ ಆದಯ್ಯ ಸೌರಾಷ್ಟ್ರ ಸೋಮನಾಥನ ಮೂರ್ತಿಯೊಂದಿಗೆ ಶೈವ ಸಂಪ್ರದಾಯದ ಸಾವಿರಾರು ಜನರೊಂದಿಗೆ ಪುರ ಪ್ರವೇಶ ಮಾಡಿದನು. ಮಹಾರಾಜನು ತಾನು ಕೊಟ್ಟ ಮಾತನ್ನು ಉಳಿಸಿಕೊಳ್ಳಲು ಪುಲಿಗೆರೆಯ ಸುರಹೊನ್ನೆ

ಬಸದಿಯನ್ನು ಸಂಪೂರ್ಣವಾಗಿ ಶೈವರ ಸುಪರ್ದಿಗೆ ಬಿಟ್ಟು ಕೊಟ್ಟನು. ವಿದ್ಯುಕ್ತವಾಗಿ ದೇವರ ಪ್ರತಿಷ್ಠಾಪನೆ ಆಗುವವರೆಗೂ ಕಾರ್ಯಕ್ರಮಗಳನ್ನು ಸಾಂಗವಾಗಿ ನೆರವೇರಿಸಿದರು ಆದಯ್ಯ ಮತ್ತು ಅವನ ಇಬ್ಬರು ಪತ್ನಿಯರು. ದೇಗುಲವೆಲ್ಲ ಮಾವಿನ ಮತ್ತು ತೆಂಗಿನ ತಳಿರು ತೋರಣ ಮತ್ತು ಹೂಗಳಿಂದ ಅಲಂಕರಿಸಲ್ಪಟ್ಟಿತ್ತು. ಪತ್ನಿ ಸಮೇತ ವೃಷಭಾರೂಢ ಸೋಮನಾಥನ ಮೂರ್ತಿಯು ಹೂಗಳಿಂದ ಅಲಂಕೃತವಾಗಿ ಕಂಗೊಳಿಸುತ್ತಿತ್ತು. ದೀಪಗಳು ಜ್ವಾಜ್ವಲ್ಯಮಾನವಾಗಿ ಬೆಳಕನ್ನು ಹರಡಿದ್ದವು. ಅಗರ ಬತ್ತಿಗಳ ಸುವಾಸನೆ ಎಲ್ಲೆಡೆ ಹರಡಿತ್ತು. ಒಟ್ಟಿನಲ್ಲಿ ಮಧುರ ಸಂಭ್ರಮದ ವಾತಾವರಣ ಅಲ್ಲಿ ಮನೆ ಮಾಡಿತ್ತು ಸೌರಾಷ್ಟ್ರಸೋಮನಾಥನಿಗೆ ಮಹಾ ಮಂಗಳಾರತಿಯಾದ ನಂತರ ದೇವರ ಮೂರ್ತಿಗೆ ನೆಲಕ್ಕೆ ಕುಳಿತು ತಲೆಬಾಗಿ ನಮಸ್ಕರಿಸಿದ ಆದಯ್ಯನ ಮೊದಲ ಪತ್ನಿ ಅಲ್ಲಿಯೇ ಕೊನೆಯುಸಿರೆಳೆದಳು. ಪತಿಯ ಆಸೆ ಆಶಯಗಳನ್ನು ಪೂರೈಸಲು ಸಾವಿರಾರು ಮೈಲುಗಳ ದೂರವನ್ನು ಕ್ರಮಿಸಿ ಬಂದ ಆ ಮಹಾಸಾಧ್ವಿ ಸೋಮನಾಥನಲ್ಲಿ ಲೀನವಾದಳು.

ಅದಕ್ಕೆ ಇರಬೇಕು ನಮ್ಮ ಭಾರತೀಯ ಸಂಪ್ರದಾಯದಲ್ಲಿ ಪತ್ನಿಗೆ ಅರ್ಧನಾರೀಶ್ವರ ಸ್ಥಾನವನ್ನು ನೀಡಿರುವುದು..... ಎಷ್ಟು ಸತ್ಯವಲ್ಲವೇ ನಮ್ಮ ಶಿವಶರಣರು ಬರೆದದ್ದು ಸತಿಪತಿಗಳೊಂದಾದ ಭಕ್ತಿಯು ಹಿತವಪ್ಪುದು ಶಿವಂಗೆ ಎಂದು ಹೇಳಿರುವುದು.





ಮುಂದೆ ಆದಯ್ಯನು ಸೋಮನಾಥನನ್ನು ಪೂಜಿಸುತ್ತಾ ಪುಲಿಗೆರೆಯಲ್ಲಿಯೇ ಪದ್ಮಾವತಿಯೊಂದಿಗೆ ವಾಸವಾಗಿದ್ದನು. ಆದಯ್ಯನ ಸಮಾಧಿಯು ಸೋಮನಾಥ ದೇವಾಲಯದಲ್ಲಿಯೇ ಇರುವುದರಿಂದ ಅವನು ಅಲ್ಲಿಯೇ ಐಕ್ಯವಾಗಿರಬೇಕು.

ಗುಜರಾತದಲ್ಲಿರುವ ಸೋಮನಾಥ ದೇವಸ್ಥಾನ ಪವಿತ್ರ ದ್ವಾದಶ ಜ್ಯೋತಿರ್ಲಿಂಗಗಳಲ್ಲಿ ಒಂದು. ಚಂದ್ರ ಇಲ್ಲಿ ಶಿವನನ್ನು ಪೂಜಿಸಿ ದಕ್ಷ ಪ್ರಜಾಪತಿ ನೀಡಿದ್ದ ಶಾಪದಿಂದ ವಿಮೋಚನೆ ಪಡೆದಿದ್ದರಿಂದ ಸೋಮನಾಥ ಎನ್ನುವ ಹೆಸರು ಬಂದಿದೆ. ಇದು ಹಲವು ಬಾರಿ ವಿದೇಶಿಯರಿಂದ ದಾಳಿಗೆ ಒಳಗಾಗಿದ್ದರೂ ಇಂದು ಭವ್ಯವಾಗಿ ತಲೆಯೆತ್ತಿ ನಿಂತಿದೆ. ಹೀಗಾಗಿ ಸ್ವಾಭಿಮಾನದ ಸಂಕೇತ ಎನಿಸಿಕೊಂಡಿದೆ. ಸ್ವಾತಂತ್ರ್ಯ ಬಂದಾಗ ಸೋಮನಾಥದ ಉಳಿದ ಅವಶೇಷಗಳನ್ನು ಅಂದಿನ ಗೃಹ ಸಚಿವ ಸರ್ದಾರ್ ವಲ್ಲಭಭಾಯಿ ಪಟೇಲ್ ಹಾಗೂ ರಾಷ್ಟ್ರಪತಿ ಡಾಕ್ಟರ್ ರಾಜೇಂದ್ರ ಪ್ರಸಾದ್ ಆಸಕ್ತಿ ವಹಿಸಿದ ಕಾರಣ ದೇಗುಲ ಪುನರ್ ನಿರ್ಮಾಣವಾಯಿತು.

ಇದೀಗ ದೇಗುಲ ನಿರ್ಮಾಣವಾಗಿ ಸರಿ ಸುಮಾರು 75 ವರ್ಷ ಆಗಿದ್ದು ದೇಶದಲ್ಲಿ ಇತ್ತೀಚೆಗೆ ಈ ಕುರಿತು ಸಂಭ್ರಮಾಚರಣೆ ಕೂಡ ನಡೆಯಿತು.

# ಕೆಲಸ ಕಡಿಮೆಯಾಗುತ್ತಿಲ್ಲ

## ಕೆಲಸ ಮಾಡುವ ವಿಧಾನ ಮಾತ್ರ ಬದಲಾಗುತ್ತಿದೆ!



| ಶಿವಬಸಪ್ಪ ಗು ಜಂಗಾಲಿ



ಒಂದು ಕಾಲದಲ್ಲಿ ಕೆಲಸ ಎಂದರೆ ಕಚೇರಿಗೆ ಹೋಗುವುದು, ಮೇಜಿನ ಮುಂದೆ ಕುಳಿತು ಕಡತಗಳನ್ನು ಪರಿಶೀಲಿಸುವುದು, ಸಹೋದ್ಯೋಗಿಗ ಳೊಂದಿಗೆ ಚರ್ಚಿಸುವುದು, ಮೇಲಧಿಕಾರಿಗಳ ಸೂಚನೆಯಂತೆ ಕಾರ್ಯನಿರ್ವಹಿಸುವುದು ಮತ್ತು ಸಂಜೆ ಮನೆಗೆ ಮರಳುವುದು ಎಂಬ ಸರಳ ಚಿತ್ರಣವಿತ್ತು. ಆದರೆ ತಂತ್ರಜ್ಞಾನದ ವೇಗದ ಬೆಳವಣಿಗೆ ಈ ಚಿತ್ರಣವನ್ನೇ ಬದಲಿಸಿದೆ. ಇಂದು ಲ್ಯಾಪ್‌ಟಾಪ್ ಇರುವ ಜಾಗವೇ ಕಚೇರಿಯಾಗಬಹುದು; ಮೊಬೈಲ್‌ನಲ್ಲಿರುವ ಅಪ್ಲಿಕೇಶನ್‌ಗಳೇ ಕೆಲಸದ ಸಾಧನಗಳಾಗಬಹುದು. ಹೀಗಾಗಿ ಕೆಲಸದ ಸ್ವರೂಪ ಬದಲಾಗುತ್ತಿದೆ, ಆದರೆ ಕೆಲಸದ ಅಗತ್ಯ ಕಡಿಮೆಯಾಗುತ್ತಿಲ್ಲ.

ಕೃತಕ ಬುದ್ಧಿಮತ್ತೆ, ಆಟೋಮೇಷನ್, ರೋಬೋಟಿಕ್ಸ್ ಮತ್ತು ಕ್ಲೌಡ್ ತಂತ್ರಜ್ಞಾನಗಳು ಉದ್ಯೋಗ ಕ್ಷೇತ್ರದಲ್ಲಿ ಹೊಸ ಪರಿವರ್ತನೆಗೆ ಕಾರಣವಾಗಿವೆ. ಕೆಲವು ಪುನರಾವರ್ತಿತ ಕೆಲಸಗಳನ್ನು ಯಂತ್ರಗಳು ನಿರ್ವಹಿಸುತ್ತಿವೆ. ಇದರಿಂದ ?ನಾಳೆ ನನ್ನ ಉದ್ಯೋಗಕ್ಕೆ ಏನಾಗಬಹುದು?? ಎಂಬ ಆತಂಕ ಸಹಜ. ಆದರೆ ಇತಿಹಾಸವನ್ನು ನೋಡಿದರೆ ಪ್ರತಿಯೊಂದು ತಾಂತ್ರಿಕ ಕ್ರಾಂತಿಯೂ ಕೆಲವು ಹಳೆಯ ಕೆಲಸಗಳನ್ನು ಬದಲಾಯಿಸಿದರೂ, ಅದೇ ಸಮಯದಲ್ಲಿ ಹೊಸ ಉದ್ಯೋಗಗಳಿಗೆ ದಾರಿ ತೆರೆದಿದೆ.

ಕಂಪ್ಯೂಟರ್‌ಗಳು ಬಂದಾಗಲೂ ಉದ್ಯೋಗ ನಾಶವಾಗುತ್ತದೆ ಎಂಬ ಭಯವಿತ್ತು. ಇಂಟರ್ನೆಟ್ ಬಂದಾಗಲೂ ಇದೇ ಆತಂಕ ಎದುರಾಗಿತ್ತು. ಆದರೆ ಸಾಫ್ಟ್‌ವೇರ್, ಡಿಜಿಟಲ್ ಮಾರ್ಕೆಟಿಂಗ್, ಇ-ಕಾಮರ್ಸ್, ಆನ್‌ಲೈನ್ ಶಿಕ್ಷಣ ಸೇರಿದಂತೆ ಅನೇಕ ಹೊಸ ಕ್ಷೇತ್ರಗಳು ಹುಟ್ಟಿಕೊಂಡವು. ಇಂದು ಕೃತಕ ಬುದ್ಧಿಮತ್ತೆಯೂ ಇದೇ ರೀತಿಯ ಬದಲಾವಣೆಯನ್ನು ತರುತ್ತಿದೆ. ಯಂತ್ರಗಳು ಮನುಷ್ಯನ ಸ್ಥಾನವನ್ನು ಸಂಪೂರ್ಣವಾಗಿ ಕಸಿದುಕೊಳ್ಳುವುದಕ್ಕಿಂತ, ಮನುಷ್ಯ ಮಾಡುವ ಕೆಲಸದ ವಿಧಾನವನ್ನು ಬದಲಿಸುತ್ತಿವೆ.

ಇಂದಿನ ಉದ್ಯೋಗ ಜಗತ್ತಿನಲ್ಲಿ ಪದವಿಗಿಂತ ಕೌಶಲ್ಯಕ್ಕೆ ಹೆಚ್ಚಿನ ಮಹತ್ವ ಸಿಗುತ್ತಿದೆ. ?ನನಗೆ ಏನು ಗೊತ್ತು?? ಎನ್ನುವುದಕ್ಕಿಂತ ?ನಾನು ಇನ್ನೇನು ಕಲಿಯಬಲ್ಲೆ?? ಎಂಬ ಪ್ರಶ್ನೆ ಹೆಚ್ಚು ಮುಖ್ಯವಾಗಿದೆ. ಸಮಸ್ಯೆ ಪರಿಹರಿಸುವ ಸಾಮರ್ಥ್ಯ, ಸೃಜನಶೀಲ ಚಿಂತನೆ, ಸಂವಹನ ಕೌಶಲ್ಯ, ತಂಡದೊಂದಿಗೆ ಕೆಲಸ ಮಾಡುವ ಗುಣ ಮತ್ತು ಹೊಸ ತಂತ್ರಜ್ಞಾನವನ್ನು ಕಲಿಯುವ ಮನೋಭಾವ ಭವಿಷ್ಯದ ಉದ್ಯೋಗಿಗಳ ಪ್ರಮುಖ ಶಕ್ತಿಯಾಗಲಿವೆ.

ಕೆಲಸದ ಸ್ಥಳವೂ ಬದಲಾಗಿದೆ. ಮನೆಯಿಂದ ಕೆಲಸ, ಹೈಬ್ರಿಡ್ ವ್ಯವಸ್ಥೆ ಮತ್ತು ದೂರಸ್ಥ ಸಹಕಾರ ಇಂದು ಅನೇಕ ಕ್ಷೇತ್ರಗಳಲ್ಲಿ ಸಾಮಾನ್ಯವಾಗಿವೆ. ಒಂದೇ ತಂಡದ ಸದಸ್ಯರು ಬೇರೆ ಬೇರೆ ನಗರಗಳಲ್ಲಿ, ದೇಶಗಳಲ್ಲಿ ಇದ್ದರೂ ಒಂದೇ ಯೋಜನೆಯಲ್ಲಿ ಕೆಲಸ ಮಾಡಬಹುದು. ಇದರಿಂದ ಉದ್ಯೋಗದ ಭೌಗೋಳಿಕ ಗಡಿಗಳು ಸಡಿಲಗೊಂಡಿವೆ. ಪ್ರತಿಭೆ ಇರುವವರಿಗೆ ಅವಕಾಶಗಳ ವ್ಯಾಪ್ತಿಯೂ ವಿಸ್ತರಿಸಿದೆ.

ಆದರೆ ತಂತ್ರಜ್ಞಾನಕ್ಕೆ ಮಿತಿಯೂ ಅಗತ್ಯ. ಕೆಲಸದ ಸಮಯ ಮುಗಿದರೂ ಮೊಬೈಲ್ ಸಂದೇಶಗಳು, ಇಮೇಲ್‌ಗಳು ಮತ್ತು ಆನ್‌ಲೈನ್ ಸಭೆಗಳು ಮುಂದುವರಿದರೆ ವೈಯಕ್ತಿಕ ಬದುಕಿನ ನೆಮ್ಮದಿ ಕಳೆದುಹೋಗಬಹುದು. ತಂತ್ರಜ್ಞಾನ ನಮ್ಮ ಕೆಲಸವನ್ನು ನಿಯಂತ್ರಿಸಬಾರದು; ನಾವು ತಂತ್ರಜ್ಞಾನವನ್ನು ನಿಯಂತ್ರಿಸುವ ಕಲೆಯನ್ನು ಕಲಿಯಬೇಕು.

ಮುಂದಿನ ದಿನಗಳಲ್ಲಿ ಮನುಷ್ಯ ಮತ್ತು ಯಂತ್ರದ ನಡುವೆ ಸ್ಪರ್ಧೆಗಿಂತ ಸಹಕಾರವೇ ಮುಖ್ಯವಾಗಲಿದೆ. ಯಂತ್ರ ವೇಗ ನೀಡಬಹುದು; ಆದರೆ ಮಾನವೀಯತೆ, ವಿವೇಕ, ನೈತಿಕತೆ, ಸಹಾನುಭೂತಿ ಮತ್ತು ಸೃಜನಶೀಲತೆ ಮನುಷ್ಯನ ವಿಶೇಷ ಶಕ್ತಿಗಳಾಗಿಯೇ ಉಳಿಯುತ್ತವೆ.

ಹೀಗಾಗಿ ತಂತ್ರಜ್ಞಾನವನ್ನು ಭಯಪಡುವ ಬದಲು ಅದನ್ನು ಕಲಿಯಬೇಕು. ಬದಲಾವಣೆಯನ್ನು ತಡೆಯಲು ಸಾಧ್ಯವಿಲ್ಲ; ಆದರೆ ಅದರೊಂದಿಗೆ ಹೆಜ್ಜೆ ಹಾಕಬಹುದು. ಉದ್ಯೋಗದ ನಿಜವಾದ ಭದ್ರತೆ ಒಂದು ಹುದ್ದೆಯಲ್ಲಿ ಇಲ್ಲ; ನಿರಂತರವಾಗಿ ಕಲಿಯುವ ನಮ್ಮ ಸಾಮರ್ಥ್ಯದಲ್ಲಿದೆ.

ಕೆಲಸ ಕಡಿಮೆಯಾಗುತ್ತಿಲ್ಲ; ಕೆಲಸ ಮಾಡುವ ವಿಧಾನ ಮಾತ್ರ ಬದಲಾಗುತ್ತಿದೆ. ನಾಳೆಯ ಉದ್ಯೋಗ ಜಗತ್ತಿನಲ್ಲಿ ಗೆಲ್ಲುವವರು ಬದಲಾವಣೆಯನ್ನು ವಿರೋಧಿಸುವವರಲ್ಲ; ಬದಲಾವಣೆಯನ್ನು ಕಲಿತು, ಅಪ್ಪಿಕೊಂಡು, ಅದರೊಂದಿಗೆ ಬೆಳೆಯುವವರಾಗಿರುತ್ತಾರೆ.

## ಡಿಸಿಸಿ, ಡಿಎಲ್‌ಆರ್‌ಸಿ ಸಭೆ : ಜಿಲ್ಲಾ ವಾರ್ಷಿಕ ಸಾಲ ಯೋಜನೆ ಕುರಿತ ಚರ್ಚೆ

**ರಾಮನಗರ:** ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ವತಿಯಿಂದ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆ. 31ರ ಸೋಮವಾರ ನಡೆದ ಜೂನ್ 2026ಕ್ಕೆ ಅಂತ್ಯಗೊಂಡ ತ್ರೈಮಾಸಿಕಕ್ಕೆ ಸಂಬಂಧಿಸಿದ ಜಿಲ್ಲಾ ಸಲಹಾ ಸಮಿತಿ (ಡಿಸಿಸಿ) ಹಾಗೂ ಜಿಲ್ಲಾ ಮಟ್ಟದ ಪರಿಶೀಲನಾ ಸಮಿತಿ (ಡಿಎಲ್‌ಆರ್‌ಸಿ) ಸಭೆಯಲ್ಲಿ 2026?27ನೇ ಹಣಕಾಸು ವರ್ಷದ ಜಿಲ್ಲಾ ವಾರ್ಷಿಕ ಸಾಲ ಯೋಜನೆ ಕುರಿತು ಜಿಲ್ಲೆಯ ವಿವಿಧ ಕ್ಷೇತ್ರಗಳಿಗೆ ಸಾಲದ ಹರಿವು ಹೆಚ್ಚಿಸುವುದು ಹಾಗೂ ಹಣಕಾಸು ಒಳಗೊಳ್ಳುವಿಕೆಯನ್ನು ಬಲಪಡಿಸುವ ಕುರಿತು ಹಾಗೂ ಬೆಳೆ ಸಾಲ, ಕೃಷಿ ಮೂಲಸೌಕರ್ಯ, ನವೀಕರಿಸಬಹುದಾದ ಇಂಧನ, ಆದ್ಯತಾ ವಲಯದ ವಸತಿ, ಶಿಕ್ಷಣ ಹಾಗೂ ಸಾಮಾಜಿಕ ಭದ್ರತಾ ಯೋಜನೆಗಳಿಗೆ ಹೆಚ್ಚಿನ ಆದ್ಯತೆ ನೀಡುವ ಕುರಿತು ಸಮಗ್ರವಾಗಿ ಪರಿಶೀಲಿಸಿ ಚರ್ಚಿಸಲಾಯಿತು.

ಬ್ಯಾಂಕುಗಳ ಸಾಲ ಠೇವಣಿ (ಸಿಡಿ) ಅನುಪಾತ, ಎಸಿಪಿ ಗುರಿ ಮತ್ತು ಸಾಧನೆ, ಪಿಎಂಎಂವೈ ಸಾಲ ವಿತರಣೆ, ಸ್ವಸಹಾಯ ಸಂಘಗಳ ಸಾಲ ಸಂಪರ್ಕ ಹಾಗೂ ಪಿಎಂ ವಿಶ್ವಕರ್ಮ, ಪಿಎಂ ಸ್ವನಿಧಿ ಮತ್ತು ಪಿಎಂಇಜಿಪಿ ಯೋಜನೆಗಳ ಅನುಷ್ಠಾನದ ಪ್ರಗತಿ ಪರಿಶೀಲನೆ ನಡೆಯಿತು.

ಸಭೆಯಲ್ಲಿ ಬೆಂಗಳೂರು ದಕ್ಷಿಣ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಧನರಾಜ್, ಜಿಲ್ಲಾ ಮಾರ್ಗದರ್ಶಿ ಮುಖ್ಯ ವ್ಯವಸ್ಥಾಪಕ ಮೋಹನ್ ಕುಮಾರ್, ಭಾರತೀಯ ರಿಸರ್ವ್ ಬ್ಯಾಂಕ್‌ನ ಬೆಂಗಳೂರು ಕಚೇರಿಯ ಲೀಡ್ ಜಿಲ್ಲಾ ಅಧಿಕಾರಿ ಅರುಣ್ ಕುಮಾರ್ ಪಿ, ನಬಾರ್ಡ್ನ ಜಿಲ್ಲಾ ಅಭಿವೃದ್ಧಿ ಅಧಿಕಾರಿ ನೀನು ಸುರೇಶ್, ಬ್ಯಾಂಕ್ ಆಫ್ ಬರೋಡಾದ ಪ್ರಾದೇಶಿಕ ವ್ಯವಸ್ಥಾಪಕ ಸತೀಶ್ ಸಾಲುಂಕೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಬ್ಯಾಂಕಿಂಗ್ ಕ್ಷೇತ್ರದ ಪ್ರತಿನಿಧಿಗಳು ಸಭೆಯಲ್ಲಿ ಭಾಗವಹಿಸಿದ್ದರು.

# ಸೊಸೆಯನ್ನು ಗೆಲ್ಲಬೇಡಿ... ಅವಳ ಹೃದಯವನ್ನು ಗೆಲ್ಲಿ



| ಪುಷ್ಪ ಪ್ರಸಾದ್

ಕಾಲ ಕಳೆದಂತೆ ಅವಳಿಗೆ ಮಗು ಒಂದು ಹುಟ್ಟಿತು. ಮಗುವನ್ನು ಎತ್ತಿಕೊಂಡಾಗ ಅವಳ ಎಲ್ಲಾ ನೋವುಗಳು ಕ್ಷಣಕಾಲ ಮರೆಯಾಯಿತು. ಮಗು ನಗುವಾಗ ಅವಳೂ ನಗುತ್ತಿದ್ದಳು. ಆದರೆ ಮಗು ಮಲಗಿದ ನಂತರ ಅವಳು ಒಂಟಿಯಾಗಿ ಕುಳಿತುಕೊಂಡು ತನ್ನ ಕಣ್ಣೀರನ್ನು ಒರೆಸಿಕೊಳ್ಳುತ್ತಿದ್ದಳು. ಮಗುವಿಗೆ ತನ್ನ ತಾಯಿಯ ಕಣ್ಣೀರು ಕಾಣಬಾರದು ಎಂದು, ಅವಳಿಗೆ ತನ್ನ ನೋವಿಗಿಂತ ತನ್ನ ಮಗುವಿನ ಮನಸ್ಸಿನ ಬಗ್ಗೆ ಹೆಚ್ಚು ಭಯವಾಗಿತ್ತು. ?ನನ್ನ ಮಗು ದೊಡ್ಡವನಾದಾಗ ಅಮ್ಮ ಯಾಕೆ ಯಾವಾಗಲೂ ಮೌನವಾಗಿದ್ದಳು ಎಂದು ಕೇಳಬಾರದು..." ಎಂದುಕೊಂಡು ಅವಳು ಮತ್ತೆ ನಗಲು ಕಲಿತಳು.

ಒಂದು ರಾತ್ರಿ ಅವಳು ಗಂಡನನ್ನು ಕೇಳಿದಳು ?ನಾನು ಈ ಮನೆಯಲ್ಲಿ ನಿಮ್ಮವಳೇ ಅಲ್ಲವೇ?? ಗಂಡ ಆಶ್ಚರ್ಯದಿಂದ ನೋಡಿದ. ಅವಳು ಮುಂದುವರಿಸಿದಳು "ನಾನು ನಿಮ್ಮ ಮನೆಯವರಿಗಾಗಿ ಎಷ್ಟು ಬದಲಾಗಿದ್ದೇನೆ... ಆದರೆ ನನ್ನನ್ನು ಅರ್ಥಮಾಡಿಕೊಳ್ಳಲು ನೀವು ಒಮ್ಮೆ ಕೂಡ ನನ್ನ ಕಡೆ ನಿಂತು ನನ್ನ ಮಾತುಗಳನ್ನು ಕೇಳಲಿಲ್ಲ ನನ್ನ ಮೌನವನ್ನು ಅರ್ಥಮಾಡಿಕೊಳ್ಳಲಿಲ್ಲ.." ಅವಳ ಧ್ವನಿ ನಡುಗುತ್ತಿತ್ತು. ಅವಳು ಜಗಳ ಮಾಡುತ್ತಿರಲಿಲ್ಲ. ಅವಳು ತನ್ನ ಬದುಕಿನ ಕೊನೆಯ ನಿರೀಕ್ಷೆಯನ್ನೇ ಕೇಳುತ್ತಿದ್ದಳು. ಅವಳು ನೊಂದ ಮನಸ್ಸಿನಿಂದ ತನ್ನ ನೋವುಗಳನ್ನು ಹೇಳಿ ಅಳುತ್ತಿದ್ದಳು. ಆದರೂ ಗಂಡ ಮೌನವಾಗಿದ್ದ. ಆ ಮೌನವೇ ಅವಳಿಗೆ ಉತ್ತರವಾಗಿತ್ತು. ಅವಳಿಗೆ ಮನೆ ಬೇಕಿರಲಿಲ್ಲ, ಹಣ ಬೇಕಿರಲಿಲ್ಲ, ಚಿನ್ನವೂ ಬೇಕಿರಲಿಲ್ಲ. ಅವಳಿಗೆ ಬೇಕಾಗಿದ್ದು ಒಂದು ಗೌರವ, ಒಂದು ಪ್ರೀತಿಯ ಮಾತು. ತಾನು ಮಾಡಿದ ಕೆಲಸಕ್ಕೆ ಒಂದು "ಕೃತಜ್ಞತೆ ". ತಾನು ದಣಿದಾಗ ಯಾರಾದರೂ ಹತ್ತಿರ ಬಂದು "ನೀನು ಕುಳಿತುಕೋ ಸ್ವಲ್ಪ ಕುಳಿತುಕೊ ನಾನು ಮಾಡುತ್ತೇನೆ" ಎಂದು ಹೇಳುವವರು ಬೇಕಾಗಿತ್ತು. ತಾನು ತಪ್ಪು ಮಾಡಿದಾಗ ಅವಮಾನವಲ್ಲ, ಅರ್ಥಮಾಡಿಕೊಳ್ಳುವ ಮನಸ್ಸು ಮತ್ತು ಗಂಡನಿಂದ ಒಂದೇ ಒಂದು ಭರವಸೆ "ಏನೇ ಆಗಲಿ, ನಾನು ನಿನ್ನನ್ನು ಒಂಟಿಯಾಗಲು ಬಿಡುವುದಿಲ್ಲ. ನಿನ್ನ ಜೊತೆ ನಾನಿದ್ದೇನೆ" ಎಂಬ ಒಂದೇ ಒಂದು ಭರವಸೆಯ ಮಾತು ಬೇಕಿತ್ತು. ಅವಳ ಬೇಡಿಕೆಗಳು ಎಂದಿಗೂ ದೊಡ್ಡದಾಗಿರಲಿಲ್ಲ. ಆದರೆ ಅವಳಿಗೆ ಸಿಕ್ಕಿದ್ದು ಅವುಗಳಿಗಿಂತಲೂ ಕಡಿಮೆ. ಈಗ ಅವಳು ಹೆಚ್ಚು ಮಾತನಾಡುವುದಿಲ್ಲ. ಯಾರಾದರೂ ಏನಾದರೂ ಹೇಳಿದರೆ ತಕ್ಷಣ ಉತ್ತರಿಸುವುದಿಲ್ಲ. ?ಸರಿ, ಹೌದು, ನಿಮಗೆ ಹೇಗೆ ಬೇಕೋ ಹಾಗೆ.? ಇಷ್ಟು ಮಾತ್ರ.





ಎಲ್ಲರೂ ಹೇಳುತ್ತಾರೆ ?ಅವಳು ತುಂಬಾ ಬದಲಾಗಿದ್ದಾಳೆ." ಆದರೆ ಯಾರೂ ಕೇಳುವುದಿಲ್ಲ ?ಅವಳನ್ನು ಹೀಗೆ ಬದಲಾಯಿಸಿದ್ದು ಯಾರು?" ಕೆಲವು ಹೆಣ್ಣುಮಕ್ಕಳು ಮನೆ ಬಿಟ್ಟು ಹೋಗುವುದಿಲ್ಲ. ಅವರು ಮನೆಯಲ್ಲೇ ಇರುತ್ತಾರೆ... ಆದರೆ ತಮ್ಮ ಮನಸ್ಸನ್ನು ಆ ಮನೆಯೊಳಗಿಂದ ನಿಧಾನವಾಗಿ ಹೊರತೆಗೆದುಕೊಂಡು ಹೋಗುತ್ತಾರೆ. ಅವಳೂ ಕೂಡ ಹಾಗೆಯೇ ಮುಂದುವರೆದಳು.

ಒಬ್ಬ ಸೊಸೆ ನಿಮ್ಮ ಮನೆಗೆ ಬಂದಾಗ ಅವಳು ನಿಮ್ಮ ಮನೆಯ ಕೆಲಸ ಮಾಡಲು ಮಾತ್ರ ಸೇವಕಿಯಾಗಿ ಬರುವುದಿಲ್ಲ. ಅವಳು ತನ್ನ ಇಡೀ ಜೀವನವನ್ನೇ ನಿಮ್ಮ ಮನೆಯೊಂದಿಗೆ ಜೋಡಿಸಲು ಬರುತ್ತಾಳೆ. ಅವಳಿಂದ ತಪ್ಪುಗಳಾಗಬಹುದು. ಅವಳು ಪರಿಪೂರ್ಣಳಾಗಿರಲಾರಳು. ಆದರೆ ಅವಳನ್ನು ಪ್ರತಿದಿನ ಪರೀಕ್ಷೆಗೆ ನಿಲ್ಲಿಸಬೇಡಿ. ಅವಳು ನಿಮ್ಮ ಮನೆಗೆ ಬಂದ ದಿನ ತನ್ನ ತಾಯಿಯ ಮನೆಯನ್ನು ಕಳೆದುಕೊಂಡಿದ್ದಾಳೆ. ನೀವು ಅವಳಿಗೆ ಮತ್ತೊಂದು ಮನೆಯನ್ನೇ ಕೊಡುವ ಅಗತ್ಯವಿಲ್ಲ... "ಇದು ಕೂಡ ನಿನ್ನದೇ ಮನೆ? ಎಂಬ ಭಾವನೆ ಕೊಟ್ಟರೆ ಸಾಕು. ಒಂದು ದಿನ ಅವಳು ನಿಮ್ಮ ಮನೆಯ ಬಾಗಿಲಿನಿಂದ ಹೊರಟುಹೋಗಬಹುದು. ಆಗ ಅವಳಿಗೆ ನೀವು ಕೊಟ್ಟ ಚಿನ್ನ ನೆನಪಾಗದೇ ಇರಬಹುದು ಆದರೆ "ಈ ಮನೆಯಲ್ಲಿ ನಾನು ಮಗಳಂತೆ ಬದುಕಿದ್ದೆ' ಎಂಬ ಭಾವನೆ ಮಾತ್ರ ಅವಳ ಹೃದಯದಲ್ಲಿ ಜೀವನಪೂರ್ತಿ ಉಳಿಯುತ್ತದೆ. ಅವಳು ಸೊಸೆ ಎಂಬ ಕಾರಣಕ್ಕೆ ಅವಳಿಗೆ ಪ್ರೀತಿ ಕಡಿಮೆಯಾಗಬಾರದು. ಅವಳು ತನ್ನ ಮಗಳಲ್ಲ ಎಂಬ ಕಾರಣಕ್ಕೆ ಅವಳ ನೋವು ಚಿಕ್ಕದಾಗಬಾರದು. ಒಂದು ದಿನ ನಿಮ್ಮ ಮನೆಯಲ್ಲೇ ಹುಟ್ಟಿದ ಮಗಳು ಮತ್ತೊಂದು ಮನೆಗೆ ಸೊಸೆಯಾಗಿ ಹೋಗುತ್ತಾಳೆ. ಆ ದಿನ ನೆನಪಿಟ್ಟುಕೊಳ್ಳಿ, ಇಂದು ನೀವು ಮತ್ತೊಬ್ಬರ ಮಗಳನ್ನು ಸೊಸೆಯೆಂದು ಕೇವಲವಾಗಿ ನಡೆಸಿಕೊಳ್ಳುತ್ತಿದ್ದೀರಿ ಎಂದಾದರೆ, ನಾಳೆ ನಿಮ್ಮ ಮಗಳು ಬೇರೆ ಮನೆಯಲ್ಲಿ ಅದೇ ರೀತಿಯ ಕಷ್ಟ ಅನುಭವಿಸುತ್ತ ಇದೇ ಪ್ರೀತಿಯನ್ನು ಹುಡುಕುತ್ತಾಳೆ. ಆದ್ದರಿಂದ ಸೊಸೆಯನ್ನು ಗೆಲ್ಲಬೇಡಿ... ಅವಳ ಹೃದಯವನ್ನು ಗೆಲ್ಲಿ. ಅವಳನ್ನು ತನ್ನ ಮಗಳಂತೆ ಕಾಣಿರಿ, ಅವಳು ದಣಿದಾಗ, ಜ್ವರ ಬಂದಾಗ ವಿಶ್ರಾಂತಿ ಕೊಡಿ, ಅವಳಿಗೂ ಪ್ರೀತಿ ಕಾಳಜಿ ನೀಡಿರಿ, ಅವಳು ಕೂಡ ನಿಮ್ಮಲ್ಲಿ ಒಬ್ಬಳೆಂದು ಪರಿಗಣಿಸಿ.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,